ಸಂಪುಟ : 13 Volume | ಸಂಚಿಕೆ : 251 Issue | ಪುಟಗಳು : 08 Pages | ಶನಿವಾರ 22 ನವೆಂಬರ 2025 | ₹2 | PRGINO. 120927(RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಾವು ಇನ್ನೊಬ್ಬರ ಅಭಿಪ್ರಾಯಗಳನ್ನು ಒಪ್ಪಲೇ ಬೇಕೆಂದೇನೂ ಇಲ್ಲ. ಆದರೆ ಅವುಗಳನ್ನು ಗೌರವಿಸಲೇಬೇಕು.
ಟೇಲರ್ ಸ್ವಿಫ್ಟ್ ಗಾಯಕಿ.

4 ಟಿಪ್ಪು ಸುಲ್ತಾನ್ ಶೌರ್ಯ ಪರಾಕ್ರಮದ ಪ್ರತೀಕ | 2 ಹೊರ ರಾಜ್ಯದವರ ನೇಮಕಾತಿ | 8 ದಾಖಲಾಗಿರುವ ಪ್ರಕರಣಗಳ ದಂಡ ಶೇ.50 | 3 ಪ್ರತಿಭಾ ಕಾರಂಜಿ ಕಾರ್ಯಕ್ರಮ

# ಕುರ್ಚಿಯ ಕೈ ಕಲಹ ಕುತೂಹಲ



## ದಿಲ್ಲಿಗೆ ಬಂದ ಶಾಸಕರಿಗೆ ವರಿಷ್ಠ ಖರ್ಗೆ ಎಚ್ಚರಿಕೆ,ಮುಗಿಯದ ಅಧಿಕಾರ ಹಂಚಿಕೆಯ ಜಗಳ

**ಮಲ್ಲಮ್ಮ ನುಡಿ ವಾರ್ತೆ**

**ಬೆಂಗಳೂರು:** ರಾಜ್ಯ ಕಾಂಗ್ರೇಸ್ ಪಕ್ಷದಲ್ಲಿ ಖುರ್ಚಿಯ ಕದನ ತಾರಕಕ್ಕೆ ಏರಿದೆ ಎರಡುವರೆಯ ವರ್ಷದ ಅಧಿಕಾರದ ಹಂಚಿಕೆಯ ವಿಷಯ ಕಾಂಗ್ರೇಸ್ ನಾಯಕರಿಗೆ ಬಿಸಿ ತುಪ್ಪವಾಗಿ ಪರಿಣಮೀಸಿದೆ. ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬೆಂಬಲಿಗ ಶಾಸಕರು ದೆಹಲಿಯಲ್ಲಿ ಬೀಡು ಬಿಟ್ಟು ಮುಖ್ಯಮಂತ್ರಿ ಪಟ್ಟಕ್ಕಾಗಿ ಒತ್ತಡ ಹೆಚ್ಚಿಸುತ್ತಿರುವಾಗಲೇ, ಇತ್ತ ಸಿದ್ದರಾಮಯ್ಯ ಬಣದಲ್ಲಿ ದುಗುಡ ಹೆಚ್ಚಾಗಿದೆ.ಇಂದು ಬೆಳಗ್ಗೆ ವಸತಿ ಸಚಿವರು ಆಗಿರುವ ಸಿದ್ದರಾಮಯ್ಯ ಅವರ ಆಪ್ತ ಜಮೀರ್ ಅಹದ್ ಖಾನ್ ಮುಖ್ಯಮಂತ್ರಿಯವರ ಗೃಹ ಕಚೇರಿ ಕಾವೇರಿಗೆ ಆಗಮಿಸಿ ರಹಸ್ಯ ಮಾತುಕತೆ ನಡೆಸಿದ್ದಾರೆ. ದೆಹಲಿಯ ಬೆಳವಣಿಗೆಗಳ ಬಗ್ಗೆ ತಮ ಆತಂಕ ಹೊರಹಾಕಿದ್ದಾರೆ.ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆತವಿಶ್ವಾಸದಿಂದಲೇ ಪ್ರತಿಕ್ರಿಯಿಸಿದ್ದು, ಏನು ಆಗುವುದಿಲ್ಲ ಧೈರ್ಯವಾಗಿರಿ. ನೀವೆಲ್ಲ ಒಟ್ಟಾಗಿರಿ ಎಂದು ಸಮಾಧಾನ ಹೇಳಿರುವುದಾಗಿ ತಿಳಿದು ಬಂದಿದೆ. ಅದೇ ರೀತಿ ಸಿದ್ದರಾಮಯ್ಯ ಅವರನ್ನು ನಂಬಿಕೊಂಡಿದ್ದ ಬಹಳಷ್ಟು ಮಂದಿ ಶಾಸಕರು, ಸಚಿವರು ಡಿ.ಕೆ. ಬಣದ ಶಾಸಕರ ದೆಹಲಿ ಯಾತ್ರೆಯ ಬಳಿಕ ಗೊಂದಲಕ್ಕೆ ಒಳಗಾಗಿದ್ದಾರೆ. ಪ್ರಸ್ತುತ ಸಂದರ್ಭದಲ್ಲಿ ಯಾರು? ಯಾರ ಕಡೆ ನಿಲ್ಲಬೇಕು? ಎಂಬ ಸ್ಪಷ್ಟತೆ ಇಲ್ಲದೆ ತ್ರಿಶಂಕು ಸ್ಥಿತಿಗೆ ತಲುಪಿದ್ದಾರೆ.

### ಐದು ವರ್ಷ ನಾನೇ ಸಿಎಂ: ಸಿದ್ದು

ಐದು ವರ್ಷ ನಾನೇ ಸಿಎಂ ಎಂದ ಸಿದ್ದರಾಮಯ್ಯ: ಮೇ 20, 2023 ರಂದು ವಿಧಾನಸಭಾ ಚುನಾವಣಾ ಫಲಿತಾಂಶ ಘೋಷಣೆಯಾದ ನಂತರ ಮುಖ್ಯಮಂತ್ರಿ ಹುದ್ದೆಗೆ ಸಿದ್ದರಾಮಯ್ಯ ಮತ್ತು ಶಿವಕುಮಾರ್ ನಡುವೆ ತೀವ್ರ ಪೈಪೋಟಿ ನಡೆದಿತ್ತು. ಆಗ ಹೈಕಮಾಂಡ್ ಡಿಕೆ ಶಿವಕುಮಾರ್ ಅವರ ಮನವೊಲಿಸಿ ಉಪಮುಖ್ಯಮಂತ್ರಿಯನ್ನಾಗಿ ಮಾಡಿತ್ತು. ಅಲ್ಲದೇ ಅಧಿಕಾರ ಹಂಚಿಕೆ ಸೂತ್ರದ ಆಧಾರದ ಮೇಲೆ ರಾಜಿ ಮಾಡಿಕೊಳ್ಳಲಾಗಿದೆ. ಅದರ ಪ್ರಕಾರ ಶಿವಕುಮಾರ್ ಎರಡೂವರೆ ವರ್ಷಗಳ ನಂತರ ಸಿಎಂ ಆಗುತ್ತಾರೆ ಎನ್ನಲಾಗಿತ್ತು. ಆದರೆ ಪಕ್ಷ ಅಧಿಕೃತವಾಗಿ ಏನನ್ನೂ ಹೇಳಿರಲಿಲ್ಲ. ಆದಾಗ್ಯೂ, ಈ ವರದಿಗಳನ್ನು ಸಿದ್ದರಾಮಯ್ಯ ನಿರಾಕರಿಸಿದ್ದು, ಐದು ವರ್ಷಗಳ ಕಾಲ ನಾನೇ ಮುಖ್ಯಮಂತ್ರಿಯಾಗಿರುತ್ತೇನೆ ಎಂದು ಹೇಳುತ್ತಿದ್ದಾರೆ.




### ಸೋನಿಯಾ, ರಾಗ ಭೇಟಿ ಮಾಡಿ

ಖರ್ಗೆ ಪದೇ ಪದೇ ದಿಲ್ಲಿಗೆ ಏಕೆ ಬರುತ್ತೀರಿ. ಕ್ಷೇತ್ರದಲ್ಲಿ ಉಳಿದು ಅಭಿವೃದ್ಧಿ ಕಾರ್ಯ ಮಾಡಬೇಕು ಎಂದು ಕಾಂಗ್ರೆಸ್ ವರಿಷ್ಠ ಮಲ್ಲಿಕಾರ್ಜುನ ಖರ್ಗೆ ಶಾಸಕರಿಗೆ ಸೂಚಿಸಿದ್ದಾರೆ. ಡಿಕೆಶಿ ಪರ ಬ್ಯಾಟ್ ಮಾಡಲು ಬಂದ ಶಾಸಕರಿಗೆ ಮನನ ಅರ್ಮಿಕ ಎಚ್ಚರಿಕೆ ನೀಡಿದ ಅವರು, ಏನೇ ಹೆಚ್ಚಿನ ದೂರು, ಬೇಡಿಕೆ ಇದ್ದರೂ ಪಕ್ಷದ ವರಿಷ್ಠೆ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿರಿ. ನಾನು ಕೂಡ ಪಕ್ಷಕ್ಕಾಗಿ ದುಡಿದಿದ್ದೇನೆ ಎಂದು ವಿವರಿಸಿದ್ದಾರೆ.

### ಕುಟುಕಿದ ನಾಯಕ ಅಶೋಕ್

ನನ್ನ ಬೆಂಬಲಕ್ಕೆ ನಿಲ್ಲದಿದ್ದರೆ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಸ್ಥಗಿತ ಹಾಗೂ ಸಚಿವ ಸಂಪುಟದಿಂದ ಕಿತ್ತೆಸೆಯುತ್ತೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಾಸಕರು ಮತ್ತು ಸಚಿವರಿಗೆ ಧಮ್ಕಿ ಹಾಕುತ್ತಿದ್ದಾರೆ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಗಂಭೀರ ಆರೋಪ ಮಾಡಿದ್ದಾರೆ. ನಾಯಕತ್ವ ಬದಲಾವಣೆ ವಿಷಯ ಬಂದರೆ ಎಲ್ಲರೂ ನನ್ನ ಬೆಂಬಲಕ್ಕೆ ನಿಲ್ಲಬೇಕೆಂದು ಹೇಳುತ್ತಿದ್ದಾರೆ. ಯಾರು ನನ್ನ ಪರವಾಗಿ ಇರುವುದಿಲ್ಲವೋ ಅಂಥ ಶಾಸಕ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡುವುದಿಲ್ಲ. ಅಲ್ಲದೆ ಸಚಿವರನ್ನು ಸಂಪುಟದಿಂದ ಕಿತ್ತು ಹಾಕುತ್ತೇನೆ ಎಂದು ಬೆದರಿಕೆವೊಡ್ಡಿದ್ದಾರೆ ಎಂದು ಆರೋಪಿಸಿದ್ದಾರೆ.

### ಮಾಡಿದ ಕೆಲಸಕ್ಕೆ ಕೂಲಿ

ವೇದಿಕೆಯ ಕಾರ್ಯಕ್ರಮದಲ್ಲಿ ಕೈ ಕೈ ಹಿಡಿದುಕೊಂಡು ಪರಸ್ಪರ ಆತಿಯರಾಗಿ ಮಾತುಕತೆ ನಡೆಸುತ್ತಾರೆ. ಡಿ.ಕೆ.ಶಿವಕುಮಾರ್ ಎಲ್ಲಿಯೂ ತಮಗೆ ಅವಕಾಶ ವಂಚನೆಯಾಗಿದೆ ಎಂಬ ಅಸಮಾಧಾನವನ್ನು ಹೊರಹಾಕಿಲ್ಲ. ಈ ಕ್ಷಣದವರೆಗೂ ಪಕ್ಷ ನಿಷ್ಠೆ ಬಗ್ಗೆಯೇ ಹೆಚ್ಚು ಮಾತನಾಡುತ್ತಿದ್ದಾರೆ. ಸಿದ್ದರಾಮಯ್ಯ ಅವರ ವಿರುದ್ಧ ಒಂದೇ ಒಂದು ಶಬ್ದವನ್ನು ಬಳಕೆ ಮಾಡಿಲ್ಲ. 2023ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್? ಬಹುಮತ ಪಡೆದು ಸರ್ಕಾರ ರಚಿಸುವ ಮುನ್ನಾ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಬಗ್ಗೆ ಗೊಂದಲದ ಪರಿಸ್ಥಿತಿ ಇತ್ತು. ಆ ಸಂದರ್ಭದಲ್ಲಿ ದೆಹಲಿಯ ಸಂಧಾನ ಮಾತು ಕತೆಗೆ ತೆರಳುವ ಮುನ್ನ ಡಿ.ಕೆ.ಶಿವಕುಮಾರ್ ತಾವು ಮಾಡಿದ ಕೆಲಸಕ್ಕೆ ಹೈಕಮಾಂಡ್ ಬಳಿ ಕೂಲಿ ಕೇಳುವುದಾಗಿ ಹೇಳಿದ್ದಾರೆ.

### ಕೂಲ್ ಕೂಲ್ ಡಿಕೆಶಿ

ಶಾಸಕರ ದೆಹಲಿ ಯಾತ್ರೆ ಕಾಂಗ್ರೆಸ್‌ನಲ್ಲಿ ಕಾವೇರಿದ ವಾತಾವರಣ ನಿರ್ಮಾಣ ಮಾಡಿದ್ದರೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮಗೂ ಇದಕ್ಕೂ ಸಂಬಂಧವೇ ಇಲ್ಲ ಎಂಬಂತೆ ಮನೆಯಲ್ಲೇ ಉಳಿಯುವ ಮೂಲಕ ಕುತೂಹಲ ಕೆರಳಿಸಿದ್ದಾರೆ. ಅನಾರೋಗ್ಯದ ಕಾರಣಕ್ಕಾಗಿ ಡಿ.ಕೆ. ಶಿವಕುಮಾರ್ ಮನೆಯಲ್ಲೇ ಉಳಿದಿದ್ದಾರೆ ಎಂಬ ಮಾಹಿತಿ ದೊರೆತಿದೆ. ಆದರೆ ಅಷ್ಟು ಸುಲಭಕ್ಕೆ ಡಿ.ಕೆ.ಶಿವಕುಮಾರ್ ಮನೆಯಲ್ಲಿ ಕುಳಿತುಕೊಳ್ಳುವ ರಾಜಕಾರಣಿ ಅಲ್ಲ. ಎಷ್ಟೋ? ಬಾರಿ ಅನಾರೋಗ್ಯದ ನಡುವೆಯೂ ಕೈಗೆ ಬ್ಯಾಂಡೆಡ್ ಕಟ್ಟಿಕೊಂಡು, ಡ್ರಿಪ್ ಹಾಕಿಸಿಕೊಂಡಿದ್ದ ಸೂಚಿಯೊಂದಿಗೆ ಕಾರ್ಯಕ್ರಮಗಳಲ್ಲಿ ಭಾಗವಹಿಸಿರುವ, ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಂಡಿರುವ ಹಲವು ಉದಾಹರಣೆಗಳಿವೆ.

### ಬಣ ರಾಜಕೀಯ ಜೋರು

ಸಚಿವರಾದ ಕೆ.ಜೆ.ಜಾರ್ಜ್, ಶಾಸಕರಾದ ಕೊನರೆಡ್ಡಿ, ಯಾಸೀರ್ ಪಠಾಣ್ ಸೇರಿದಂತೆ ಅನೇಕ ಶಾಸಕರು ಮುಖ್ಯಮಂತ್ರಿಯವರ ಮನೆಗೆ ಭೇಟಿ ನೀಡಿದ್ದಾರೆ. ರಾಜ್ಯ ರಾಜಕಾರಣದಲ್ಲಿ ಈ ರೀತಿಯ ಹಲವಾರು ಸಂದರ್ಭಗಳು ಕರ್ನಾಟಕದಲ್ಲಿ ಘಟಿಸಿವೆ. ಕಾಂಗ್ರೆಸ್‌ನಲ್ಲಿ ಗೊಂದಲಗಳಿಲ್ಲ, ಎಲ್ಲರೂ ಒಟ್ಟಾಗಿದ್ದೇವೆ ಎಂದು ಹೇಳುವ ನಡುವೆಯೇ ಬಣ ರಾಜಕೀಯಗಳು ತಾರಕಕೇರಿದೆ. ಪಕ್ಷದಲ್ಲಿ ಟ್ರಬಲ್ ಶೂಟರ್ ಎಂದು ಗುರುತಿಸಿಕೊಂಡಿರುವ ಡಿಕೆ ಶಿವಕುಮಾರ್ ಅವರ ರಾಜಕೀಯ ತಾಂತ್ರಿಕತೆ ಹಲವರಿಗೆ ಮಿಲಿಯನ್ ಡಾಲರ್ ಪ್ರಶ್ನೆಯಾಗಿದೆ. ಮೇಲ್ನೋಟಕ್ಕೆ ಸಿದ್ದರಾಮಯ್ಯ ಅವರ ಜೊತೆಯಲ್ಲಿ ಡಿ.ಕೆ.ಶಿವಕುಮಾರ್ ಜಂಟಿ ಪ್ರವಾಸ ಮಾಡುತ್ತಿದ್ದಾರೆ.

## ಮೂರು ತಿಂಗಳಲ್ಲಿ ಇ ಖಾತಾ ವಿತರಿಸುವ ಭರವಸೆ



**ಮಲ್ಲಮ್ಮ ನುಡಿ ವಾರ್ತೆ**

**ಬೀದರ್:** ಔರಾದ ಮೂರು ತಿಂಗಳ ಒಳಗಾಗಿ ಬಸನವಾಡಿ ಹಾಗೂ ಮಾನಸಿಂಗ್ ತಾಂಡಾ ನಿವಾಸಿಗಳಿಗೆ ಸರ್ಕಾರಿ ಭೂಮಿಯ ಇ ಖಾತಾ ನೀಡಲಾಗುವುದು ಎಂದು ಔರಾದ ತಹಸಿಲ್ದಾರರು ಹಾಗೂ ಎಸಿ ಅವರು ಭರವಸೆ ನೀಡಿದ್ದಾರೆ ಎಂದು ಪ.ಪಂ. ಸದಸ್ಯ ಶಿವಾಜಿ ರಾಠೋಡ ತಿಳಿಸಿದ್ದಾರೆ. ಈ ಕುರಿತು ನಗರದ ರವೀಂದ್ರ ಸ್ವಾಮಿ ಅವರ ಗೃಹ ಕಚೇರಿಯಲ್ಲಿ ಅವರಿಂದ ಸನ್ಮಾನ ಸ್ವೀಕರಿಸಿದ ಅವರು ಸುಮಾರು ಒಂಭತ್ತು ತಾಂಡಾ ನಿವಾಸಿಗಳಿಗೆ ಒಂದು ತಿಂಗಳ ಒಳಗಾಗಿ ಇ ಖಾತಾ ನೀಡಲಾಗುವುದು

2ನೇ ಪುಟ ನೋಡಿ

## ಕೆಯುಡಬ್ಲ್ಯೂಜೆ ರಾಜ್ಯ ಮಟ್ಟದ ಅಧಿಕಾರ ಸ್ವೀಕಾರ ಸಮಾರಂಭ 24ಕ್ಕೆ

**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು:ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ನೂತನ ಸಾಲಿನ ಪದಾಧಿಕಾರಿಗಳ ರಾಜ್ಯ ಮಟ್ಟದ ಅಧಿಕಾರ ಸ್ವೀಕಾರ ಸಮಾರಂಭ ನ.24ರಂದು ಬೆಳಿಗ್ಗೆ 11 ಗಂಟೆಗೆ ಗಾಂಧಿ ಭವನದಲ್ಲಿ ಆಯೋಜಿಸಲಾಗಿದೆ. ಕಾನೂನು ಮತ್ತು ಸಂಸದೀಯ ಸಚಿವರಾದ ಎಚ್.ಕೆ.ಪಾಟೀಲ್ ಅವರು ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದು, ಪ್ರಮಾಣ ವಚನ ಬೋಧನೆ ಮಾಡುವರು. ಹಿರಿಯ ಪತ್ರಕರ್ತೆ ನಾಗಮಣಿ ಎಸ್ ರಾವ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಮತ್ತು ಗಾಂಧಿ ಭವನದ ಅಧ್ಯಕ್ಷರಾದ ವೂಡೆ ಪಿ ಕೃಷ್ಣ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಲಿದ್ದಾರೆ.

ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಎಲ್ಲಾ ಜಿಲ್ಲಾ ಘಟಕಗಳ ನೂತನ ಸಾಲಿನ ಪದಾಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಬೇಕು ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕಾಂಗ್ರೆಸ್ ಹಿರಿಯ ನಾಯಕ ಬಿಕೆ ಹರಿಪ್ರಸಾದ್ ಸಚಿವ ಜಮೀರ್ ಅಹಮದ್ ಖಾನ್ ಅವರನ್ನು ಭೇಟಿ ಮಾಡಿ ಚರ್ಚಿಸಿದರು.

## ಕಾಂಗ್ರೆಸ್ ಸರಕಾರ ಹೋಳು: ಜನರ ಪಾಲಿಗೆ ಗೋಳು, ರೈತರಿಗೆ ಹೂಳು: ಆರ್.ಅಶೋಕ್ ಟೀಕೆ



**ಮಲ್ಲಮ್ಮ ನುಡಿ ವಾರ್ತೆ**

ಬೆಂಗಳೂರು: ಕಾಂಗ್ರೆಸ್ ಸರಕಾರ ಹೋಳು; ಜನರ ಪಾಲಿಗೆ ಗೋಳು, ರೈತರಿಗೆ ಹೂಳು ಎಂದು ವಿಧಾನಸಭೆಯ ವಿಪಕ್ಷ ನಾಯಕ ಆರ್.ಅಶೋಕ ಅವರು ಟೀಕಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು 'ವರ್ಷ ಎರಡುವರೆ ಕನ್ನಡಿಗರಿಗೆ ಬಲು ಹೊರೆ' 'ಕಾಂಗ್ರೆಸ್ ಕರ್ಮಕಾಂಡಗಳ ಅನಾವರಣ' ಕುರಿತ ವಿಡಿಯೋ ಬಿಡುಗಡೆ ಮಾಡಿದ ಬಳಿಕ ಅವರು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು. ಇದೇ ವೇಳೆ ಸರಕಾರದ ವಿರುದ್ಧ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಡಿ.ಕೆ.ಶಿವಕುಮಾರ್ ಅವರು ಕಾಯಿಲೆ ಬಿದ್ದು ಸೊರಗಿ ಡ್ರಿಪ್ ಹಾಕಿಸಿಕೊಂಡು ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ದೆಹಲಿಗೆ ಹೋದವರಿಗೆ 'ಕ್ಯಾಬಿನೆಟಿನಿಂದ ವಜಾ ಮಾಡುವುದಾಗಿ' ಬೆದರಿಕೆ ಹಾಕಿದ್ದಾರೆ. ಶಾಸಕರ ನಿಧಿ ಕೊಡುವುದಿಲ್ಲ ಎಂದು ಧಮ್ಕಿ ಹಾಕಿರುವುದು ಕೂಡ ಮಾಧ್ಯಮಗಳಲ್ಲಿ ಬರುತ್ತಿದೆ ಎಂದು ವಿವರಿಸಿದರು. ಒಂದು ಕಡೆ ಡಿ.ಕೆ.ಶಿವಕುಮಾರ್ ದೆಹಲಿಗೆ ಹೋಗಿ ಎನ್ನುತ್ತಾರೆ. ಇನ್ನೊಂದೆಡೆ ಸಿದ್ದರಾಮಯ್ಯನವರು ದೆಹಲಿಗೆ ಯಾಕೆ ಹೋದೆ ಎಂದು ಕೇಳುತ್ತಿದ್ದಾರೆ. ಇದು ಕಾಂಗ್ರೆಸ್ ಪಕ್ಷದ ಎರಡುವರೆ ವರ್ಷದ ಓಳು ಎಂದು ವ್ಯಂಗ್ಯವಾಡಿದರು. ಕಾಂಗ್ರೆಸ್ ಸರಕಾರ ಹೋಳು; ಜನರ ಪಾಲಿಗೆ ಗೋಳು, ರೈತರಿಗೆ ಹೂಳುವ ಪರಿಸ್ಥಿತಿ ತಂದಿದ್ದಾರೆ ಎಂದು ಆರೋಪಿಸಿದರು.

ವರೆ ವರ್ಷವಲ್ಲ; ವರಿ ವರ್ಷ, ಜನತೆಗೆ ಹೊರೆ ಬರೆ

ವರೆ ವರ್ಷ ಸಿದ್ದರಾಮಯ್ಯ - ಡಿ.ಕೆ.ಶಿವಕುಮಾರ್ ಅವರಿಗೆ ಪೂರ್ತಿ ವರಿ ತಂದಿದೆ. ರಾಜ್ಯದ ಜನರ ಪಾಲಿಗೆ ಇದು ಬೆಲೆ ಏರಿಕೆಯ ಹೊರೆ, ಜನರಿಗೆ ಬರೆ ಎಂದು ಆಕ್ಷೇಪಿಸಿದರು. ಜಿಎಟಿಯನ್ನು ನರೇಂದ್ರ ಮೋದಿಜೀ ಅವರು ಕಡಿಮೆ ಮಾಡಿ, ತುಪ್ಪ ತಿನ್ರಪ್ಪ, ಆರೋಗ್ಯ ಒಳ್ಳೆಯದಾಗಲೆಂದು ಜಿಎಟಿ ಪ್ರಮಾಣ ಕಡಿಮೆ ಮಾಡಿದ್ದರು. ಕಾಂಗ್ರೆಸ್ಸಿ ನವರು ಆ ತುಪ್ಪದ

2ನೇ ಪುಟ ನೋಡಿ

## ಕೊಲೆ ಯತ್ನ ಆರೋಪದಲ್ಲಿ ಬಿಜೆಪಿ ಮುಖಂಡ ಮಣಿಕಂಠ ಬಂಧನ

**ಮಲ್ಲಮ್ಮ ನುಡಿ ವಾರ್ತೆ**

**ಕಲಬುರಗಿ:** ಕೊಲೆಯತ್ನ ಆರೋಪದಲ್ಲಿ ಬಿಜೆಪಿ ಮುಖಂಡ, ರೌಡಿಶೀಟರ್ ಮಣಿಕಂಠ ರಾಠೋನನ್ನು ನೆಲೋಗಿ ಪೊಲೀಸರು ತಡರಾತ್ರಿ ಬಂಧಿಸಿದ್ದಾರೆ.

ಜಿಲ್ಲೆಯ ಅಫಜಲಪುರ ತಾಲೂಕಿನ ಮಾಶಾಳ ಗ್ರಾಮದಲ್ಲಿ ಜೇವರ್ಗಿ ತಾಲೂಕಿನ ನೆಲೋಗಿ ಪೊಲೀಸರು ತಡರಾತ್ರಿ ಕಾರ್ಯಾಚರಣೆ ನಡೆಸಿ ಮಣಿಕಂಠ ರಾಠೋನನ್ನು ಬಂಧಿಸಿದ್ದಾರೆ. ಸದ್ಯ ಮಣಿಕಂಠ ರಾಠೋನನ್ನು ನ್ಯಾಯಾಲಯವು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

**ಏನಿದು ಪ್ರಕರಣ?** ನಾಟಿ ಔಷಧಿ ಕೊಡುತ್ತಿದ್ದ ರಶೀದ್ ಮತ್ಯಾ ಎಂಬಾತನ ಬಂಧನಕ್ಕೆ ಆಗ್ರಹಿಸಿ ಮಣಿಕಂಠ ಜೇವರ್ಗಿ ತಾಲೂಕಿನ ನಾರಾಯಣಪುರ ಗ್ರಾಮದಲ್ಲಿ ರಶೀದ್

2ನೇ ಪುಟ ನೋಡಿ

## ಅಪರಿಚಿತ ವಾಹನ ಡಿಕ್ಕಿ: ಬೈಕ್ ಸವಾರ ಸಾವು

**ಮಲ್ಲಮ್ಮ ನುಡಿ ವಾರ್ತೆ**

ಕಲಬುರಗಿ: ಇಲ್ಲಿಗೆ ಸಮೀಪದ ಶರಣ ಸಿರಸಗಿ ಹತ್ತಿರ ಅಪರಿಚಿತ ವಾಹನ ಡಿಕ್ಕಿ ಹೊಡೆದು ಬೈಕ್ ಸವಾರ ಸಾವಿಗೀಡಾಗಿದ್ದಾನೆ.

ಮೃತ ಬೈಕ್ ಸವಾರರನ್ನು ಕಲಬುರಗಿ ನಿವಾಸಿ ಸತೀಶಕುಮಾರ ವಿಜಯಕುಮಾರ ತಳವಾರ ಎಂದು ಗುರುತಿಸಲಾಗಿದೆ

ಗಾಣಗಾಪುರ ಕಡೆಗೆ ಬೈಕ್ ಮೇಲೆ ಹೊರಟಾಗ ಹಿಂದಿನಿಂದ ಬಂದ ಅಪರಿಚಿತ ವಾಹನ ಡಿಕ್ಕಿ ಹೊಡೆದು ಅವಘಡ ಸಂಭವಿಸಿದೆ.ಕಲಬುರಗಿ ಸಂಚಾರಿ ಠಾಣೆ 1 ರಲ್ಲಿ ಪ್ರಕರಣ ದಾಖಲಾಗಿದೆ

## ಉತ್ತಮ ಆರೋಗ್ಯಕ್ಕೆ ಸಕಾಲದ ನಿಸರ್ಗದ ಕರೆಗಳು ಪೂರೈಸಬೇಕು : ಶಾಸಕ ತುನ್ನೂರು



**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ:** ಉತ್ತಮ ಆರೋಗ್ಯಕ್ಕೆ ಹಲವು ಮಾರ್ಗಗಳೊಂದಿಗೆ ನಿಸರ್ಗದ ಕರೆಗಳು ಸಕಾಲಕ್ಕೆ ಪೂರೈಸಿಕೊಳ್ಳುವುದು ಅಷ್ಟೇ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ನಗರದ ವಿವಿಧ ಮುಖ್ಯ ಸ್ಥಳದಲ್ಲಿ ನಿರ್ಮಾಣಗೊಂಡಿರುವ ಆಸ್ಪಿರೇಷನಲ್ ಶೌಚಾಲಯ ಹಾಗೂ ಸಾರ್ವಜನಿಕ ಶೌಚಾಲಯ ಸದುಪಯೋಗವಾಗಲಿ ಎಂದು ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದರು. ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಹೇಳಿದರು 2023-24ನೇ ಸಾಲಿನ ಎಸ್ ಬಿಎಮ್

2ನೇ ಪುಟ ನೋಡಿ

## ಢಾಕಾ ಟೆಸ್ಟ್ ಗೂ ಭೂಕಂಪನ ಎಫೆಕ್ಟ್; ಮೈದಾನದಲ್ಲಿದ್ದವರು ಚಲ್ಲಾಪಿಲ್ಲಿ; ಪ್ರೆಸ್ ಬಾಕ್ಸ್ ನಿಂದ ಎದ್ದು ಬಿದ್ದೋಡಿದ ಪತ್ರಕರ್ತರು

## ಒಂದನೇ ಪುಟದಿಂದ

## ಇ ಖಾತಾ ವಿತರಿಸುವ ಭರವಸೆ

ಎಂದು ಪ.ಪಂ. ಮುಖ್ಯಾಧಿಕಾರಿ ಭರವಸೆ ನೀಡಿದ್ದಕ್ಕಾಗಿ ಧರಣಿ ವಾಪಸ್ ಪಡೆದಿದ್ದೇವೆ. ಸರ್ಕಾರ ತಾಂಡಾ ನಿವಾಸಿಗಳಿಗೆ ಇ ಖಾತಾ ನೀಡಬೇಕೆಂದು ಆದೇಶಿಸಿದರೂ ಪ.ಪಂ. ಹಾಗೂ ತಹಸಿಲ್ ಕಚೇರಿ ವತಿಯಿಂದ ನಿರ್ಲಕ್ಷ್ಯ ಮಾಡಲಾಗುತಿತ್ತು. ಸ್ಥಳೀಯ ಶಾಸಕರು ನಾಲ್ಕು ಬಾರಿ ಆಯ್ಕೆಯಾದರೂ ನಮ್ಮ ಸಮಸ್ಯೆಗಳಿಗೆ ಸ್ಪಂದಿಸಿಲ್ಲ. ಕ್ಷೇತ್ರದಲ್ಲಿ ಯಾವುದೇ ಜನಪರ ಕಾರ್ಯಗಳಾಗುತ್ತಿಲ್ಲ ಎಂದು ಅಸಮಾಧಾನ ಹೊರಹಾಕಿದರಲ್ಲದೆ ತಹಶಿಲ್ದಾರರು, ಸಹಾಯಕ ಆಯುಕ್ತರು ಹಾಗೂ ಪ.ಪಂ. ಮುಖ್ಯಾಧಿಕಾರಿ ನಮಗೆ ನೀಡಿರುವ ಭರವಸೆ ಈಡೇರಿಸಿ ನ್ಯಾಯ ಒದಗಿಸಲಿ ಎಂದರು.

ಮುಖಂಡರಾದ ದಿನೇಶ ರಾಠೋಡ ಮಾತನಾಡಿ ನಾವು ಔರಾದ ತಹಸಿಲ್ ಕಚೇರಿ ಆವರಣದಲ್ಲಿ ನ. 19 ರಿಂದ ನಮ್ಮ ಹಕ್ಕಿಗಾಗಿ ಧರಣಿ ಆರಂಭಿಸಿದೇವು. ಎರಡನೇ ದಿವಸಕ್ಕೆ ಅಧಿಕಾರಿಗಳು ಭರವಸೆ ನೀಡಿದ್ದಕ್ಕಾಗಿ ಪ್ರತಿಭಟನೆ ಹಿಂಪಡೆದಿದ್ದೇವೆ ಎಂದರು.

ಧರಣಿ ನಡೆಸಿ ನ್ಯಾಯ ಪಡೆದುಕೊಂಡ ತಾಂಡಾ ನಿವಾಸಿ ಮುಖಂಡರಿಗೆ ಸನ್ಮಾನಿಸಿದ ಬಳಿಕ ಮಾತನಾಡಿದ ಏಕತಾ ಫೌಂಡೇಶನ್ ಅಧ್ಯಕ್ಷ ರವೀಂದ್ರ ಸ್ವಾಮಿ ಮಾತನಾಡಿ ನಾನು ಯಾವಾಗಲೂ ಔರಾದ ಹಾಗೂ ಕಮಲನಗರ ಜನತೆಯ ಜೊತೆ ಸದಾ ನಿಲ್ಲುತ್ತೇನೆ. ಜಾತಿ ಭೇದ ಮರೆತು ಎಲ್ಲರೊಂದಿಗೆ ಇದ್ದೇನೆ. ಬಂಜಾರಾ ಸಮುದಾಯ ಕಳೆದ ಹಲವು ವರ್ಷಗಳಿಂದ ಸಮಸ್ಯೆಗಳ ಸುಳಿಯಲ್ಲಿ ಸಿಲುಕಿದ್ದು, ತಾಂಡಾಗಳ ಅಭಿವೃದ್ಧಿ ಆಗಿಲ್ಲ. ಆದ್ದರಿಂದ ಬಂಜಾರಾ ಸಮುದಾಯದ ಜೊತೆ ನಾನಿರುವೆ ಎಂದರು. ಪ್ರತಿಭಟನೆಗೆ ಮಣಿದು ಸಾಂಕೇತಿಕ ಮೊತಾಬಾಯಿ ಶಂಕರ್ ರಾಠೋಡ ಎನ್ನುವವರಿಗೆ ಇ ಖಾತಾ ನೀಡಿರುವುದು ಉತ್ತಮ ಬೆಳವಣಿಗೆ ಎಂದರು.

ಇದೇ ವೇಳೆ ಭೀಮರಾವ ರಾಠೋಡ, ಪ್ರಭು ರಾಠೋಡ, ನಾಗೇಂದ್ರ ರಾಠೋಡ, ರಾಜುನಾಯಕ ರಾಠೋಡ, ಶಿವಾಜಿ ಚವ್ಹಾಣ, ರಮೇಶ ಚವ್ಹಾಣ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. ಅವರೆಲ್ಲರನ್ನೂ ರವೀಂದ್ರ ಸ್ವಾಮಿ ಸನ್ಮಾನಿಸಿ ಗೌರವಿಸಿದರು.

## ಮುಖಂಡ ಮಣಿಕಂಠ ಬಂಧನ

ಬೆಂಬಲಿಗರೊಂದಿಗೆ ವಾಗ್ವಾದ ನಡೆಸಿ ಹೈಡ್ರಾಮಾ ಕ್ರಿಯೇಟ್ ಮಾಡಿದ್ದ. ಈ ವೇಳೆ ರಶೀದ್ ಮತ್ಯಾ ಕಾರು ಚಾಲಕನ ತಲೆಗೆ ಕಲ್ಲೇಟು ಬಿದ್ದಿತ್ತು. ಸದ್ಯ ರಶೀದ್ ಮತ್ಯಾ ಚಾಲಕನ ದೂರಿನ ಮೇರೆಗೆ ಕೊಲೆ ಯತ್ನ ಆರೋಪದಲ್ಲಿ ಮಣಿಕಂಠ ರಾಠೋನನ್ನು ಬಂಧಿಸಲಾಗಿದೆ.

## ಕರೆಗಳು ಪೂರೈಸಬೇಕು : ಶಾಸಕ ತುನ್ನೂರು

2.ಔ ಅನುದಾನದಲ್ಲಿ ಡಿಸಿ ಆಫೀಸ್ ಮುಂದುಗಡೆ ಹಾಗೂ ಲುಂಬಿನಿ ಉದ್ಯಾನವನ ಮುಂದುಗಡೆ ಸುಮಾರು 30 ಲಕ್ಷ ಅನುದಾನದಲ್ಲಿ ನಿರ್ಮಿಸಿದ ಅನ್ನಿರೇಷನಲ್ ಶೌಚಾಲಯ ಕಾಮಗಾರಿ ಹಾಗೂ ಫಿಲ್ಟರ್ ಬೆಡ್ ಗಾರ್ಡನ್ ಹತ್ತಿರ 2.50 ಲಕ್ಷ ಅನುದಾನದಲ್ಲಿ ಸಾರ್ವಜನಿಕ ಶೌಚಾಲಯಕ್ಕೆ ಚಾಲನೆ ನೀಡಿ ಮಾತನಾಡಿದರು. ಸಾರ್ವಜನಿಕರ ಅನುಕೂಲಕ್ಕಾಗಿ ಅದರಲ್ಲೂ ಬೇರೆ, ಬೇರೆ ಊರುಗಳಿಂದ ಬಂದು ಹೋಗುವ ಜನರು ನಿಸರ್ಗದ ಕರೆಗಳನ್ನು ( ಮಲ, ಮೂತ್ರ) ಪೂರೈಸಿಕೊಳ್ಳಲು ಪರದಾಡಬಾರದೆಂಬ ಉದ್ದೇಶದಿಂದ ಜನಸಂದಣಿ ಇರುವ ಕಡೆ ಈ ವ್ಯವಸ್ಥೆ ಮಾಡಲಾಗಿದೆ ಎಂದರು. ಈ ಶೌಚಾಲಯಗಳ ಉಸ್ತುವಾರಿ ವಹಿಸಿಕೊಂಡು ಮೆಂಟೆನ್ ಮಾಡುವವರು ಸದಾ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಕಲುಷಿತ ಗಬ್ಬೆದ್ದು ನಾರುವಂತ ಸ್ಥಿತಿಗೆ ಶೌಚಾಲಯಗಳು ತಲುದಂತೆಯೇ ನಿರ್ವಹಣೆ ಮಾಡಬೇಕೆಂದು ಶಾಸಕರು ಹೇಳಿದರು ಜಿಲ್ಲಾಧಿಕಾರಿ ಹರ್ಷಲ್ ಬೊಯರ್ ಮಾತನಾಡಿ, ನಗರದಲ್ಲಿ ಸಾರ್ವಜನಿಕ ಶೌಚಾಲಯಗಳ ಅವಶ್ಯಕತೆ ಸಾಕಷ್ಟು ಇತ್ತು. ಇದನ್ನು ಮನಗಂಡೇ ನಗರದ ಮೂರು ಕಡೆ ನಿರ್ಮಿಸಲಾಗಿದೆ. ಇದರ ಉಪಯೋಗ ಜನರು ಪಡೆದುಕೊಂಡು ಹಾದಿ, ಬೀದಿಗಳಲ್ಲಿ ಶೌಚಕ್ಕೆ ಮುಂದಾಗಬೇಕೆಂದರು.

ಈ ವೇಳೆ ಯುಡಾ ಅಧ್ಯಕ್ಷರಾದ ಬಾಬುರಾವ ಕಾಡ್ಲೂರ್, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರಾದ ಲಕ್ಷಿಕಾಂತರೆಡ್ಡಿ, ಪೌರಾಯುಕ್ತರಾದ ಉಮೇಶ ಚವ್ಹಾಣ, ಸಹಾಯಕ ಕಾರ್ಯಪಾಲ ಅಭಿಯಂತರರಾದ ವಿಶ್ವನಾಥರೆಡ್ಡಿ, ಪರಿಸರ ಅಭಿಯಂತರಾದ ಪ್ರಶಾಂತ, ಕಿರಿಯ ಸಹಾಯಕ ಅಭಿಯಂತರರಾದ ಲೊಕೇಶ್ವರಿ, ತಾಯಪ್ಪ ಯಾದವ್, ಕಿರಿಯ ಆರೋಗ್ಯ ನಿರಿಕ್ಷಕರಾದ ಶಿವಪುತ್ರ, ಮಂಜುನಾಥ ಇದ್ದರು.

## ಕಾಂಗ್ರೆಸ್ ಸರಕಾರ ಹೋಳು

ಮೇಲೂ ದರ ಏರಿಸಿದ್ದಾರೆ ಎಂದು ಆರ್.ಅಶೋಕ ಅವರು ದೂರಿದರು. ತುಪ್ಪಕ್ಕೂ ಕಲ್ಲು ಹಾಕಿದ ಪಾಪಿ ಸರಕಾರ ಇದೆಂದು ಆರೋಪಿಸಿದರು.

ಇವತ್ತಿನವರೆಗೂ ಅತಿಹೆಚ್ಚು ಸಾಲ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ 25 ವಸ್ತುಗಳ ಬೆಲೆ ಏರಿಸಿದ್ದಾರೆ. ವಿದ್ಯುತ್, ಹಾಲು ದರ, ನೋಂದಣಿ ಶುಲ್ಕ, ಪೆಟ್ರೋಲ್, ಡೀಸೆಲ್, ಅಬಕಾರಿ ಸೇರಿ– ಏನೇನಿದೆಯೋ ಅದೆಲ್ಲವೂ ದುಬಾರಿಯಾಗಿದೆ. ಒಂದೇ ವರ್ಷದಲ್ಲಿ ಇಷ್ಟು ಬೆಲೆ ಏರಿಸಿದ ನಂಬರ್ 1 ಪಾಪಿ ಸರಕಾರ ಇದೆಂದು ಆಕ್ಷೇಪಿಸಿದರು. ಇವತ್ತಿನವರೆಗೂ ಅತಿಹೆಚ್ಚು ಸಾಲ (2 ಲಕ್ಷ ಕೋಟಿಗೂ ಹೆಚ್ಚು) ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ತಿಳಿಸಿದರು. ಇವರು ಬೆಲೆ ಏರಿಕೆ, ಅಕ್ರಮ, ಹಗರಣಗಳ, ಸಾಲ ಮಾಡುವುದರಲ್ಲಿ ಚಾಂಪಿಯನ್ ಎಂದು ಟೀಕಿಸಿದರು. ರೈತರನ್ನು ಸಾಯಿಸುವುದರಲ್ಲಿ ಇವರು ಚಾಂಪಿಯನ್, ಗುತ್ತಿಗೆದಾರರ ಆತ್ಮಹತ್ಯೆಯಲ್ಲಿ ಚಾಂಪಿಯನ್, ಜಾತಿಗಳ ನಡುವೆ ಬೆಂಕಿ ಹಚ್ಚುವುದರಲ್ಲಿ ಚಾಂಪಿಯನ್, ದೆಹಲಿಗೆ ಗರಿಷ್ಠ ಹಣ ಕಳಿಸುವುದರಲ್ಲೂ ಇವರೇ ಚಾಂಪಿಯನ್– ಈ ಥರ ಎರಡೂವರೆ ವರ್ಷದಲ್ಲಿ ನೀವು ಚಾಂಪಿಯನ್ ಆಗಿದ್ದೀರಿ ಎಂದು ವ್ಯಂಗ್ಯವಾಗಿ ನುಡಿದರು. ನಿಮ್ಮನ್ನು ಸಿಎಂ ಆಗಿ ಆಯ್ಕೆ ಮಾಡಿದ ಶಾಸಕರೇ ನೀವು ಬೇಡ ಎಂದು ದೆಹಲಿಯಲ್ಲಿ ಖರ್ಗೆಯವರನ್ನು ಭೇಟಿ ಮಾಡಿದ್ದಾರೆ. ಇಷ್ಟಿದ್ದರೂ ಕ್ರಾಂತಿ– ಭ್ರಾಂತಿ ಇಲ್ಲವೆಂದು ಸಿದ್ದರಾಮಯ್ಯ ಹೇಳುತ್ತಾರೆ ಎಂದು ಟೀಕಿಸಿದರು. ಶಾಸಕರು ಖರ್ಗೆ ಮನೆಗೆ ವಾಂತಿ ಮಾಡಲು ಹೋಗಿದ್ದರೇ ಎಂದು ಕೇಳಿದರು. ಒಪ್ಪಂದ ಏನೆಂದು ಜನರಿಗೆ ತಿಳಿಸಿ ಸಿಎಂ ಬದಲಾವಣೆ ಕಾಂಗ್ರೆಸ್ಸಿನ ಆಂತರಿಕ ವಿಚಾರ. ಎರಡುವರೆ ವರ್ಷದ ಒಪ್ಪಂದ ಆಗಿದೆಯೇ ಇಲ್ಲವೇ ಬೊಗಳಿ ಎಂದು ರಾಜ್ಯದ ಜನತೆ ಕೇಳುತ್ತಿದ್ದಾರೆ. ನಾನು ಇದನ್ನು ಕೇಳುತ್ತಿಲ್ಲ ಎಂದು ಆರ್.ಅಶೋಕ ಅವರು ಪ್ರಶ್ನಿಸಿದರು. ದೊಡ್ಡ ಖರ್ಗೆ, ರಾಹುಲ್ ಗಾಂಧಿಯವರು 5 ವರ್ಷ ಸಿದ್ದರಾಮಯ್ಯ ಮುಖ್ಯಮಂತ್ರಿ ಎಂದು ಹೇಳಲಿ. ಅವರೂ ಹೇಳುತ್ತಿಲ್ಲ; ಇವರೂ ಹೇಳುತ್ತಿಲ್ಲ. ಸಿದ್ದರಾಮಯ್ಯ – ಡಿಕೆ ಬಳಿ ಕೇಳಿದರೆ 4 ಗೋಡೆ ಮಧ್ಯೆ ಎನ್ನುತ್ತಾರೆ. 4 ಗೋಡೆ ಮಧ್ಯೆ ಏನಾಗಿದೆ ಎಂದು ಜನರಿಗೆ ತಿಳಿಸಿ ಎಂದು ಆಗ್ರಹಿಸಿದರು.

## ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಕಲಬುರಗಿ: ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಕೆಳಕಂಡ ಫೀಡರ್‌ಗಳ ವ್ಯಾಪ್ತಿಯಲ್ಲಿ ನಿರ್ವಹಣಾ ಕಾರ್ಯಕೈಗೊಳ್ಳುವ ಪ್ರಯುಕ್ತ ಇದೇ ನವೆಂಬರ್ 22ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ) ಪ್ರಕಟಣೆಯಲ್ಲಿ ಕೋರಿದ್ದಾರೆ.

ಕೆ.ಈ.ಬಿ ಕ್ವಾರ್ಟರ್ಸ್ ಫೀಡರ್: ಶಾಂತಿ ನಗರ, ವಿದ್ಯಾನಗರ, ಅಶೋಕ ನಗರ, ಎಮ್.ಎಸ್.ಕೆ. ಮಿಲ್ ಜಿಡಿಎ, ಖಾದಿರ್‌ಚೌಕ್, ವಡ್ಡರಗಲ್ಲಿ.

ಸಮತಾ ಕಾಲೋನಿ ಫೀಡರ್: ಕೋರಿಮಠ, ಬ್ರಹ್ಮಪೂರ, ಧನಗರಗಲ್ಲಿ, ಬಸವನಗರ, ಸಮತಾ ಕಲೋನಿ, ಖಾನಿ ಏರಿಯಾ, ಶಹಾ ಹುಸೈನ್‌ಚಿಲ್ಲಾ, ಬೊರಾಬಾಯಿ ನಗರ, ಗಂಗಾ ನಗರ.

ಜಿಲ್ಲಾ ನ್ಯಾಯಾಲಯ ಫೀಡರ್: ಇಂದಿರಾ ನಗರ, ಪಿ.ವಿ. ಕೊಠಾರಿ ಭವನ್, ಜಿಲ್ಲಾ ನ್ಯಾಯಾಲಯ, ಐ.ಡಿ.ಬಿ.ಐ. ಬ್ಯಾಂಕ್, ಮಾಲಕರೆಡ್ಡಿ ಆಸ್ಪತ್ರೆ, ಸರೌಂಡಿಂಗ್, ತಿಮ್ಮಾಪೂರಿ ಚೌಕ್ ಏರಿಯಾ.

ಸಂಗಮೇಶ್ವರ ಫೀಡರ್: ರಾಮ್ ನಗರ, ಸಂಗಮೇಶ್ವರ ಕಾಲೋನಿ, ಆನಂದ ಹೋಟೆಲ್, ಎನ್ .ವಿ. ಕಾಲೇಜ್, ಗಬರಾದಿ ಕಾಂಪ್ಲೇಕ್ಸ್.

ಅಶೋಕ ನಗರ ಫೀಡರ್: ಅಶೋಕ ನಗರ, ಎಮ್.ಎಸ್.ಕೆ. ಮಿಲ್ ಜಿ.ಡಿ.ಎ, ಖದೀರ್‌ಚೌಕ್, ಜಿಲಾನಾಬಾದ್, ಶಾಂತಿ ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳು.

ಸಿದ್ಧಾರ್ಥ ನಗರ ಫೀಡರ್: ಸಿ.ಐ.ಬಿ. ಕಾಲೋನಿ, ಸಿದ್ಧಾರ್ಥ ನಗರ, ಹೊಸ ಮತ್ತು ಹಳೆಯ ಘಾಟಗೆ ಲೇಔಟ್, ಶಕ್ತಿ ನಗರ, ಕಾಂತ ಕಾಲೋನಿ, ಕೊತಂಬರಿ ಲೇಔಟ್, ಗೋದುತಾಯಿ ಲೇಔಟ್, ಬಸ್ ನಿಲ್ದಾಣ ಏರಿಯಾ, ಎಮ್.ಎಸ್.ಕೆ.ಮಿಲ್ ಜಿ.ಡಿ.ಎ, ಕಮರ್ಶಿಯಲ್ ಜಿ.ಡಿ.ಎ, ಭಗವತಿ ನಗರ, ಖೇಡಕರ್ ಲೇಔಟ್ ಮತ್ತು ಸುತ್ತಮುತ್ತಲಿನ ಪ್ರದೇಶಗಳು.

ಅದೇ ರೀತಿ ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–1ರ ವ್ಯಾಪ್ತಿಯ ಕಡಗಂಚಿ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಹೊಗುವ 11ಕೆ.ವಿ. ಫೀಡರ ಮೇಲೆ ನಿರ್ವಹಣೆ ಕಾಮಗಾರಿ ಕೈಗೊಂಡಿರುವ ಪ್ರಯುಕ್ತ ಇದೇ ನವೆಂಬರ್ 22 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದ್ದು, ಸದರಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿ ಎಲ್ಲಾ ಗ್ರಾಹಕರು ಇದಕ್ಕೆ ಸಹಕರಿಸಬೇಕೆಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗದ–1ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಕಡಗಂಚಿ ವಿದ್ಯುತ್ ವಿತರಣಾ ಕೇಂದ್ರ: ಎಫ್–3 ಕ್ಷೇತ್ರ ಎನ್.ಜೆ.ವಾಯ್, ಎಫ್–10 ನರೋಣಾ ಐಪಿ, ಎಫ್–13 ಸೋಲಾರ ಫೀಡರಿನ ಗೋಳಾ(ಬಿ), ತೇಲೂರ, ನರೋಣಾ, ಗುಂಜು ಬಬಲಾದ.

## ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** : ಬಾಗಲಕೋಟೆ ಕಾರ್ಯ ಮತ್ತು ಪಾಲನೆ ವಿದ್ಯಾಗಿರಿ ಶಾಖಾ ವಿದ್ಯುತ್ಪರಿವರ್ತಕ ಸ್ಥಳಾಂತರಿಸುವ ಸಲುವಾಗಿ ನವೆಂಬರ 22 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ಬಾಗಲಕೋಟೆ 110 ಕೆವಿ ಉಪಕೇಂದ್ರದ ಎಫ್–8 ಕಾಲೋನಿ ಫೀಡರ್ ವ್ಯಾಪ್ತಿಗೆ ಒಳಪಡುವ ಅಕ್ಕಿಮರಡಿ ಲೇಔಟ್, ಹೊಸ ಸಿಬಿಎಸ್‌ಸಿ ಸ್ಕೂಲ್, ಬಿವಿವಿಎಸ್ ಕ್ವಾಟರ್ಸ್, ವಾಲಿ ಲೇಔಟ್, 23ನೇ ಎ.ಬಿ.ಸಿ.ಡಿ&ಇ ರೋಡ, ಅಕ್ಕಿಮರಡಿ ಪೆಟ್ರೋಲ್ ಪಂಪ್ ಹಿಂದುಗಡೆ, 20ನೇ ಕ್ರಾಸ್, ಕಾಲೇಜ ಸರ್ಕಲ್ ಬಿವಿವಿಎಸ್ ಕಾಂಪ್ಲೇಕ್ಸ್, ಬಿವಿವಿಎಸ್ ಕಾಲೇಜ ಲೇಡಿಸ್ ಹಾಸ್ಟೇಲ್, ಬಸವೇಶ್ವರ ಇಂಜಿನಿಯರ ಕಾಲೇಜ ಸ್ಥಳಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಬಾಗಲಕೋಟೆ ಹೆಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಕಾಂಗ್ರೆಸ್ ಸರ್ಕಾರ ಸಂಪೂರ್ಣ ವಿಫಲ: ಜಿಗಜಿಣಗಿ

ಮಲ್ಲಮ್ಮ ನುಡಿ ವಾರ್ತೆ

ವಿಜಯಪುರ: ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಸರ್ಕಾರ ಆಡಳಿತ ನಡೆಸಲು ಸಂಪೂರ್ಣ ವಿಫಲವಾಗಿದೆ. ಅವರ ಈ ದರಿದ್ರ ರಾಜಕಾರಣದಿಂದ ಕರ್ನಾಟಕ ಜನತೆಗೆ ಶಾಪವಾಗಿ ಪರಿಗಣಿಸಿದೆ. ಇನ್ನೂ ಗೃಹ ಸಚಿವರು ರಾಜ್ಯದ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸಂಪೂರ್ಣ ವೈಫಲ್ಯ ಕಂಡಿದ್ದು ಕೂಡಲೇ ತಮ್ಮ ಸ್ಥಾನಕ್ಕೆ ರಾಜಿನಾಮೆ ನೀಡುವಂತೆ ಸಂಸದ ರಮೇಶ ಜಿಗಜಿಣಗಿ ಒತ್ತಾಯಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು,, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಎನ್ನುವುದು ಸಂಪೂರ್ಣ ಹಾಳಾಗಿದೆ. ಹಾಡಹಗಲೇ ಕೊಲೆ, ಸುಲಿಗೆ ನಡೆಯುತ್ತಿವೆ. ಬೆಂಗಳೂರಿನಲ್ಲಿಯೇ ಹಾಡ ಹಗಲೇ ಏಳು ಕೋಟಿ ರೂ. ದೋಚಲಾಗಿದೆ. ವಿಜಯಪುರದಲ್ಲಿ ಎರಡು ಬ್ಯಾಂಕುಗಳು ದರೋಡೆಯಾಗಿ 100 ಕೋಟಿ ರೂ.ಗೂ ಅಧಿಕ ಸ್ವತ್ತು ಕಳ್ಳತನವಾಗಿದೆ. ಒಟ್ಟಾರೆಯಾಗಿ ದರೋಡೆ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ. ದಿನ ಬೆಳಗಾದರೆ ಈ ರೀತಿಯ ಬೆಚ್ಚಿಬೀಳಿಸುವ ಘಟನೆಗಳು ಸಾಮಾನ್ಯವಾಗಿವೆ. ಪ್ರತಿಯೊಬ್ಬರು ಮನೆಯಿಂದ ಹೊರಬರಲು ಅಂಜುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಅತ್ತ ಉಗ್ರಗಾಮಿಗಳಿಗೆ ಜೈಲಿನಲ್ಲಿ ಆತಿಥ್ಯ ನೀಡಲಾಗುತ್ತಿದೆ. ಹೊರಗಡೆ ಅಪರಾಧಿಕ ಕೃತ್ಯಗಳು ವ್ಯಾಪಕವಾಗಿವೆ. ಇವುಗಳನ್ನು ತಡೆಗಟ್ಟುವಲ್ಲಿ ರಾಜ್ಯದ ಹೋಂ ಮಿನಿಸ್ಟರ್ ಸಂಪೂರ್ಣ ವೈಫಲ್ಯವಾಗಿ ವೇಸ್ಟ್ ಮಿನಿಸ್ಟರ್ ಆಗಿದ್ದಾರೆ ಎಂದು ಜಿಗಜಿಣಗಿ ಟೀಕಿಸಿದ್ದಾರೆ. ತಮ್ಮ ಸಂಸ್ಥೆಗಳಿಗೆ ಉತ್ತಮ ಆಡಳಿತಗಾರರಾಗಿರುವ ಡಾ.ಜಿ. ಪರಮೇಶ್ವರ ಗೃಹ ಸಚಿವರಾಗಿ ಸಂಪೂರ್ಣ ವೈಫಲ್ಯ ಕಂಡಿದ್ದಾರೆ.

ಈ ಎಲ್ಲ ಅಪರಾಧಿಕ ಪ್ರಕರಣಗಳು ಹೆಚ್ಚುತ್ತಿರುವುದಕ್ಕೆ ಕೂಡಲೇ ಅವರು ತಮ್ಮ ಸ್ಥಾನಕ್ಕೆ ರಾಜಿನಾಮೆ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಇಷ್ಟೆಲ್ಲಾ ಸಮಸ್ಯೆಗಳು ಎದುರಿಸುತ್ತಿದ್ದರೂ ಸಹ ಸಿದ್ಧರಾಮಯ್ಯ ನೇತೃತ್ವದ ಸರ್ಕಾರ ಕೇವಲ ರಾಜಕಾರಣಕ್ಕೆ ಆದ್ಯತೆ ನೀಡುತ್ತಿದೆ. ಅವರ ಈ ದರಿದ್ರ ನಡವಳಿಕೆಯಿಂದ ಜನತೆ ನರಕಯಾತನೆ ಅನುಭವಿಸುವಂತಾಗಿದೆ ಎಂದರು. ರಾಜ್ಯದಲ್ಲಿ ರಸ್ತೆಗಳು ಹಾಳಾಗಿ ಹೋಗಿವೆ. ಈ ಬಗ್ಗೆ ಸಣ್ಣ ಬಾಲಕನೋರ್ವ ಪ್ರಧಾನಿಗೆ ಪತ್ರ ಬರೆಯುವಂತಾಗಿದೆ. ಬಿಹಾರ್ ಮಾದರಿಯಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಸೋತು ಸುಣ್ಣವಾಗುವುದಂತೂ ದಿಟ. ರಾಜ್ಯದಲ್ಲಿ ಇನ್ನಷ್ಟೂ ಕಾನೂನು–ಸುವ್ಯವಸ್ಥೆ ಬಿಗಡಾಯಿಸುವ ಮುನ್ನವೇ ಎಚ್ಚೆತ್ತುಕೊಳ್ಳಿ, ಕೇವಲ ಒಂದು ಸಮುದಾಯ ಖುಷಿ ಪಡಿಸಲು ಉಳಿದ ಸಮಾಜಗಳನ್ನು ತುಳಿಯುವ ಹಾಗೂ ಅವರನ್ನು ತೊಂದರೆಗೆ ತಳ್ಳುವ ಕೆಲಸ ಮಾಡಬೇಡಿ ಎಂದು ಅವರು ಹೇಳಿದ್ದಾರೆ.

## ಮಂಗಲಗಿ ಗ್ರಾಮ ಘಟಕ ಅಧ್ಯಕ್ಷರಾಗಿ ಅಜೋರೋದ್ದಿನ ನೇಮಕ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಕನ್ನಡ ಸೇನೆ ಕರ್ನಾಟಕ ಸಂಘಟನೆಗೆ ತಾಲೂಕಿನ ಮಂಗಲಗಿ ಗ್ರಾಮ ಘಟಕ ಅಧ್ಯಕ್ಷರಾಗಿ ಎಂ.ಡಿ. ಅಜೋರೋದ್ದಿನ

ಇವರನ್ನು ಕನ್ನಡ ಸೇನೆ ಕರ್ನಾಟಕ ಸಂಘಟನೆ ರಾಜ್ಯ ಉಪಾಧ್ಯಕ್ಷ ಡಾ. ರವಿ ಸ್ವಾಮಿ ನಿರ್ಣಾ ಶುಕ್ರವಾರ ನೇಮಕ ಮಾಡಿ ಆದೇಶಿಸಿದ್ದಾರೆ. ನಾಡು, ನುಡಿ, ನೆಲ, ಜಲ, ಭಾಷೆ, ನಿಷ್ಠೆಯ ಹೋರಾಟಕ್ಕಾಗಿ ಶ್ರಮಿಸಬೇಕು ನೇಮಕಾತಿ ಆದೇಶ ಪತ್ರದಲ್ಲಿ ತಿಳಿಸಿರುತ್ತಾರೆ.

## ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್: ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಚಿಟ್ಟಾ ಗ್ರಾಮದಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ.

ಯುವನಿಧಿ, ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಶಿವಕುಮಾರ ಕುತ್ತಾಬಬಾದ್, ಸೇವಾದಳ ಅಧ್ಯಕ್ಷರಾದ ಮೋಹಿನ್ ಪಠಾಣ್, ಮುಖಂಡರಾದ ನವಾಜ್ ಖಾನ್, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

## ಹೊರ ರಾಜ್ಯದವರ ನೇಮಕಾತಿ: ಜಿಲ್ಲಾಧಿಕಾರಿಗೆ ದೂರು
## ಸ್ಥಳೀಯರ ನೇಮಕಕ್ಕೆ ಕರವೇ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

**ಬೀದರ್:** ಜಿಲ್ಲೆಯಲ್ಲಿ ಚಟುವಟಿಕೆ ನಡೆಸುತ್ತಿರುವ ಕೆ.ಎಸ್. ವಿಂಡ್ ಅಂಡ್ ರಿನಿವೆಬಲ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆನಲ್ಲಿ ಸ್ಥಳೀಯರ ನೇಮಕಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಜಿಲ್ಲಾ ಘಟಕ ಆಗ್ರಹಿಸಿದೆ.

ವೇದಿಕೆಯ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ ಅವರು ಈ ಕುರಿತು ಜಿಲ್ಲಾಧಿಕಾರಿ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

ಕಮಲನಗರ ತಾಲ್ಲೂಕಿನಲ್ಲಿ ಕಂಪನಿಯ ಉನ್ನತ ಹುದ್ದೆಯಿಂದ ಹಿಡಿದು ಕಾರ್ಮಿಕ ಹುದ್ದೆವರೆಗೆ ಎಲ್ಲ ಹುದ್ದೆಗಳಿಗೆ ಹೊರ ರಾಜ್ಯದವರನ್ನೇ ನೇಮಕ ಮಾಡಲಾಗುತ್ತಿದೆ. ಇದ–ರಿಂದ ಸ್ಥಳೀಯರು ಉದ್ಯೋಗದಿಂದ ವಂಚಿತರಾಗುವಂತಾಗಿದೆ ಎಂದು ದೂರಿದ್ದಾರೆ.

ಸರ್ಕಾರದ ನಿಯಮಾನುಸಾರ ಎಲ್ಲ ಹುದ್ದೆಗಳಲ್ಲಿ ಸ್ಥಳೀಯರಿಗೆ ಮೊದಲ ಆದ್ಯತೆ ನೀಡಬೇಕು. ಆದರೆ, ಕಂಪನಿಯರು ಹೊರ ರಾಜ್ಯದ ಕಾರ್ಮಿಕರನ್ನು ನೇಮಕ ಮಾಡಿಕೊಂಡು ಸ್ಥಳೀಯರಿಗೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಆಪಾದಿಸಿದ್ದಾರೆ.

ಸೌರ ವಿದ್ಯುತ್ ಘಟಕಗಳಿಂದ ಹೊರ ರಾಜ್ಯಗಳಿಗೆ ವಿದ್ಯುತ್ ಸರಬರಾಜು ಮಾಡಲು ಬೃಹತ್ ಕಂಬಗಳ ಅಳವಡಿಕೆಗಾಗಿ ಕಂಪನಿಯವರು ಸ್ಥಳೀಯರ ಜಮೀನು ಗುತ್ತಿಗೆ ಪಡೆದಿದ್ದಾರೆ. ಬೇರೆ ಜಿಲ್ಲೆಗಳಲ್ಲಿ ಕಂಬಗಳಿಗೆ ಹೆಚ್ಚಿನ ಬಾಡಿಗೆ ಕೊಡಲಾಗುತ್ತಿದೆ. ಆದರೆ, ಜಿಲ್ಲೆಯಲ್ಲಿ ಒಂದು ಕಂಬಕ್ಕೆ ವಾರ್ಷಿಕ ರೂ. 30 ಸಾವಿರದಿಂದ ರೂ. 33 ಸಾವಿರ ಮಾತ್ರ ಕೊಡಲಾಗುತ್ತಿದೆ. ಇದನ್ನು ಕನಿಷ್ಠ ರೂ. 50 ಸಾವಿರಕ್ಕೆ ಹೆಚ್ಚಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಂಪನಿಯರು ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಕಮಲನಗರ ತಾಲ್ಲೂಕಿನ ಮುಧೋಳದಲ್ಲಿ ಇರುವ ಕಂಪನಿಯ ಕಚೇರಿ ಎದುರು ಧರಣಿ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

## ಉದ್ಯಮಗಳು ಉಳಿದು ಬೆಳೆಯಲು ಹೊಸ ತಂತ್ರಜ್ಞಾನ,ಕೌಶಲ ಅಗತ್ಯ: ಡಾ.ಮಲ್ಲಿಕಾರ್ಜುನ ಎಸ್.ಅಯ್ಯನಗೌಡರ್ ಸಲಹೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ರಾಯಚೂರು ಜಿಲ್ಲೆಯ ಸಣ್ಣ, ಸೂಕ್ಷ್ಮ ಮತ್ತು ಮಧ್ಯಮ ಕೈಗಾರಿಕೆಗಳಿಗೆ ಉತ್ತೇಜನ ನೀಡಲು ಹಾಗೂ ಹೊಸ ಉದ್ಯಮಿಶೀಲರನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ರಾಯಚೂರು ಜಿಲ್ಲಾ ಕೈಗಾರಿಕಾ ಕೇಂದ್ರ, ರಾಯಚೂರು ಜಿಲ್ಲಾ ಕೃಷಿ ತಾಂತ್ರಿಕ ಮಹಾವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ಒಂದು ದಿನದ ಇನ್‌ಕ್ಯೂಬೇಶನ್ ಕಾರ್ಯಗಾರ ನವೆಂಬರ್ 20ರಂದು ನಡೆಯಿತು.

ನಗರದ ಕೃಷಿ ತಾಂತ್ರಿಕ ಮಹಾ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ನಡೆದ ಕಾರ್ಯಗಾರವನ್ನು ಜಿಲ್ಲಾ ಕೃಷಿ ತಾಂತ್ರಿಕ ಮಹಾ ವಿದ್ಯಾಲಯದ ಕೃಷಿ ತಾಂತ್ರಿಕದ ಡೀನ್ ಡಾ.ಮಲ್ಲಿಕಾರ್ಜುನ ಎಸ್. ಆಯ್ಯನಗೌಡರ್ ಅವರು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತಾನಾಡಿ, ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಉದ್ಯಮಗಳು ಉಳಿದು ಬೆಳೆಯಲು ಹೊಸ ತಂತ್ರಜ್ಞಾನ ಮತ್ತು ಕೌಶಲ ಅತ್ಯಗತ್ಯ. ಜೊತೆಗೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಉಪಯೋಗಿಸಿಕೊಂಡು ಒಳ್ಳೆಯ ಉದ್ಯಮಿಗಳಾಗಿ ಬೆಳೆಯಬೇಕು ಎಂದು ಹೇಳಿದರು. ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಬಿ.ಸತೀಶ್ ಕುಮಾರ ಅವರು ಅಧ್ಯಕ್ಷತೆ ವಹಿಸಿ ಮಾತಾನಾಡಿ, ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ರ್‍ಯಾಂಪ್ (ಆರ್‌ಎಎಂಪಿ) ಯೋಜನೆಯುದೇಶದ ಎಂ.ಎಸ್. ಎಂ.ಇ. ಗಳಿಗೆ ಹೊಸ ಚೈತನ್ಯ ನೀಡಲಿದ್ದು, ಈ ಯೋಜನೆಯಡಿ ಸಿಗುವ ಸಾಲ ಸೌಲಭ್ಯ ಮತ್ತು ಮಾರುಕಟ್ಟೆ ಅವಕಾಶಗಳನ್ನು ಜಿಲ್ಲೆಯ ಉದ್ಯಮಿಗಳು ಸದುಪಯೋಗಪಡಿಸಿಕೊಳ್ಳಬೇಕು. ಇನ್‌ಕ್ಯೂಬೇಶನ್ ಕಾರ್ಯಕ್ರಮಗಳು ಹೊಸ ಉದ್ಯಮದಾರರ ಹೊಸ ಆಲೋಚನೆಗಳಿಗೆ ವೇದಿಕೆ ಕಲ್ಪಿಸುತ್ತದೆ ಎಂದು ಸಲಹೆ ಮಾಡಿದರು.

ಕಲಬುರರ್ಗಿಯ ಶರಣಬಸವ ವಿಶ್ವವಿದ್ಯಾಲಯದ ಬಿಸನೆಸ್ ಇನ್ ಕ್ಯೋಬೇಶನ್ ವಿಭಾಗದ ಮುಖ್ಯಸ್ಥರಾದ ಡಾ.ಬಸಂತಿ ಘಂಟಿ ಮಾತಾನಾಡಿ, ಒಂದು ಯಶಸ್ವಿ ಉದ್ಯಮಕ್ಕೆ ಕೇವಲ ಹಣ ಹೂಡಿಕೆ ಮುಖ್ಯವಲ್ಲ, ಬದಲಾಗಿ ಹೊಸ ಅವಿಷ್ಕಾರ, ಸರಿಯಾದ ಮಾರ್ಗದರ್ಶನ ಮತ್ತು ವ್ಯವಹಾರದ ಜ್ಞಾನವು ಅಷ್ಟೇ ಮುಖ್ಯ. ಈ ಎಲ್ಲಾ ಅಂಶಗಳು ಒಂದೇ ಸೂರಿನಡಿ ಇನ್ ಕ್ಯೂಬೇಶನ್ ಕೇಂದ್ರಗಳು ಒದಗಿಸುತ್ತದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದ ಲೀಡ್ ಡಿಸ್ಟ್ರಿಕ್ಟ್ ವ್ಯವಸ್ಥಾಪಕರಾದ ಪಾಂಡಪ್ಪ ಲಮಾಣಿ ಅವರು ಮಾತಾನಾಡಿ, ಬ್ಯಾಂಕಿನಿಂದ ಸಾಲ ಸೌಲಭ್ಯ, ಮುದ್ರಾ ಯೋಜನೆ, ಸಿ.ಜಿ.ಟಿ.ಎಂ.ಎಸ್.ಸಿ.ಯೋಜನೆಯಡಿ ಕೈಗಾರಿಕಾ ಸ್ಥಾಪನೆಗಾಗಿ ಸಾಲ ಪಡೆಯುವ ಬಗ್ಗೆ ಸುಧೀರ್ಘವಾಗಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದ ಜಿಲ್ಲಾ ಕೈಗಾರಿಕಾ ಕೇಂದ್ರದ ಉಪ ನಿರ್ದೇಶಕರಾದ ರಾಜಕುಮಾರ್ ಪಾಟೇಲ್ ಅವರು ಮಾತಾನಾಡಿ, ಗ್ರಾಮೀಣ ಯುವಕರು ಇಂತಹ ಕಾರ್ಯಾಗಾರಗಳ ಪ್ರಯೋಜನ ಪಡೆದು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದರ ಜೊತೆಗೆ ಪ್ರಧಾನಮಂತ್ರಿಗಳ ಉದ್ಯೋಗಸೃಜನ ಯೋಜನೆಯ ಕಾರ್ಯಕ್ರಮದ ಕುರಿತು ಪಿಪಿಟಿ ಪ್ರಸಂಟೇಶನ್ ಮೂಲಕ ಸವಿಸ್ತಾರವಾಗಿ ಮಾಹಿತಿ ನೀಡಿದರು.

ಯಶಸ್ವಿ ಉದ್ಯಮಿಗಳಾದ ಹರಿಚೈತನ್ಯ, ರಾಯಚೂರು ಅವರು ತಾವು ಕೈಗಾರಿಕೆ ಪ್ರಾರಂಭಿಸುವಾಗ ಬಂದ ಸಮಸ್ಯೆಗಳು ಹಾಗೂ ನಂತರ ಯಶಸ್ವಿ ಆಗಿರುವ ಬಗ್ಗೆ ಕಾರ್ಯಾಗಾರದಲ್ಲಿ ಹಾಜರಾದ ವಿದ್ಯಾರ್ಥಿಗಳಿಗೆ ಕೈಗಾರಿಕೆ ಸ್ಥಾಪಿಸಿ ಉದ್ಯೋಗ ನೀಡುವಂತೆ ಪ್ರೇರಣೆ ನೀಡಿದರು. ಕಾರ್ಯಾಗಾರದ ವೇದಿಕೆಯಲ್ಲಿ, ಸಂಸ್ಕರಣೆ ಹಾಗೂ ಆಹಾರ ತಂತ್ರಜ್ಞಾನ ವಿಭಾಗ, ಕೃಷಿ ತಾಂತ್ರಿಕ ಮಹಾ ವಿದ್ಯಾಲಯ ಪಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ.ಶರಣಗೌಡ ಹಿರೇಗೌಡರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಸಹಾಯಕ ಉಪ ನಿರ್ದೇಶಕರಾದ ಲಕ್ಷ್ಮೀಕಾಂತ್ ಕುಲಕರ್ಣಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



**ಚಿಟಗುಪ್ಪ: ಪಟ್ಟಣದ ಪುರಸಭೆಯ ನೂತನ ಮುಖ್ಯಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿಕೊಂಡ ಸತೀಶ್ ಗುಡ್ಡೆ ಇವರನ್ನು ಪಟ್ಟಣದ ಸಮಾಜ ಕಾರ್ಯಕರ್ತ, ಪರಿಸರವಾದಿ ಮಹಮ್ಮದ್ ಅಸ್ಲಾಂಮಿಯಾ ಅವರು ಶುಕ್ರವಾರ ಶಾಲು ಹೊದಿಸಿ ಸನ್ಮಾನಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಬೆಳಕೇರಾ ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರು ಹಾಲಿ ಸದಸ್ಯರಾದ ಮಾಣಿಕ್ ಹಿಪ್ಪರಗಿ, ಪತ್ರಕರ್ತರಾದ ರಾಜಕುಮಾರ ಆರ್. ಹಡಪದ ಸೈಯದ್ ಅಜೀಮ್ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)**

## ಆರ್. ಸಿ. ದಾಮಾಗೆ ರಾಜ್ಯ ಮಟ್ಟದ 'ಕರುನಾಡ ಸೌರಭ ರತ್ನ ಪ್ರಶಸ್ತಿ' ಪ್ರಧಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಧಾರವಾಡ ಜಿಲ್ಲೆಯಲ್ಲಿ ಕನ್ನಡ ನುಡಿಮುತ್ತು ಸಾಹಿತ್ಯ ವೇದಿಕೆ ವತಿಯಿಂದ ನಡೆದ ತೃತಿಯ ಸಾಹಿತ್ಯ ಸಮ್ಮೇಳನದಲ್ಲಿ ರಕ್ಷಿತಾ ಸಿ. ದಾಮಾ ಅವರಿಗೆ ರಾಜ್ಯ ಮಟ್ಟದ "ಕರುನಾಡ ಸೌರಭ ರತ್ನ ಪ್ರಶಸ್ತಿ" ಯನ್ನು ನೀಡಿ ಗೌರವಿಸಲಾಗಿದೆ. ವೇದಿಕೆ ಅಧ್ಯಕ್ಷರು ರಚಿಸಿರುವ ಕರುನಾಡ ಸಾಧಕರ ಪುಸ್ತಕದಲ್ಲಿ ಇವರ ಜೀವನ ಚರಿತ್ರೆಯನ್ನು ಕೂಡ ಪ್ರಕಟಿಸಲಾಗಿದೆ .ಈ ಸಂದರ್ಭದಲ್ಲಿ ವೇದಿಕೆಯ ಅಧ್ಯಕ್ಷರಾದ ಜಗದೀಶ್ ಕಬಾನೆ , ರಾಜಕೀಯ ಮುಖಂಡರು ಸೇರಿದಂತೆ ಹಲವಾರು ಗಣ್ಯ ವ್ಯಕ್ತಿಗಳು ಇದ್ದರು.

# ಪ್ರತಿಯೊಬ್ಬರಿಗೂ ಉತ್ತಮ ಆರೋಗ್ಯ ಸೌಲಭ್ಯ ನೀಡುವಲ್ಲಿ ಎಲ್ಲಾ ವೈದ್ಯಕೀಯ ಸಿಬ್ಬಂದಿಗಳು ಪ್ರಾಮಾಣಿಕ ಸೇವೆ ಸಲ್ಲಿಸಿ –ವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ್



**ಮಲ್ಲಮ್ಮ ನುಡಿ ವಾರ್ತೆ**

**ಕಲಬುರಗಿ:** ನವೆಂಬರ್ 22 ಜಿಲ್ಲೆಯಲ್ಲಿ ಪ್ರತಿಯೊಬ್ಬರಿಗೂ ಉತ್ತಮ ಆರೋಗ್ಯ ಸೌಲಭ್ಯ ನೀಡುವಲ್ಲಿ ಎಲ್ಲಾ ವೈದ್ಯಕೀಯ ಸಿಬ್ಬಂದಿಗಳು ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿ ಸಾಮಾಜಿಕಕಾರ್ಯತೊಡಗಿಸಿಕೊಂಡು ಆರೋಗ್ಯಕರ ಸಮಾಜ ನಿರ್ಮಾಣ ಮಾಡುವಲ್ಲಿ ವೈದ್ಯಕೀಯ ಪಾತ್ರ ಬಹಳಷ್ಟು ಮಹತ್ವ ಇದೆ ಎಂದು ವೈದ್ಯಕೀಯ ಶಿಕ್ಷಣ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಹೇಳಿದರು.

ಶುಕ್ರವಾರದಂದು ಕಲಬುರಗಿ ನಗರದ ಜಿಮ್ಸ್ ಕಾಲೇಜಿನಲ್ಲಿ 35ನೇ ವಾರ್ಷಿಕ ರಾಜ್ಯ ಕಚ್ಕಾನ್ ಸಮ್ಮೇಳನ–2025 (35th Annual state conference KACHCON–2025) ರ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸಿವುದರ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವುದು ಸಮುದಾಯ ಆಧಾರಿತ ಆರೋಗ್ಯ ಸಂಸ್ಥೆಯನ್ನು ವಿಸ್ತರಿಸುವುದು. ವೈದ್ಯಕೀಯಕ್ಷೇತ್ರದಲ್ಲಿ ಸಕಾರಾತ್ಮಕ ಚಿಂತನೆಗಳನ್ನು ವಿಸ್ತರಿಸುವ ಉದ್ದೇಶ ಇದೆ ಎಂದು ಹೇಳಿದರು.

ರಾಜ್ಯದಲ್ಲಿ ಇಲ್ಲಿಯವರೆಗೆ ನಮ್ಮ ಅಧಿಕಾರದ ಅವಧಿಯಲ್ಲಿ 22 ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗಿದೆ. ಇನ್ನೂ 3 ವೈದ್ಯಕೀಯ ಕಾಲೇಜುಗಳು ಪ್ರಗತಿ ಹಂತದಲ್ಲಿದ್ದು, ಒಟ್ಟು 25 ವೈದ್ಯಕೀಯ ಕಾಲೇಜುಗಳು ಆಗಲಿದ್ದು, ಕರ್ನಾಟಕದಲ್ಲಿ ಕೇವಲ 1 ಇಂದಿರಾಗಾಂಧಿ ಮಕ್ಕಳ ಆಸ್ಪತ್ರೆ ಬೆಂಗಳೂರಿನಲ್ಲಿದ್ದು, ಕಲಬುರಗಿಯಲ್ಲಿ 1 ಆಸ್ಪತ್ರೆಗೆ ಸರಕಾರ ಮುಂದಾಗಿದೆ ಇನ್ನೂ ಹೆಚ್ಚು ಸೂಪರ್ ಸ್ಪೆಷಯಾಲಿಟಿ ಆಸ್ಪತ್ರೆಗಳು ಸಾರ್ವಜನಿಕರಿಗೆ ಅನುಕೂಲವಾಗಲು ಸ್ಥಾಪಿಸಲಾಗುವುದು ವೈದ್ಯಕೀಯ ಇಲಾಖೆ ಮತ್ತು ಆರೋಗ್ಯ ಇಲಾಖೆ ಸದಾ ಸಾರ್ವಜನಿಕರ ಸೇವೆಯಲ್ಲಿ ಮುಂದಾಗಿದ್ದು ಅಭಿನಂದನೆ ಸಲ್ಲಿಸೋಣ ಎಂದು ಹೇಳಿದರು.

ನಾನು ಮೊದಲನೆ ಬಾರಿಗೆ ವೈದ್ಯಕೀಯ ಸಚಿವನಾದ್ದಾಗ ಆರೋಗ್ಯದ ಸೌಲಭ್ಯಗಳನ್ನು ಯಾವ ರೀತಿಯಾಗಿ ವಿಸ್ತರಣೆ ಮಾಡಬೇಕು ಎಂಬ ದೂರದೃಷ್ಟಿಯ ಕಾರಣದಿಂದಲ್ಲೇ ಇವತ್ತಿನ ಜಿಲ್ಲೆಯ ಜನರು ಉತ್ತಮವಾದ ಚಿಕಿತ್ಸೆ ಪಡೆಯಲು ಜಿಲ್ಲೆಯಲ್ಲಿ ನಾಲ್ಕು ಸರ್ಕಾರಿ ಆಸ್ಪತ್ರೆಗಳಾದ ಜಿಮ್ಸ್ ಆಸ್ಪತ್ರೆ, ಜಯದೇವ ಇನ್ಸಿಟ್ಯೂಟ್ ಆಫ್ ಕ್ಯಾಡಿಯೋಲಾಜಿ, ಟ್ರಾಮ ಕೇರ್ ಸೆಂಟರ್, ಹಾಗೂ ಇಎಸ್ಐ ಆಸ್ಪತ್ರೆ ಬಡಜನರಿಗೆ ಉತ್ತಮವಾದ ಚಿಕಿತ್ಸೆಯನ್ನು ನೀಡುತ್ತಿವೆ ಎಂದು ಹೇಳಿದರು.

ನಮ್ಮ ಅಧಿಕಾರ ಅವದಿಯಲ್ಲಿ ಕಲಬುರಗಿಯನ್ನು ಹೆಲ್ತ್ ಹಬ್ಬ ಮಾಡುವುದರ ಜೊತೆಗೆ ಜಿಲ್ಲೆಯಲ್ಲಿ ಕಿದ್ವಾಯಿ ಆಸ್ಪತ್ರೆ ಯನ್ನು ರಿಜನಲ್ ಕೇರ್ ಸೆಂಟರ್ ಮಾಡುವ ಕಾಮಗಾರಿ ಪ್ರಗತಿಯಲ್ಲಿದೆ ಜೊತೆಗೆ ನಮ್ಮ ರಾಜ್ಯದಲ್ಲಿ ನಿಮಾನ್ಸ್ ಆಸ್ಪತ್ರೆ ಸ್ಥಾಪನೆ ಮಾಡಬೇಕು ಎಂಬ ಉದ್ದೇಶವಿದೆ. ಕಲ್ಯಾಣ ಕರ್ನಾಟಕ ಭಾಗದ ಜನ ಚಿಕಿತ್ಸೆಗಾಗಿ ಹೈದ್ರಬಾದ ಮತ್ತು ಸೋಲಾಪುರ ಅಂತಾ ಅಲೆದಾಡಬಾರದು ಜಿಲ್ಲೆಯಲ್ಲಿ ಎಲ್ಲಾ ವೈದ್ಯಕೀಯ ಸೌಲಭ್ಯಗಳು ಸಿಗುವಂತೆ ಆಗಬೇಕು ಅದಕ್ಕಾಗಿ ಆರೋಗ್ಯ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಪ್ರತಿಯೊಬ್ಬರ ಸಾಹಕಾರ ಅಗತ್ಯವಿದೆ ಎಂದರು.

ಇಂದಿನ ವೈಜ್ಞಾನಿಕ ಯುಗದಲ್ಲಿ ಹವಾಮಾನಗಳ ವೈಫರಿತ್ಯದಿಂದ ವೈದ್ಯಕೀಯ ಲೋಕಕ್ಕೆ ಸವಾಲು ನೀಡುವಂತ ಬಹಳಷ್ಟು ರೋಗಗಳನ್ನು ಕಾಣುತ್ತಿದ್ದೇವೆ. AICC ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಪರಿಶ್ರಮದ ಫಲವಾಗಿ ಈ ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ 371 (ಜೆ) ವಿಧಿಯನ್ನು ಜಾರಿಗೊಳಿಸಲಾಯಿತು. ಆ ಕಾರಣದಿಂದಾಗಿಯೇ ಈ ಭಾಗದ ಹೆಚ್ಚಿನ ವಿದ್ಯಾರ್ಥಿಗಳು ವೈದ್ಯಕೀಯ ಸೀಟುಗಳನ್ನು ಪಡೆಯಲು ಸಾಧ್ಯವಾಯಿತು.

ಜಿಮ್ಸ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಗುರುರಾಜ್ ಎನ್. ಎ., ಮಾತನಾಡಿ, ಸ್ನಾತಕೋತ್ತರ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರ ಪ್ರಯತ್ನಗಳನ್ನು ಅವರ ನಿಖರವಾದ ಯೋಜನೆ ಮತ್ತು ಕಾರ್ಯಕ್ರಮದ ಸುಗಮ ಅನುಷ್ಠಾನಕ್ಕಾಗಿ ಶ್ಲಾಘಿಸಲಾಯಿತು ಸೆಂಟರ್ ಫಾರ್ ಕಮ್ಯುನಿಟಿ ಮೆಡಿಸಿನ್ ಏಮ್ಸ್, ನವದೆಹಲಿ ಪೋಷಕ ಮುಖ್ಯ ಭಾಷಣಕರರಾಗಿ ಮಾತನಾಡಿ, ಡಾ.ಆನಂದ ಕೃಷ್ಣನ್ ಪ್ರೊಫೆಸರ್, ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಲೇರಿಯಾ, ಡೆ–ಂಗ್ಯೂ ಚಿಕ್ಕನ್ ಗೂನ್ಯ ಅಂಥಹ ರೋಗಗಳು ಉತ್ಪಾತಿಯಾಗುತ್ತವೆ ಇದಕ್ಕೆ ವೈದ್ಯಾದೀಕರಿಗಳು ಹೆಚ್ಚಿನ ಆಸಕ್ತಿ ವಹಿಸಿ ತಪಾಸಣೆ ಮಾಡಿ ರೋಗಗಳನ್ನು ಗುಣಮುಕ್ತ ಮಾಡಬೇಕೆಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಸಮುದಾಯ ಆರೋಗ್ಯ ಮಟ್ಟದಲ್ಲಿ ಅತಿ ಹೆಚ್ಚು ಸಾದನೆ ಮಾಡಿದ ಸಾಧಕರಿಗೆ ಸನ್ಮಾನಿಸಲಾಯಿತು ಸಾರ್ವಜನಿಕ ಆರೋಗ್ಯ ಮತ್ತು ಸಮುದಾಯ ಸೇವೆಯಲ್ಲಿನ ಶ್ರೇಷ್ಠತೆಯನ್ನು ಗುರುತಿಸಲು ಏಂಅಲೂ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು. : "ಅತ್ಯುತ್ತಮ ಸಮುದಾಯ ಆರೋಗ್ಯ ವೃತ್ತಿಪರ ಪ್ರಶಸ್ತಿ" ಡಾ. ಶೈಲಜಾ ಪಾಟೀಲ್ – ಸಾರ್ವಜನಿಕ ಆರೋಗ್ಯದಲ್ಲಿ ಶ್ರೇಷ್ಠತೆಗಾಗಿ . KACH ಯುವ ವಿಜ್ಞಾನಿ ಪ್ರಶಸ್ತಿ ಡಾ. ಮೊಹಮ್ಮದ್. ವಸೀಮ್ ಫರಾಜ್ ಅನ್ಸಾರಿ – ಯುವ ಸಂಶೋಧಕ ಮನ್ನಣೆ ಅತ್ಯುತ್ತಮ ಯುವ ಸಮುದಾಯ ಆರೋಗ್ಯ ವೃತ್ತಿಪರ ಪ್ರಶಸ್ತಿ ಡಾ. ವಾಣಿ ಎಚ್. ಚಳಗೆರೆ – ಸಮುದಾಯ ಆರೋಗ್ಯಕ್ಷೇತ್ರದಲ್ಲಿ ಉದಯೋನ್ಮುಖ ನಾಯಕಿ KACH ಸಮೃದ್ಧ ಸಾಹಿತ್ಯ ಪ್ರಶಸ್ತಿ ಡಾ. ಅಶ್ವಿನಿ ಕುಮಾರ್ (ಡಾ. ಚಿತ್ರಾ ರಾವ್ ಪರವಾಗಿ ಸ್ವೀಕರಿಸಲಾಗಿದೆ) . "ಜೀವಮಾನ ಸಾಧನೆ ಪ್ರಶಸ್ತಿ" ಹೀಗೆ ಒಟ್ಟು 11 ಜನರಿಗೆ ನೀಡಲಾಯಿತು. ಡಾ. ಡಿ. ಸುನಿಲ್ ಕುಮಾರ್ – ಸಾರ್ವಜನಿಕ ಆರೋಗ್ಯ ಸೇವೆ ತೀರ್ಮಾನ ಇವರಿಗೂ ಸನ್ಮಾನಿಸಲಾಯಿತು.

ಡಾ ಆನಂದ ಕೃಷನ್ ಪ್ರಾಧ್ಯಾಪಕರು ಸಮುದಾಯ ಆರೋಗ್ಯ ಸಂಘ ನವದೆಹಲಿ; ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗ ಡಾ ಶರಣಬಸಪ್ಪ ಕ್ಯಾತನಾಳ ನಿರ್ದೇಶಕರು ಜಿಮ್ಸ್ ವೈದ್ಯಕೀಯ ಶಿಕ್ಷಣ ಸಂಸ್ಥೆ, ಡಾ ಉಮೇಶ್ ಎಸ್ ಆರ್ ಡಾ ಜಿಮ್ಸ್ ವೈದ್ಯಕೀಯ ಶಿಕ್ಷಣ ಸಂಸ್ಥೆ, ವೈದ್ಯಕೀಯ ಅಧೀಕ್ಷಕರು ಶಿವಕುಮಾರ ಸಿ ಆರ್ ಆಯೋಜಕರಾಗಿ ಡಾ ಅಜಯಕುಮಾರ ಜಿ ಅಧ್ಯಕ್ಷರು ಏಂಅಲೂ , ಡಾ ಮೀನಾಕ್ಷಿ ಎಂ ದವಡೆ, ಡಾ ರಮೇಶ್ ಮತ್ತು ಡಾ ಗುರುರಾಜ ಎನ್ ಎ . ನಿರ್ದೇಶಕ ಕಮ್ ಡೀನ್ ಡಾ.ಶಿವಕುಮಾರ್ ಸಿ.ಆರ್ ವೈದ್ಯಕೀಯ ಸೂಪರಿಂಟೆಂಡೆಂಟ್ ಸಮಿತಿಗಳನ್ನು ಸಂಘಟಿಸುವುದು ಡಾ.ಅಜಯಕುಮಾರ್ ಜಿ ಏಂಅಲೂ ಅಧ್ಯಕ್ಷರು ಮತ್ತು ಸಂಘಟನಾ ಅಧ್ಯಕ್ಷರು ರಮೇಶ್ ಡಾ ಸಂಘಟನಾ ಕಾರ್ಯದರ್ಶಿ, ಜನರಲ್ ಕಾರ್ಯದರ್ಶಿ ಡಾ.ಟಿ.ಎಸ್. ರಂಗನಾಥ್ ಡಾ. ಗಿರೀಶ್ ಬಿ ಸಂಘಟನಾ ತಂಡ, ಸಿಬ್ಬಂದಿ ಇದ್ದರು.

## ಚಿಂತಾಕಿ, ಬಲ್ಲೂರ(ಜೆ) ವಸತಿ ಶಾಲೆಗಳಿಗೆ ಶಾಸಕ ಪ್ರಭು ಚವ್ಹಾಣ ಭೇಟಿ

# ಕಾಮಗಾರಿ ಶೀಘ್ರ ಪೂರ್ಣಗೊಳಿಸಲು ಸೂಚನೆ



**ಮಲ್ಲಮ್ಮ ನುಡಿ ವಾರ್ತೆ**

**ಔರಾದ:** ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಚಿಂತಾಕಿಯ ಡಾ.ಬಿ.ಆರ್ ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆ ಹಾಗೂ ಬಲ್ಲೂರ(ಜೆ) ಗ್ರಾಮದಲ್ಲಿನ ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಗೆ ನ.20ರಂದು ಭೇಟಿ ನೀಡಿ ಕಾಮಗಾರಿಗಳನ್ನು ಪರಿಶೀಲಿಸಿದರು.

ತರಗತಿಕೋಣೆಗಳು, ಪ್ರಯೋಗಾಯಾಲಯ, ಕಂಪ್ಯೂಟರ್ ಕೋಣೆ, ಲೈಬ್ರರಿ, ಭೋಜನಾಲಯ, ಬಾಲಕಿಯರ ವಸತಿ ನಿಲಯ ಸೇರಿದಂತೆ ವಸತಿ ಶಾಲೆಯ ಆವರಣದಲ್ಲಿ ಸಂಚರಿಸಿ ಕಾಮಗಾರಿ ಹೇಗೆ ನಡೆಯುತ್ತಿದೆ ಎಂದು ತಿಳಿದುಕೊಂಡರು. ನಮ್ಮ ಭಾಗದ ಬಡ ಮಕ್ಕಳಿಗೆ ಉಚಿತ ಮತ್ತು ಗುಣಮಟ್ಟದ ಶಿಕ್ಷಣ ಕಲ್ಪಿಸಬೇಕೆಂಬ ಉದ್ದೇಶದಿಂದ ಹಿಂದೆ ನಾನು ಸಚಿವನಾಗಿದ್ದಾಗ ಸಾಕಷ್ಟು ಪ್ರಯತ್ನಪಟ್ಟು ವಸತಿ ಶಾಲೆಗಳನ್ನು ಮಂಜೂರು ಮಾಡಿಸಿ, ಅವಶ್ಯಕ ಅನುದಾನ ತಂದು ಕೆಲಸ ಆರಂಭಿಸಿದ್ದೇನೆ ಎಂದು ಹೇಳಿದರು.

ಬಲ್ಲೂರ(ಜೆ) ವಸತಿ ಶಾಲೆಗೆ ಭೇಟಿ ನೀಡಿ ಅಂದಾಜು ಪಟ್ಟಿಯಲ್ಲಿ ಇರುವಂತೆ ಕೆಲಸ ಮಾಡಲಾಗುತ್ತಿದೆಯೇ ಎಂಬುದನ್ನು ತಿಳಿದುಕೊಂಡರು. ವಸತಿ ನಿಲಯದಲ್ಲಿನ ಬೆಡ್, ತರಗತಿ ಕೋಣೆಗಳಲ್ಲಿನ ಬೆಂಚುಗಳು ಹಾಗೂ ಮತ್ತಿತರೆ ಸೌಕರ್ಯಗಳನ್ನು ಗಮನಿಸಿ, ವಸತಿ ನಿಲಯದಲ್ಲಿನ ಎಲ್ಲ ಉಪಕರಣಗಳು ಗುಣಮಟ್ಟದಿಂದ ಕೂಡಿರಬೇಕು. ಈ ವಿಷಯದಲ್ಲಿ ಲೋಪವಾದರೆ ನಾನು ಸಹಿಸುವುದಿಲ್ಲವೆಂದು ಎಚ್ಚರಿಕೆ ನೀಡಿದರು. ಕಾಮಗಾರಿಗೆ ಚಾಲನೆ ನೀಡಿ ಬಹಳಷ್ಟು ದಿನಗಳಾಗಿವೆ. ನಿಗದಿತ ಅವಧಿಯಲ್ಲಿ ಕಾಮಗಾರಿ ಏಕೆ ಮುಗಿಸಿಲ್ಲವೆಂದು ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ತರಾ–ಟೆಗೆ ತೆಗೆದುಕೊಂಡರು. ಅಂ–ದಾಜು ಪಟ್ಟಿಯಲ್ಲಿರುವಂತೆ ಎಲ್ಲ ಕೆಲಸಗಳು ಪೂರ್ಣಗೊಳಿಸಬೇಕು. ಅಧಿಕಾರಿಗಳು ಕಾಲಕಾಲಕ್ಕೆ ಕಾಮಗಾರಿ ಸ್ಥಳಕ್ಕೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಬೇಕು. ಏನಾದರೂ ಲೋಪಗಳು ಕಾಣಿಸಿದರೆ ತಕ್ಷಣ ಸರಿಪಡಿಸಬೇಕು. ಇಲ್ಲವಾದರೆ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಿ ಅಧಿಕಾರಿಗಳ ವಿರುದ್ದವೂ ಕಠಿಣ ಕ್ರಮ ವಹಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.*ಬೇಗ ಆರಂಭಿಸಿ:* ಚಿಂತಾಕಿ ವಸತಿ ಶಾಲೆಗೆ ಭೇಟಿ ನೀಡಿದ ವೇಳೆ ವಿದ್ಯಾರ್ಥಿಗಳು ಶಾಸಕರನ್ನು ಭೇಟಿ ಮಾಡಿ ಪ್ರಸ್ತುತ ವಾಸವಿರುವ ತಾತ್ಕಾಲಿಕ ವಸತಿ ನಿಲಯ ತುಂಬಾ ಚಿಕ್ಕದಿದೆ. ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದ್ದು, ಸಾಕಷ್ಟು ಸಮಸ್ಯೆಯಾಗುತ್ತಿದೆ, ಬೇಗ ಹೊಸ ಕಟ್ಟಡ ಆರಂಭಿಸಬೇಕೆಂದು ಮನವಿ ಮಾಡಿದರು. ನಾನು ನಿಮಗೆ ಅನುಕೂಲವಾಗಬೇಕು ಎಂಬ ಉದ್ದೇಶದಿಂದಲೇ 15 ಕೋಟಿ ಅನುದಾನ ತಂದು ಭವ್ಯವಾದ ವಸತಿ ನಿಲಯವನ್ನು ನಿರ್ಮಿಸುತ್ತಿದ್ದೇನೆ. ಶೀಘ್ರ ಆರಂಭಿಸಬೇಕೆನ್ನುವುದು ನನ್ನ ಹಂಬಲವೂ ಇದೆ. ಇನ್ನು ಮುಂದೆ ವಿಳಂಬವಾಗಲು ಬಿಡುವುದಿಲ್ಲ. ಒಂದು ತಿಂಗಳೊಳಗಾಗಿ ಕಟ್ಟಡ ಆರಂಭಿಸಲು ಕ್ರಮ ವಹಿಸುತ್ತೇನೆ. ತಾವು ಸರಿಯಾಗಿ ಅಭ್ಯಾಸ ಮಾಡಬೇಕೆಂದು ಮಕ್ಕಳಿಗೆ ಕಿವಿಮಾತು ಹೇಳಿದರು.*ಕುಡಿಯುವ ನೀರಿನ ಸಮಸ್ಯೆ:* ಬಲ್ಲೂರ(ಜೆ) ಶ್ರೀಮತಿ ಇಂದಿರಾಗಾಂದಿ ವಸತಿ ನಿಲಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಪ್ರಾಚಾರ್ಯರು ವಸತಿ ನಿಲಯದ ಆವರಣದಲ್ಲಿ ಈಗಾಗಲೇ 2–3 ಕೊಳವೆ ಬಾವಿಗಳನ್ನು ಕೊರೆಸಿದರೂ ನೀರು ಸಿಗುತ್ತಿಲ್ಲ. ಸುಮಾರು 250 ವಿದ್ಯಾರ್ಥಿಳಿರುವ ವಸತಿ ಶಾಲೆಗೆ ನೀರಿನ ವ್ಯವಸ್ಥೆ ಮಾಡಿಕೊಡಬೇಕೆಂದು ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಶಾಸಕರು ಸಾಕಷ್ಟು ಪ್ರಯತ್ನಪಟ್ಟು ವಸತಿ ನಿಲಯವನ್ನು ವಸತಿ ಶಾಲೆಯನ್ನು ಮಂಜೂರು ಮಾಡಿಸಿ ಕೆಲಸ ಆರಂಭಿಸಲಾಗಿದೆ. ಯಾವುದೇ ರೀತಿಯ ಕೊರತೆಗಳು ಇರದಂತೆ ನೋಡಿಕೊಳ್ಳಬೇಕು. ಈ ದಿಶೆಯಲ್ಲಿ ನನ್ನ ಸಹಕಾರ ಸದಾ ಇರುತ್ತದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಪ್ರೇಮಸಾಗರ, ಎಂಜಿನೀಯರ ರಮೇಶ ಕೋಟೆ, ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಶಿವರಾಜ ಅಲ್ಮಾಜೆ, ಸಚಿನ ರಾಠೋಡ, ದಯಾನಂದ ಘೂಳೆ, ಕೇರಬಾ ಪವಾರ್, ರವೀಂದ್ರರೆಡ್ಡಿ ಉಜನಿ, ರಾಜಪ್ಪ ಸೋರಾಳೆ, ಈರಾರೆಡ್ಡಿ ನಾಗನಪಲ್ಲಿ, ಗೋವಿಂದರೆಡ್ಡಿ ಎನಪತ್ಲೆ, ಗೋವಿಂದ ರೆಡ್ಡಿ, ಖಾಜಾಮಿಯ್ಯಾ, ಸಂಜು ಉಪ್ಪಾರ, ಮಾರುತಿರೆಡ್ಡಿ ಪಟ್ನೆ, ಅಶೋಕ ಶೆಂಬೆಳ್ಳಿ, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧಿಕಾರಿಗಳು, ವಸತಿ ಶಾಲೆಗಳ ಪ್ರಾಂಶುಪಾಲರು ಸೇರಿದಂತೆ ಇತರರು ಉಪಸ್ಥಿತರಿದ್ದರು

## ವಿದ್ಯಾರ್ಥಿಗಳು ಭವಿಷ್ಯತ್ತಿನ ಪರಿಜ್ಞಾನ ಹೊಂದಿರಲಿ



**ಮಲ್ಲಮ್ಮ ನುಡಿ ವಾರ್ತೆ**

**ಔರಾದ.:** ವಿದ್ಯಾರ್ಥಿಗಳು ಇತಿಹಾಸದ ಜೊತೆಗೆ ಭವಿಷ್ಯತ್ತಿನ ಪರಿಜ್ಞಾನ ಹೊಂದಿ ಕನಸನ್ನು ನನಸಾಗಿಸಿಕೊಳ್ಳಬೇಕು ಎಂದು ಯನಗುಂದಾ ಸರಕಾರಿ ಪ್ರೌಢಶಾಲೆಯ ಸಂಪನ್ಮೂಲ ಶಿಕ್ಷಕರಾದ ಜಗನ್ನಾಥ ದೇಶಮುಖ ಹೇಳಿದರು.

ಸಂತಪೂರ ಸಿದ್ದರಾಮೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಗುರುವಾರ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಗುರಿ ಸಾಧಿಸಲು ಯೋಜನಾಬದ್ಧವಾಗಿ, ಏಕಾಗ್ರತೆ ಹಾಗೂ ಸಮಯ ಪ್ರಜ್ಞೆಯಿಂದ ಅಧ್ಯಯನ ಮಾಡಿದರೆ ಖಂಡಿತ ಯಶಸ್ವಿ ಹೊಂದಲು ಸಾಧ್ಯ ಎಂದರು.

ಮುಖ್ಯ ಶಿಕ್ಷಕರಾದ ಶಿವಕುಮಾರ ಹಿರೇಮಠ ಮಾತನಾಡಿ ವಿದ್ಯಾರ್ಥಿಗಳು ಮಾನವೀಯ ಮೌಲ್ಯ ಉತ್ತಮ ಹವ್ಯಾಸ ಹಾಗೂ ಧನಾತ್ಮಕ ವಾತಾವರಣದಲ್ಲಿ ಬೆಳೆದಾಗ ಮಾತ್ರ ಉತ್ತಮ ಜೀವನ ನಡೆಸಲು ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿ ಪ್ರಾಂಶುಪಾಲ ನವೀಲಕುಮಾರ ಉತ್ಕಾರ ಮಾತನಾಡಿದರು. ಪ್ರಾಂಶುಪಾಲೆ ಗುರ್ಪ್ರೀತ್ ಕೌರ್, ಉಪನ್ಯಾಸಕರಾದ ಪ್ರಿಯಾಂಕಾ ಗೊನ್ನಳಿಕರ್, ಸುಧಾ ಕೌಟಿಗೆ, ವನದೇವಿ ಎಕ್ಕಳೆ, ಶಿವಪುತ್ರ ಧರಣಿ, ಸಂತೋಷ ಧೂಳ್ಗಂಡೆ, ಸುಧೀರ್ ಅಲೂರೆ, ಮಹಾಂತೇಶ್ ಪಾಂಚಾಳ, ರಾಜಕುಮಾರ ಹಳ್ಳಿಕರ್ ಇದ್ದರು. ಸುರೇಶ್ ಬಂಡೆ ನಿರೂಪಿಸಿದರು. ಅಶ್ವಿನಿ ಹಿಂದೊಡ್ಡೆ ಸ್ವಾಗತಿಸಿದರು.

## ಗ್ರೇಡ್–2 ಸಹ ಶಿಕ್ಷಕರ ಜ್ಯೇಷ್ಠತಾ ಪಟ್ಟಿ ಪ್ರಕಟ

**ಮಲ್ಲಮ್ಮ ನುಡಿ ವಾರ್ತೆ**

**ಕಲಬುರಗಿ,** ನ.2 ಶಾಲಾ ಶಿಕ್ಷಣ ಇಲಾಖೆಯ ಕಲಬುರಗಿ ಆಯುಕ್ತಾಲಯ ವ್ಯಾಪ್ತಿಯ ಜಿಲ್ಲೆಗಳ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ಗ್ರೇಡ್–2 ಮತ್ತು ತತ್ಸಮಾನ ವೃಂದದ ಶಿಕ್ಷಕರ ದಿ.01.01.2025 ರಲ್ಲಿದ್ದಂತೆ ಅಂತಿಮ ಜ್ಯೇಷ್ಠತಾ ಪಟ್ಟಿಯನ್ನು ಇಲಾಖೆಯ ಅಂತರ್ಜಾಲ ವಿಳಾಸ https://cpikalaburgi.karnataka.gov.in ನಲ್ಲಿ ಪ್ರಕಟಿಸಲಾಗಿದೆ.ಎಂದು ಆಯುಕ್ತಾಲಯದ ವಿಭಾಗೀಯ ಸಹ ನಿರ್ದೇಶಕ ಎನ್.ಎಚ್.ನಾಗೂರ ತಿಳಿಸಿದ್ದಾರೆ.

## ನದಿಸಿನ್ನೂರ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಉಚಿತ ಬ್ಯಾಗ್ ವಿತರಣೆ



ಕಲಬುರಗಿ: ನೋವೆಲ್ ಹೋಪ್ ಫೌಂಡೇಶನ್ ಬೆಂಗಳೂರು ವತಿಯಿಂದ ನದಿಸಿನ್ನೂರ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸೇರಿ ಕಲಬುರಗಿ ಜಿಲ್ಲೆಯ ಒಟ್ಟು 26 ಶಾಲೆಗಳಿಗೆ 4,233 ಬ್ಯಾಗ್‌ಗಳನ್ನು ಉಚಿತವಾಗಿ ನೀಡಲಾಯಿತು. ಈ ಸಂದರ್ಭದಲ್ಲಿ ಸೀನಿಯರ್ ಸಿಎಸ್‌ಆರ್ ಎಕ್ಸಿಕ್ಯೂಟಿವ್ ಎನ್‌ಹೆಚ್‌ಎಫ್ ದೀಪಕ್ ಆರ್ ಅವರು ಮಾತನಾಡಿ ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಯ ಮಕ್ಕಳ ಶಿಕ್ಷಣದ ಗುಣಮಟ್ಟವು ಹೆಚ್ಚಾಗಬೇಕು ಹಾಗೂ ಹಾಜರಾತಿ ಹೆಚ್ಚಿಸ ಬೇ–ಕೆಂಬ ಸದುದ್ದೇಶದಿಂದ ನಾವು ಇಂದು ಈ ಶಾಲೆಗೆ ಬ್ಯಾಗ್‌ಗಳನ್ನು ಉಚಿತವಾಗಿ ನೀದಿದ್ದೇವೆ. ಅಲ್ಲದೆ ನಮ್ಮ ಫೌಂಡೇಶನ್ ವತಿಯಿಂದ ಊಟದ ತಟ್ಟೆ, ವಾಟರ್ ಬಾಟಲ್, ಟ್ರಾಕ್ ಸೂಟ್ ಮುಂದಿನ ದಿನಗಳಲ್ಲಿ ನೀಡುತ್ತೇವೆ ಹಾಗೂ ಅವಶ್ಯಕತೆ ಇರುವಲ್ಲಿ ಶೌಚಾಲಯಗಳು ಕೂಡ ನಿರ್ಮಿಸಿ ಕೊಡುತ್ತೇವೆ ಎಂದು ತಿಳಿಸಿದರು. ಅಲ್ಲದೆ ಇನ್ನು ಈ ಭಾಗಕ್ಕೆ ಹೆಚ್ಚಿನ ಪ್ರಮಾಣದಲ್ಲಿ ಸಹಾಯ ಸಹಕಾರ ನೀಡಲು ಪ್ರಯತ್ನಿಸುತ್ತೇನೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಬಿಆರ್‌ಪಿ ಶ್ರೀಮತಿ ಬಸಮ್ಮ, ಶಿಕ್ಷಣ ಸಂಯೋಜಕರಾದ ದಿನೇಶ್ ತಂಬಾಡ್, ಎಸ್‌ಡಿಎಂಸಿ ಅಧ್ಯಕ್ಷರಾದ ಶಂಕರ್ ಕಟ್ಟಿಮನಿ, ಶಾಲಾ ಮುಖ್ಯ ಗುರುಗಳಾದ ಮೌನೇಶ್ ಬಡಿಗೇರ, ಶ್ರೀಮತಿ ವಿಜಯಲಕ್ಷ್ಮಿ ಲಿಂಗರಾಜ್ ತಾರಫೈಲ್, ವಿಜಯಕುಮಾರ್, ಶ್ರೀಮತಿ ಸುನಂದ ವಿಜಯಕುಮಾರ್, ಮಹಬೂಬ್, ಶ್ರೀಮತಿ ಗಿರಿಜಾ, ಶ್ರೀಮತಿ ದೇವಕಮ್ಮ, ಶ್ರೀಮತಿ ಸುಜಾತ, ಶ್ರೀಮತಿ ಆಶಾ ರಾಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಹುಣಜಿ(ಕೆ) : ಪ್ರತಿಭಾ ಕಾರಂಜಿ ಕಾರ್ಯಕ್ರಮ



**ಮಲ್ಲಮ್ಮ ನುಡಿ ವಾರ್ತೆ**

**ಭಾಲ್ಕಿ:** ಮಕ್ಕಳ ಪ್ರತಿಭೆ ಹೊರತರಲು ಪ್ರತಿಭಾ ಕಾರಂಜಿ, ಕಲೋತ್ಸವ ಸಹಕಾರಿಯಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ ಹೇಳಿದರು. ತಾಲೂಕಿನ ಹುಣಜಿ(ಕೆ) ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಗುರುವಾರ ಆಯೋಜಿಸಿದ್ದ 2025–26ನೇ ಸಾಲಿನ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ, ಅವರಲ್ಲಿ ಅಡಗಿರುವ ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಪ್ರತಿಭೆಯನ್ನು ಅನಾವರಣಗೊಳಿಸಲು ಒಂದು ಮಹತ್ವದ ವೇದಿಕೆಯಾಗಿದೆ.

ಇದು ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಾದ ಜನಪದ ಕಲೆ, ಸಂಗೀತ, ನೃತ್ಯ, ಯೋಗ, ಭಾಷಣ, ಅಶುಭಾಷಣ, ವೇಷಭೂಷಣ ಮತ್ತು ಇತರ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶ ನೀಡುತ್ತದೆ. ಸಭಾ ನಡುವಳಿಕೆಗಳ ಬಗ್ಗೆ ಅರಿವು ಮೂಡಿಸುತ್ತದೆ ಇದರಿಂದ ಮಕ್ಕಳಿಗೆ ಸರ್ವಾಂಗೀಣ ಬೆಳವಣಿಗೆ ಸಾಧ್ಯವಾಗುತ್ತದೆ. ಅಲ್ಲದೆ, ಗ್ರಾಮೀಣ ಪ್ರದೇಶದ ಮಕ್ಕಳ ಪ್ರತಿಭೆಯನ್ನು ಹೊರತರುವಲ್ಲಿ ಇದು ವಿಶೇಷ ಪಾತ್ರ ವಹಿಸುತ್ತದೆ ಮತ್ತು ಸ್ಪರ್ಧಾತ್ಮಕ ಮನೋಭಾವವನ್ನು ಬೆಳೆಸಲು ಅತ್ಯಂತ ಸಹಕಾರಿಯಾಗಿದೆ ಎಂದು ತಿಳಿಸಿದರು.

ಎಸ್‌ಡಿಎಂಸಿ ಅಧ್ಯಕ್ಷ ಹುಲೆಪ್ಪ ಮಾನಕಾರ್ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ತಾಲೂಕು ಸರಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಪ್ರಮುಖರಾದ ರಾಜಪ್ಪ ಪಾಟೀಲ್, ಶರಣಪ್ಪ ಕೆ, ಅಂಬರೀಷ ಖಂಡ್ರೆ, ಶಿರೋಮಣಿ ಆಚಾರ್ಯ, ನಾಗರಾಜ ಪಾಟೀಲ್, ಮಲ್ಲಿಕಾರ್ಜುನ ಪಾಟೀಲ್, ಕಲ್ಯಾಣರಾವ ಮೊಳಕೇರೆ, ಪ್ರಕಾಶ ಗೌಡಪ್ಪೋನರ್, ಮಾಣಿಕರಾವ ಪಾಟೀಲ್, ಧೂಳಪ್ಪ, ಮುಖ್ಯಗುರು ಶಾಂತಣ್ಣ ಸೇರಿದಂತೆ ಹಲವರು ಇದ್ದರು. ಸಿಆರ್‌ಪಿ ಸೋಮನಾಥ ವರ್ದಾ ಸ್ವಾಗತಿಸಿದರು. ಇಸಾ ಪಟೇಲ್ ನಿರೂಪಿಸಿ, ವಂದಿಸಿದರು.

## ಕೋಲಿ ಸಮಾಜಕ್ಕೆ ನ್ಯಾಯ ಒದಗಿಸಿ, ತಿಪ್ಪಣ್ಣಪ್ಪ ಕಮಕನೂರ ಅವರಿಗೆ ತಕ್ಷಣ ಸಚಿವ ಸ್ಥಾನ ನೀಡಿ: ನಿಂಗಪ್ಪ ದೇವಣಗಾಂವ

ಕಲಬುರಗಿ: ಕೋಲಿ ಸಮಾಜದ ನಾಯಕರಾದ ತಿಪ್ಪಣ್ಣಪ್ಪ ಕಮಕನೂರ ಅವರಿಗೆ ಸಚಿವ ಸ್ಥಾನ ನೀಡುವ ಮೂಲಕ ಸಮಾಜಕ್ಕೆ ನಿಜವಾದ ಸಾಮಾಜಿಕ ನ್ಯಾಯ ಒದಗಿಸಬೇಕೆಂದು ಕೋಲಿ ಸೈನ್ಯದ ರಾಜ್ಯಾಧ್ಯಕ್ಷ ನಿಂಗಪ್ಪ ಆರ್. ದೇವಣಗಾಂವ ಆಗ್ರಹ ವ್ಯಕ್ತಪಡಿಸಿದ್ದಾರೆ.

"ಕೋಲಿ ಸಮಾಜಕ್ಕೆ ನ್ಯಾಯ ಕೊಡಬೇಕಾದರೆ ತಿಪ್ಪಣ್ಣಪ್ಪ ಕಮಕನೂರ ಅವರನ್ನು ಮಂತ್ರಿಯಾಗಿಸುವುದು ಅನಿವಾರ್ಯ. ಸಮಾಜವನ್ನು ನಿರ್ಲಕ್ಷ್ಯ ಮಾಡುವ ಕ್ರಮ ಮುಂದುವರಿದರೆ ಜನರು ಮುಂದಿನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಲು ಸಿದ್ಧರಾಗಿದ್ದಾರೆ," ಎಂದು ಎಚ್ಚರಿಕೆ ನೀಡಿದರು.

ಕೋಲಿ ಸಮಾಜವನ್ನು ಪರಿಶಿಷ್ಟ ಪಂಗಡ (ಖಖ) ಪಟ್ಟಿಗೆ ಸೇರಿಸುವುದು ಸಮಾಜದ 30–40 ವರ್ಷಗಳ ಹೋರಾಟ ರಾಜ್ಯದಲ್ಲಿ ಕಾಂಗ್ರೆಸ್ ಹಲವಾರು ಬಾರಿ ಆಡಳಿತ ನಡೆಸಿದರೂ, ಈ ಮೂಲಭೂತ ಬೇಡಿಕೆ ಇದುವರೆಗೆ ಈಡೇರದಿರುವುದಕ್ಕೆ ದೇವಣಗಾಂವ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದಲ್ಲಿ 40–50 ಲಕ್ಷ ಜನಸಂಖ್ಯೆ ಹೊಂದಿರುವ ಕೋಲಿ ಸಮಾಜ, ಕಾಂಗ್ರೆಸ್ ಪಕ್ಷಕ್ಕೆ ಪ್ರಮುಖ ಬೆಂಬಲ ನೀಡುತ್ತಾ ಬಂದಿದ್ದೇವೆ. "ಕಾಂಗ್ರೆಸ್ ಪಕ್ಷ ನಮ್ಮ ಮತ ಪಡೆದು ಅಧಿಕಾರಕ್ಕೆ ಬರುತ್ತದೆ, ಆದರೆ ಸಚಿವ ಸ್ಥಾನ ಹಾಗೂ ರಾಜಕೀಯ ಪ್ರತಿನಿಧಿತ್ವ ನೀಡುವಲ್ಲಿ ವಿಫಲವಾಗುತ್ತದೆ," ಎಂದು ಗಂಭೀರ ಆರೋಪ ಮಾಡಿದರು.

ಕಾಂಗ್ರೆಸ್ ಸರ್ಕಾರದಲ್ಲಿ ಒಬ್ಬ ಕೋಲಿ ಸಮಾಜದ ಸಚಿವ ಇಲ್ಲದಿರುವುದು, ನಾಚಿಕೆಗೇಡಿನ ಸಂಗತಿಯಾಗಿದೆ ಆದರೆ ಸಿದ್ದರಾಮಯ್ಯ ಅವರ ಸಚಿವ ಸಂಪುಟದಲ್ಲಿ ತಿಪ್ಪಣ್ಣಪ್ಪ ಕಮಕನೂರ ಸಚಿವರನ್ನಾಗಿ ಮಾಡಿ ಕೋಲಿ ಸಮಾಜಕ್ಕೆ ಆದ ಅನ್ಯಾಯವನ್ನು ಸರಿಪಡಿಸಬೇಕೆಂದು ದೇವಣಗಾಂವ ಆಗ್ರಹಿಸಿದ್ದಾರೆ. ಈ ಸಮುದಾಯಕ್ಕೆ ಪ್ರತಿನಿಧಿತ್ವ ನೀಡದೆ ಇರುವುದರಿಂದ ಪಕ್ಷ ತನ್ನ ಶಕ್ತಿ ನೆಲೆ ಕಳೆದುಕೊಳ್ಳುವ ಸಾಧ್ಯತೆ ಇದೆ ಎಂಬ ದೇವಣಗಾಂವ ಎಚ್ಚರಿಕೆಯನ್ನು ನೀಡಿದ್ದಾರೆ.

ಸಿಎಂ ಸಿದ್ಧರಾಮಯ್ಯಗೆ ನೇರ ಆಗ್ರಹ :ಹಿಂದುಳಿದ ವರ್ಗಗಳ ಪರ ಹೋರಾಡುವ ನಾಯಕತ್ವ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೋಲಿ ಸಮಾಜದ ಈ ನ್ಯಾಯಬದ್ದ ಬೇಡಿಕೆಯನ್ನು ತಕ್ಷಣ ಪರಿಗಣಿಸಿ ತಿಪ್ಪಣ್ಣಪ್ಪ ಕಮಕನೂರ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು

# ಯಾದಗಿರಿ ಜಿಲ್ಲೆಗೆ ಇಂಧನ ಸಚಿವ ಶ್ರೀ ಕೆ.ಜೆ.ಜಾರ್ಜ್ ಅವರ ಪ್ರವಾಸ

**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** ನ, ಇಂಧನ ಸಚಿವರು ಹಾಗೂ ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ನವೆಂಬರ್ 24ರ ಸೋಮವಾರ ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ತಿಳಿಸಿದ್ದಾರೆ.

2025ರ ನವೆಂಬರ್ 24ರ ಸೋಮವಾರ ರಂದು ಬೆಳಿಗ್ಗೆ 10.30 ಗಂಟೆಗೆ ಯಾದಗಿರಿ ಜಿಲ್ಲಾ ಕ್ರೀಡಾಂಗಣ ಹೆಲಿಪ್ಯಾಡ್ ಆಗಮಿಸಿ, ಬೆಳಿಗ್ಗೆ 11 ಗಂಟೆಗೆ ಯಾದಗಿರಿ ಜಿಲ್ಲಾ ಪಕ್ಷದ ಕಚೇರಿಗೆ ಭೇಟಿ ನೀಡಲಿದ್ದಾರೆ. ನಂತರ ಮಧ್ಯಾಹ್ನ 12 ಗಂಟೆಗೆ ಯಾದಗಿರಿ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಇಂಧನ ಇಲಾಖೆಯ ವಿಷಯಗಳ ಕುರಿತು ಚರ್ಚಿಸಲು ಜಿಲ್ಲೆಯ ಚುನಾಯಿತ ಜನ ಪ್ರತಿನಿಧಿಗಳೊಂದಿಗೆ ಸಭೆ ನಡೆಸುವರು. ತದನಂತರ ಮಧ್ಯಾಹ್ನ ಸಮಯಕ್ಕೆ ಪತ್ರಿಕಾಗೋಷ್ಠಿ ನಡೆಸುವರು.ಮಧ್ಯಾಹ್ನ 2.30 ಗಂಟೆಗೆ ಯಾದಗಿರಿ ಜಿಲ್ಲಾ ಕ್ರೀಡಾಂಗಣ ಹೆಲಿಪ್ಯಾಡ್‌ದಿಂದ ಹೆಲಿಕ್ಯಾಪ್ಟರ್ ಮೂಲಕ ವಿಜಯನಗರ ಜಿಲ್ಲೆ ಹೊಸಪೇಟ ಹಂಪಿ ವಿಶ್ವವಿದ್ಯಾನಿಲಯಕ್ಕೆ ಪ್ರಯಾಣ ಬೆಳೆಸಿ ವಾಸ್ತವ್ಯ ಮಾಡುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಗ್ ಬಾಸ್ ಸ್ಪರ್ಧಿ ಮಲ್ಲಮ್ಮಗೆ ಅದ್ದೂರಿ ಸ್ವಾಗತ



**ಮಲ್ಲಮ್ಮ ನುಡಿ ವಾರ್ತೆ**

**ಸುರಪುರ :** ಕಲರ್ಸ ಕನ್ನಡ ಸಿನೆಮಾ ಚಾನಲ್ ನ ಬಾಸ್ ಸೀಜನ್ 12ರ ಸ್ಪರ್ದಿ ಮಲ್ಲಮ್ಮ ಬಾವಿರವರನ್ನುಸುರಪುರತಾಲ್ಲೂಕಿನ ಸ್ವಗ್ರಾಮವಾದ ಕನ್ನೆಳ್ಳಿ ಗ್ರಾಮಸ್ಥರು ಎತ್ತಿನಬಂಡಿಯಲ್ಲಿಅದ್ದೂರಿಯಾಗಿ ಮೆರವಣಿಗೆ ನಡೆಸಿದರು.

ನಟ ಮನೋಜ್ ಕುಮಾರ್ ಹಾಗೂ ಸೆಲೆಬ್ರಿಟಿಸ್ ಪಲ್ಲವಿ ಲಕ್ಷ್ಮೀಕಾಂತಗೌಡ ಜೊತೆಗೆ ಮಲ್ಲಮ್ಮ ಬಾವಿಯವರನ್ನುಗ್ರಾಮದ ಪ್ರಮುಖ ಬೀದಿಗಳಲ್ಲಿ ಶಾಲಾ ಮಕ್ಕಳು ಲೇಜಿಮ್ ತಂಡದ ಜೊತೆಗೆ ಡೊಳ್ಳುಕುಣಿತದ ತಂಡದೊಂದಿಗೆ ಎತ್ತಿನ ಬಂಡಿಯಲ್ಲಿ ಮೆರವಣಿಗೆ ಮಾಡಲಾಯಿತು.

ನಂತರ ಕನ್ನೆಳ್ಳಿ ಗ್ರಾಮಸ್ಥರ ವತಿಯಿಂದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು .

ಆಕಾಶವಾಣಿ ಕಲಾವಿದರಾದ ವೀರೇಶ ಗವಾಯಿಗಳು ಹಾಗೂ ಮಹಾಂತೇಶ ಹೆಗ್ಗಣದೊಡ್ಡಿ ಯವರಿಂದ ಸಂಗೀತ ಕಾರ್ಯಕ್ರಮ ಜರುಗಿತು.

ಡೊಳ್ಳು ವಾದ್ಯ ಬಾರಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ದೇವದುರ್ಗದ ಮಲದಕಲ್ ಪೂಜ್ಯರು, ನಗನೂರು ಸೂಗೂರೇಶ್ವರ ಮಠದ ಪೂಜ್ಯರು, ಹೆಗ್ಗಣದೊಡ್ಡಿ ಧರ್ಮರ ಮಠದ ಪೂಜ್ಯರು, ಶಹಾಪುರ ಚರಬಸವೇಶ್ವರ

ಗದ್ದುಗೆ ಸಂಸ್ಥಾನದ ಪೂಜ್ಯರಾದ ಶರಣುಗದ್ದುಗೆ,ಬಂಡೆಪ್ಪನಹಳ್ಳಿಪೂಜ್ಯರು ಕನ್ನೆಳ್ಳಿಗ್ರಾಮದ ಮಲ್ಲಯ್ಯ ಮುತ್ಯಾ, ಪಂಚಯ್ಯ ಮುತ್ಯಾ, ಗೋವಿಂದ ರಾಜ ದೇವರು, ದೊಡ್ಡಪ್ಪಗೌಡ ಪೊಲೀಸ್ ಪಾಟೀಲ್, ಬಾಪುಗೌಡ ಮಾಲಿಪಾಟೀಲ್ ಸುರಪುರ ಪಿಎ ಸಿದ್ದಣ್ಣ ಯಡ್ರಾಮಿ ಸೇರಿದಂತೆ ಇತರರು ವೇದಿಕೆ ಮೇಲಿದ್ದರು.

ಗ್ರಾಮದ ಪ್ರಮುಖರಾದ ನಿಂಗಣ್ಣ ಗೋಡಿಹಾಳ್ಕರ್, ಬಸವರಾಜ ನಾಯ್ಕೋಡಿ, ಮಡಿವಾಳಪ್ಪ ಕೊಂಡಗುಳಿ, ಚಂದಪ್ಪನಾಯ್ಕೋಡಿ, ನಾದಬ್ರಹ್ಮ ಹೆಬ್ಬಾಳ್ಕರ್, ಮಲ್ಲಣ್ಣ ಹಡಪದ, ಮಲ್ಲಿಕಾರ್ಜುನ ಕುಂಬಾರ ಸೇರಿದಂತೆ ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಮತ್ತು ಮಕ್ಕಳು ಇದ್ದರು.

ಸಗರನಾಡು ಸೇವಾ ಪ್ರತಿಷ್ಠಾನದ ಅಧ್ಯಕ್ಷಪ್ರಕಾಶ್ ಅಂಗಡಿನಿರೂಪಿಸಿದರು, ಮಲ್ಲು ಚಾನಕೋಟಿ ಸ್ವಾಗತಿಸಿದರು.

**ವರದಿ : ಶಿವು ರಾಠೋಡ**

# ಸತ್ಕಾರ್ಯಗಳಿಂದ ಬದುಕು ಸಾರ್ಥಕ ಶ್ರೀ ರಂಭಾಪುರಿ ಜಗದ್ಗುರುಗಳು



**ಮಲ್ಲಮ್ಮ ನುಡಿ ವಾರ್ತೆ**

**ಗುರುಮಠಕಲ್:** ನವಂಬರ್-2

ಯೌವನ ಸಂಪತ್ತು ಆಯುಷ್ಯ ಶಾಶ್ವತವಲ್ಲ. ಧರ್ಮ ದೇವರು ಮನಸ್ಸನ್ನು ಅರಳಿಸಲು ಬೇಕು. ಕಣ್ಣು ಒಳ್ಳೆಯದನ್ನು ಕಾಣಲಿ. ಕಿವಿ ಒಳ್ಳೆಯದನ್ನು ಕೇಳಲಿ. ನಾಲಿಗೆಯಿಂದ ಒಳ್ಳೆಯದನ್ನು ನುಡಿಯುವಂತಾದರೆ ಜೀವನ ಪಾವನ. ಸತ್ಕಾರ್ಯಗಳ ಮೂಲಕ ಮಾನವ ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ನಗರದ ಎಸ್.ಎಮ್.ಆರ್. ಕಲ್ಯಾಣ ಮಂಟಪದಲ್ಲಿ ಮಣ್ಣಿನಿಂದ ಮುಕ್ತಿಗೆ-ಆಧ್ಯಾತ್ಮಿಕ ಚಿಂತನ ಮಂಥನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬದುಕು ಭಗವಂತ ಕೊಟ್ಟ ಅಮೂಲ್ಯ ಕೊಡುಗೆ. ಆದರ್ಶ ಮೌಲ್ಯಗಳ ಪರಿಪಾಲನೆಯಿಂದ ಬದುಕನ್ನು ಕಟ್ಟಿಕೊಳ್ಳಲು ಪ್ರಯತ್ನಿಸಬೇಕು. ಮನಕ್ಕೆ ಶಾಂತಿ ಆತ್ಮಕ್ಕೆ ಆನಂದ ಕೊಡುವುದು ಧರ್ಮ. ಸಮಾಜದ ಕಷ್ಟ ಸುಖಗಳನ್ನು ಚಿಂತಿಸಿ ಅವುಗಳಿಗೆ ಪರಿಹಾರ ಹುಡುಕಿ ಕಾರ್ಯ ಪ್ರವೃತ್ತರಾಗುವುದೇ ನಿಜವಾದ ಧರ್ಮವಾಗಿದೆ. ಮನುಷ್ಯ ಧರ್ಮಕ್ಕೆ ತಲೆಬಾಗಬೇಕೇ ಹೊರತು ಅವಿವೇಕಿಗಳಿಗಲ್ಲ. ಸಂಬಂಧವೆಂದರೆ ವಯಸ್ಸು ದೂರ ಸಂಪರ್ಕಗಳನ್ನು ಮೀರಿದ ಸ್ಥಿತಿ. ವಿಶ್ವಾಸ ನಿಷ್ಠೆಗಳಿಂದ ಮಾತ್ರ ನಿಜ ಸಂಬಂಧ ಉಳಿಯಲು ಸಾಧ್ಯ. ಬೀಜದಂತೆ ಮನುಷ್ಯನಲ್ಲಿಯೂ ಸಹ ಅದ್ಭುತ ಶಕ್ತಿ ಸಾಮರ್ಥ್ಯವಿದೆ. ಬೀಜದಿಂದ ವೃಕ್ಷ ಬೆಳೆಯುತ್ತದೆ. ಸುಂದರ ಹೂವು ರುಚಿಯಾದ ಹಣ್ಣು ಮೈತುಂಬ ಹಸಿರು ಎಲೆ ತಣ್ಣನೆಯ ನೆರಳು ಶುದ್ಧವಾದ ಗಾಳಿ ಕೊಡುತ್ತದೆ.

ಮನುಷ್ಯನಲ್ಲಿರುವ ಸಾಮರ್ಥ್ಯವನ್ನು ಸದ್ಬಳಕೆ ಮಾಡಿಕೊಂಡುಬಾಳಿದರೆಜೀವನಉತ್ತುಂಗಕ್ಕೇರುವುದೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿ ಧರ್ಮಗ್ರಂಥದಲ್ಲಿ ಬೋಧಿಸಿದ್ದಾರೆ. ಅರಿತು ಆಚರಿಸಿ ಜೀವನವನ್ನು ಸಾರ್ಥಕ ಪಡಿಸಿಕೊಳ್ಳಬೇಕೆಂದರು.

ಸಗರ ನಾಗಠಾಣ ಹಿರೇಮಠದ ಸೋಮೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಮಳಖೇಡ ಮೂಲಾಧಾರ ಹಿರೇಮಠದ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯ ಸ್ವಾಮಿಗಳು, ಮಳಖೇಡ ಬಂಗಿಮಠದ ಕೊಟ್ಟೂರೇಶ್ವರ ಶಿವಾಚಾರ್ಯ ಸ್ವಾಮಿಗಳು, ಕೆಂಭಾವಿ ಹಿರೇಮಠದ ಚನ್ನಬಸವ ಶಿವಾಚಾರ್ಯ ಸ್ವಾಮಿಗಳು ಸಮ್ಮುಖ ವಹಿಸಿ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಶಾಸಕ ಶರ-ಣಗೌಡ ಕಂದಕೂರು ಮಾತನಾಡಿ ಜೀವನಾಧಾರಕ್ಕೆ ನೀರು ಅನ್ನ ಗಾಳಿ ಬೆಳಕು ಮತ್ತು ಒಳ್ಳೆಯ ಮಾತು ಬಹಳ ಮುಖ್ಯ. ಮಾನವೀಯತೆಯೇ ಭಾರತೀಯ ಸಂಸ್ಕೃತಿಯ ತಳಹದಿ. ಬಾಯಾರಿದವನಿಗೆ ನೀರು ಹಸಿದವನಿಗೆ ಅನ್ನ ಕೊಡುವುದೇ ನಿಜವಾದ ಧರ್ಮ. ಸಕಲ ಧರ್ಮಕ್ಕೂ ದಯೆ ಮತ್ತು ಮಾನವೀಯತೆ ಮುಕುಟಪ್ರಾಯವಾಗಿದೆ.

ಪಂಚ ಭೂತಗಳಿಂದ ನಿರ್ಮಾಣಗೊಂಡ ಈ ಜೀವ ಜಗತ್ತು ಕೊನೆಗೆ ಒಂದು ದಿನ ಮಣ್ಣಿನಲ್ಲಿ ಮಣ್ಣಾಗಿ ಹೋಗುತ್ತದೆ. ಅರಿವುಳ್ಳ ಜನ್ಮದಲ್ಲಿ ಹುಟ್ಟಿದ ಮೇಲೆ ಹುಟ್ಟಿದ ಮೇಲೆ ಒಂದಿಷ್ಟಾದರೂ ಶಿವಜ್ಞಾನ ಪಡೆದು ಗುರು ಕಾರುಣ್ಯಕ್ಕೆ ಒಳಗಾದರೆ ಜೀವನ ಸಾರ್ಥಕಗೊಳ್ಳುವುದೆಂದರು.

ಲವೀಶ ಒರಡಿಯ, ಪೃಥ್ವಿಕ್ ಶಂಕರ್, ರೇವಣಸಿದ್ಧಯ್ಯ ಡೆಂಗಿಮಠ ಉಪಸ್ಥಿತರಿದ್ದರು.

ಕಾರ್ಯಕ್ರಮ ಸಂಯೋಜಿಸಿದ ವಿಜಯಕುಮಾರ ಹಿರೇಮಠ ಮೊದಲ್ಗೊಂಡು ಹಲವಾರು ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ಬಾಳೆಹೊನ್ನೂರು ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ವೀರಣ್ಣ ಭಾಗೋಜಿ ಸ್ವಾಗತಿಸಿದರು. ಮಡಿವಾಳಯ್ಯ ಶಾಸ್ತ್ರಿಗಳು ಜೇರಟಗಿ ನಿರೂಪಿಸಿದರು.

# ಸಂಗಮ್ಮಾ ಸ್ವಾಮಿ ನಿಧನ

**ಮಲ್ಲಮ್ಮ ನುಡಿ ವಾರ್ತೆ**

ಕಮಲನಗರ : ತಾಲೂಕಿನ ಡಿಗ್ಗಿ ಗ್ರಾಮದ ಸಂಗಮ್ಮಾ ಗಂಡ ಸೋಮನಾಥ ಸ್ವಾಮಿ (58) ಅವರು ಗುರುವಾರ ನಿಧನರಾದರು.



ಮೃತರು ಪತಿ, ತಂದೆ, 5 ಜನ ಸಹೋದರಿಯರು ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

ಸ್ವ-ಗ್ರಾಮದಲ್ಲಿ ಶುಕ್ರವಾರ ಮಧ್ಯಾಹ್ನ ಪಂಚಾಚಾರ್ಯರು ವಿಧಿ ವಿಧಾನದಂತೆ ಅಂತ್ಯಕ್ರಿಯೆ ನೆರವೇರಿಸಲಾಯಿತು.

# ೩.ಕೋ. ಕಾಮಗಾರಿ ಅಡಿಗಲ್ಲು ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ**

**ಯಾದಗಿರಿ :** ನವೆಂಬರ್ 22, : 2024-25ನೇ ಸಾಲಿನ ಲೆಕ್ಕ ಶೀರ್ಷಿಕೆ 5054 ಅಪೇಂಡಿಕ್ಸ್ ಇ ಯೋಜನೆ ಅಡಿಯಲ್ಲಿ ಗುರುಮಠಕಲ್ ತಾಲೂಕಿನ ಹಯ್ಯಾಳ ಕಡೆಚೂರು ರಾಜ್ಯ ಹೆದ್ದಾರಿ 180 ಕಿ.ಮೀ 89 ರಿಂದ 93.50ರವರೆಗೆ(ಆಯ್ದುಭಾಗಗಳಲ್ಲಿ) ರಸ್ತೆಸುಧಾರಣೆ ಅಂದಾಜು ಮೊತ್ತ 3 ಕೋ.ರೂ.ಗಳ ಕಾಮಗಾರಿ ಅಡಿಗಲ್ಲು ಗುರುಮಠಕಲ್‌ನಲ್ಲಿ 2025ರ ನವೆಂಬರ್ 24 ರಂದು ಬೆಳಿಗ್ಗೆ 11 ಗಂಟೆಗೆ ಅಡಿಗಲ್ಲು ಉದ್ಘಾಟನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ, ಹಾಗೂ ಲೋಕೋಪಯೋಗಿ ಇಲಾಖೆ ಸಚಿವರು ಶ್ರೀ ಸತೀಶ ಜಾರಕಿಹೊಳಿ, ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ, ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀ ಬಾಬುರಾವ್ ಚಿಂಚನಸೂರು ಗುರುಮಠಕಲ್‌ನಲ್ಲಿ 3 ಕೋ. ರೂ.ಗಳ ಕಾಮಗಾರಿ ಅಡಿಗಲ್ಲು ಕಾರ್ಯಕ್ರಮವನ್ನು ಘನ ಉಪಸ್ಥಿತಿಯಲ್ಲಿ ನೆರವೇರಲಿದೆ.

ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡಕಂದಕೂರಶಿಲಾನ್ಯಾಸಕರು ಹಾಗೂ ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ, ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷರು ಶ್ರೀ ಶರಣಪ್ಪ ಸಲಾದಪೂರ, ಭೀಮರಾಯನಗುಡಿ ಕಾಡಾ ಅಧ್ಯಕ್ಷರು ಶ್ರೀ ಬಾಬು ಹೊನ್ನಾ ನಾಯಕ, ಕಾಳೆಬೆಳಗುಂದಿ ಗ್ರಾಮ ಪಂಚಾಯತ ಅಧ್ಯಕ್ಷರು ಶ್ರೀಮತಿ ಇಂದ್ರಮ್ಮ ಗಂಡ ಹಣಮಂತ, ಸಮಸ್ತ ನಾಗರಿಕರು, ಗ್ರಾಮ ಪಂಚಾಯತ ಸರ್ವ ಸದಸ್ಯರು, ಉಪಾಧ್ಯಕ್ಷರು ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಸರ್ವರಿಗೂ ಆದರದ ಸುಸ್ವಾಗತವನ್ನು ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್, ಲೋಕೋಪಯೋಗಿ ಇಲಾಖೆ ಉಪ ವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪರಶುರಾಮ, ಲೋಕೋಪಯೋಗಿ ಇಲಾಖೆ ಕಾರ್ಯನಿರ್ವಾಹಕ ಅಭಿಯಂತರರು ಬಿ.ಸಣ್ಣ ಪರಶುರಾಮ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಚಿವ ಪ್ರಿಯಾಂಕ್ ಖರ್ಗೆ ಜನ್ಮದಿನದ ಪ್ರಯುಕ್ತ: ರಕ್ತದಾನ ಶಿಬಿರ




**ಮಲ್ಲಮ್ಮ ನುಡಿ ವಾರ್ತೆ**

**ಕಲಬುರಗಿ:** ಶ್ರೀ ಪ್ರಿಯಾಂಕ ಖರ್ಗೆ ಜಿ ರವರ ಅಭಿಮಾನಿ ಬಳಗದ

ವತಿಯಿಂದ ಸಚಿವ ಪ್ರಿಯಾಂಕ್ ಖರ್ಗೆ ಅವರ 47 ನೇಯ ಜನ್ಮದಿನದ

ಪ್ರಯುಕ್ತ ನಗರದ ಸುರಕ್ಷಾ ಬ್ಲಡ್ ಬ್ಯಾಂಕ್ ನಲ್ಲಿ ರಕ್ತದಾನ ಶಿಬಿರವನ್ನು ಯುವ ಮುಖಂಡ ಚಂದ್ರಶೇಖರಹಡಪದತೋನಸನಹಳ್ಳಿ (ಟಿ) ಅವರ ನೇತೃತ್ವದಲ್ಲಿ ಹಮ್ಮಿಕೋಳಲಾಯಿತು.

ಈ ಸಂದರ್ಭದಲ್ಲಿ ಪ್ರಕಾಶ್ ಅವರಾದಕರ್, ಹರ್ಷ ಮಾಲಾಕ್, ಅಮೋಲ್, ವಿನೋದ, ಆಕಾಶ, ಅವಿನಾಶ್ ಗಾಯಕವಾಡ, ರಾಜರತ್ನ ಜೋಷಿ, ಪ್ರಸನ್ನ ಮೇಲಮನಿ, ಕೇದಾರ್ ಡಿಪ್ಪಿ, ರಾಕೇಶ್ ಧನ್ನಿ, ಅಜಯಗಾಯಕವಾಡ, ನಾಗರಾಜ ಕೋಟೆ, ದೀಪಕ್ ಒಂಟಿ, ಪವನ್ ಇನಾಮದರ್, ಗಣೇಶ್ ಬಿದ್ದಾಪುರ, ದಿಲೀಪ್ ಕಿರಸಾವಳಗಿ, ಗೌತಮ್ ಕೋವಿ, ಧರ್ಮರತ್ನಮುದ್ದಡಗಿ, ವಿನೋದ ಅಂಬಲಗಾ, ರಮೇಶ್ ಕರಹರಿ, ರಮೇಶ್ ಕವಲಗಾ, ಸುನಿಲ್ ನಂದುರಕರ್ ಸೇರಿದಂತೆ ಇತರರು ಇದ್ದರು.

# ಕಮಲನಗರ :ಇಂದು ನ್ಯಾ.ಮೂ. ಹಂಚಾಟೆ ಸಂಜೀವ್‌ಕುಮಾರ ಭೇಟಿ

**ಮಲ್ಲಮ್ಮ ನುಡಿ ವಾರ್ತೆ**

**ಕಮಲನಗರ:** ನೂತನ ತಾಲೂಕ ಕೇಂದ್ರವಾಗಿರುವ ಕಮಲನಗರ ಪಟ್ಟಣದಲ್ಲಿ ಕೋರ್ಟ್ ಕಛೇರಿ ಕಾರ್ಯ ಪರಿಶೀಲನೆ ಮಾಡಲು ಶನಿವಾರ ಕಮಲನಗರಕ್ಕೆ ನ್ಯಾಯಮೂರ್ತಿ ಹಂಚಾಟೆ ಸಂಜೀವ್‌ಕುಮಾರ ಸರ್ ಅವರು ಭೇಟಿ ನೀಡುತ್ತಿದ್ದು, ಇದಕ್ಕೆ ಕಮಲನಗರ ಗ್ರಾಮಸ್ಥರು ಬಹಳ ಸಂತೋಷದಿಂದ ತಯಾರಿ ಮಾಡಿಕೊಂಡಿರುತ್ತಾರೆ.

ನ್ಯಾಯಮೂರ್ತಿ ಹಂಚಾಟೆ ಸಂಜೀವ್‌ಕುಮಾರ್ ಅವರು ಕರ್ನಾಟಕ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಾಧೀಶರಾಗಿ ನೇಮಕಗೊಂಡರು ಮತ್ತು 04.05.2020 ರಂದು ಮತ್ತು ಖಾಯಂ ನ್ಯಾಯಾಧೀಶರಾಗಿ 25.09.2021 ರಂದು ಪ್ರಮಾಣ ವಚನ ಸ್ವೀಕರಿಸಿ ಬಹಳ ಒಳ್ಳೆಯ ತೀರ್ಮಾನ ನೀಡಿರುತ್ತಾರೆ.



ನ್ಯಾಯಮೂರ್ತಿ ಹಂಚಾಟೆ ಸಂಜೀವ್‌ಕುಮಾರ ಮೊಟ್ಟಮೊದಲು ಬಾರಿಗೆ ಕಮಲನಗರ ಪಟ್ಟಣಕ್ಕೆ ಬರುತ್ತಿದು ತಾಲೂಕಿನ ಎಲ್ಲಾ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಕಾರ್ಯಕ್ರಮ ಯಶಸ್ವಿ ಮಾಡಬೇಕೆಂದು ಮುಖಂಡ ಪ್ರವೀಣ ಪಾಟೀಲ ಪ್ರಕಟಣೆ ತಿಳಿಸಿದ್ದಾರೆ.

# ಟಿಪ್ಪು ಸುಲ್ತಾನ್ ಶೌರ್ಯ ಪರಾಕ್ರಮದ ಪ್ರತೀಕ: ಧಾರ್ಮಿಕ ಮುಖಂಡ ಖಾಜಿ



ತಾಳಿಕೋಟಿ: ಟಿಪ್ಪು ಸುಲ್ತಾನ್ ಧೈರ್ಯ ಶೌರ್ಯ ಹಾಗೂ ಪರಾಕ್ರಮದ ಪ್ರತೀಕವಾಗಿದ್ದರು. ತಾಯ್ನಾಡಿಗಾಗಿ ಬ್ರಿಟಿಷರ ವಿರುದ್ಧ ಕೆಚ್ಚದೆಯಿಂದ ಹೋರಾಡಿ ವೀರ ಮರಣವನ್ನಪ್ಪಿದ

ಮಹಾನ್ ನಾಯಕ, ಅವರ ಬದುಕು ಇಂದಿನ ಯುವಕರಿಗೆ ಮಾದರಿಯಾಗಬೇಕಾಗಿದೆ ಎಂದು ಮುಸ್ಲಿಂ ಧಾರ್ಮಿಕ ಮುಖಂಡ ಸೈಯದ್ ಶಕೀಲ್ ಅಹ್ಮದ್ ಖಾಜಿ ಹೇಳಿದರು. ಶುಕ್ರವಾರ ಪಟ್ಟಣದ ಟಿಪ್ಪು ಸರ್ಕಲ್ ದಲ್ಲಿ ಹಜರತ್ ಟಿಪ್ಪು ಸುಲ್ತಾನ್ ರಕ್ಷಣಾ ಸಮಿತಿ ವತಿಯಿಂದ ಹಮ್ಮಿಕೊಂಡ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಖಂಡ ರೋಷನ್ ಡೋಣಿ ಮಾತನಾಡಿ ದೇಶದ ರಕ್ಷಣೆಗಾಗಿ ಬ್ರಿಟಿಷರೊಂದಿಗೆ ರಾಜಿ ಮಾಡಿಕೊಳ್ಳದೆ ತನ್ನ ಕರುಳಿನ ಕುಡಿಗಳನ್ನೇ ಒತ್ತೆ ಇಟ್ಟು ಹೋರಾಡಿದ ವೀರ ಅರಸ ಟಿಪ್ಪು ಸುಲ್ತಾನ್, ಅವರ ದೇಶಪ್ರೇಮ ಎಲ್ಲರಿಗೂ ಅನುಕರಣೀಯವಾಗಿದೆ

ಎಂದರು. ಮುಖಂಡ ಅಬ್ದುಲ್ ರಜಾಕ್ ಮನಗೂಳಿ ಮಾತನಾಡಿ ಟಿಪ್ಪು ಸುಲ್ತಾನ್ ಬಹುಧರ್ಮ ಸಹಿಷ್ಣುಗಳಾಗಿದ್ದರು, ಅವರೆಂದೂ ಜಾತೀಯತೆ ಮಾಡಲಿಲ್ಲ ಅವರ ಆಸ್ಥಾನದಲ್ಲಿ ಎಲ್ಲ ಜಾತಿ ಧರ್ಮದವರು ಇದ್ದರು. ನಾಡಿನ ಹಲವಾರು ದೇವಸ್ಥಾನಗಳಿಗೆ ಅವರು ಧಾರಾಳವಾಗಿ

ಕಾಣಿಕೆಗಳನ್ನು ಕೊಟ್ಟಿರುವ ದಾಖಲೆಗಳಿವೆ ಅವರ ಜೀವನ ಚರಿತ್ರೆಯನ್ನು ತಿಳಿದುಕೊಳ್ಳುವ ಅಗತ್ಯ ಇದೆ ಎಂದರು. ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ ಮಾತನಾಡಿ ಟಿಪ್ಪು ಸುಲ್ತಾನರು ಮಹಾನ್ ಪರಾಕ್ರಮಿ ಅರಸರಾಗಿದ್ದರು ಅವರು ಬಹಳಷ್ಟು ಜನಕಲ್ಯಾಣ ಕಾರ್ಯಗಳನ್ನು ಮಾಡಿ ಹೋಗಿದ್ದಾರೆ ಕೇವಲ ಮಹಾತ್ಮರ ಜಯಂತಿಗಳನ್ನು ಆಚರಿಸಿದರೆ ಸಾಲದು ಅವರ ಬದುಕಿನ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯ ಇದೆ ಎಂದರು. ಮುಖಂಡ ಪರಶುರಾಮ ತಂಗಡಗಿ, ಸಾಯಿಲ್ ಮುರಾಳ ಮಾತನಾಡಿದರು. ಇದೇ ಸಂದರ್ಭದಲ್ಲಿ ಜಯಂತಿ ಅಂಗವಾಗಿ ಹಮ್ಮಿಕೊಂಡ ರಕ್ತದಾನ ಶಿಬಿರದ ದಾನಿಗಳಿಗೆ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ಆರಂಭದಲ್ಲಿ ಹಜರತ್ ಟಿಪ್ಪು ಸುಲ್ತಾನ್ ರಕ್ಷಣಾ ಸಮಿತಿ ಅಧ್ಯಕ್ಷ ಉಮರ ಫಾರೂಖ ಮನಗೂಳಿ ಧ್ವಜಾರೋಹಣ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಸಮಿತಿಯ ಉಪಾಧ್ಯಕ್ಷ ರಿಯಾಜ್ ಡೋಣಿ, ಕಾರ್ಯದರ್ಶಿ ಅಲ್ಲಾಭಕ್ಷ ಚಳ್ಳಿಗಿಡದ, ಪಟ್ಟಣದ ಗಣ್ಯರಾದ ಸಿದ್ದನಗೌಡ ಪಾಟೀಲ(ನಾವದಗಿ),

ಸಿಕಂದರಸಾಬ ವಠಾರ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಮಹೆಬೂಬ ಚೋರಗಸ್ತಿ, ಮುಸ್ತಫಾ ಚೌದ್ರಿ, ಫಯಾಜ ಉತ್ನಾಳ, ಮಂಜೂರು ಬೇಪಾರಿ, ಖಾಜಾಹು ಸೇನ ಕಟ್ಟಿ, ಹಸನಸಾಬ ಕೊರ್ಕಿ, ಮೈನು ಬೇಪಾರಿ, ನಬಿ ಚೋರಗಸ್ತಿ, ಬುರಾನ ಕಲಾಸಿ, ಶಫೀಕ ಇನಾಮದಾರ, ಆಸಿಫ ಕೆಂಭಾವಿ, ಸಮಿತಿಯ ಸದಸ್ಯರಾದ ಸದ್ದಾಮ್ ಹೊನ್ನಳ್ಳಿ, ಮೆಹೆಬೂಬ ಲಾಹೋರಿ, ಅಬ್ದುಲ್ ರೆಹಮಾನ ವಠಾರ, ಸದ್ದಾಂ ಬೇಪಾರಿ, ರಾಜು ಚಿತ್ತರಗಿ, ಅಯಾನ್ ಮಕಾಂದಾರ, ಇಂತಿಯಾಜ ಉಸ್ತಾದ, ಮತ್ತಿತರರು ಇದ್ದರು.

# ಯೋಗ ಮತ್ತು ಧ್ಯಾನ ಮಾನವನಿಗೆ ಸಂಜೀವಿನಿ – ಡಾ. ದೀಪಾ ರಾಗ



**ಮಲ್ಲಮ್ಮ ನುಡಿ ವಾರ್ತೆ**

**ಹುಮನಾಬಾದ:** ದಿನಾಂಕ: 21ನೇ ನ. 2025ರಂದು ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ.ಭೂಮರಡ್ಡಿ ಪದವಿ ಮತ್ತು ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಗೌರವಾನ್ವಿತ ಹೈದ್ರಾಬಾದ ಕರ್ನಾಟಕ ಶಿಕ್ಷಣ ಸಂಸ್ಥೆಯ ಸದಸ್ಯರು ಹಾಗೂ ಬಿ.ವಿ.ಬಿ. ಶಾಲಾ ಕಾಲೇಜು ಆವರಣದ ಸಂಚಾಲಕರಾದ ಡಾ. ರಜನೀಶ್ ಎಸ್. ವಾಲಿಯವರ ಮಾರ್ಗದರ್ಶನದಲ್ಲಿ ಯೋಗ ಮತ್ತು ಧ್ಯಾನ ದಿನಾಚರಣೆಯನ್ನು ಏರ್ಪಡಿಸಿ ಮಹಾವಿದ್ಯಾಲಯ ಪ್ರಾಂಶುಪಾಲರಾದ ಡಾ. ದೀಪಾ ರಾಗ ಅವರು ಮಾತನಾಡುತ್ತಾ ಯೋಗವು ದೇಹ ಮನಸ್ಸು ಮತ್ತು ಆತ್ಮವನ್ನು ಒಂದುಗೂಡಿಸುವ ಒಂದು ಅಭ್ಯಾಸವಾಗಿದೆ ಆದರೆ ಧ್ಯಾನವು ಮನಸ್ಸನ್ನು ಏಕಾಗ್ರತೆಗೊಳಿಸುವ ಒಂದು ತಂತ್ರವಾಗಿದ್ದು ಆಂತರಿಕ ಶಾಂತಿ ಮತ್ತು ಸ್ಪಷ್ಟತೆಯನ್ನು ತರುತ್ತದೆ, ಯೋಗ ಮತ್ತು ಧ್ಯಾನ ಎರಡು ಒತ್ತಡವನ್ನು ಕಡಿಮೆ ಮಾಡಲು ಏಕಾಗ್ರತೆ ಹೆಚ್ಚಿಸಲು ಮತ್ತು ಒಟ್ಟಾ-ರೆ ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಹಾಯ ಮಾಡುತ್ತದೆ ಎಂದು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಕಿವಿ ಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ ನಿಕಟಪೂರ್ವ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂ-ರೆ ಆಗಮಿಸಿ ಮಾತನಾಡುತ್ತಾ ಯೋಗವು ದೈಹಿಕ ಭಂಗಿಗಳು, ಆಸನಗಳು ಉಸಿರಾಟದ ತಂತ್ರಗಳು ಮತ್ತು ಧ್ಯಾನವು ಒಂದು ಸಮಗ್ರ ಚೈತನ್ಯದ ಅಂಶವಾಗಿದೆ ದೇಹದ ಆರೋಗ್ಯವನ್ನು ಕಾಪಾಡುವುದು ಮಾನಸಿಕವಾಗಿ ಸದೃಢಗೊಳಿಸುವುದು ಹಾಗೂ ಉಸಿರಾಟದ ಮೇಲೆ ಗಮನ ಹರಿಸುವುದು ಇದರ ಒಂದು ಸಾಮಾನ್ಯ ವಿಧಾನವಾಗಿದೆ ತಾವೆಲ್ಲರೂ ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಂಡು ಆರೋಗ್ಯವಂತರಾಗಿರಬೇಕೆಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮದ ಇನ್ನೋರ್ವ ಅತಿಥಿಗಳಾಗಿ ಆಗಮಿಸಿದ ಶ್ರೀ ಗುಂಡೇರಾವ ಶಿವದೆ ಮಾತನಾಡುತ್ತಾ ಏಕಾಗ್ರತೆ ಹೆಚ್ಚಳ ಮಾಡಿ ಆತಂಕ ಕಡಿಮೆ ಮಾಡುವುದು ಮತ್ತು ಆಂತರಿಕ ಶಾಂತಿ ಪ್ರಾಣ ಶಕ್ತಿಯನ್ನು ಸಮನ್ವಯಗೊಳಿಸುವುದು ಜೀವನ ಸವಾಲುಗಳನ್ನು ಎದುರಿಸಲು ಯೋಗ ಮತ್ತು ಧ್ಯಾನ ನಮಗೆ ಸಹಾಯ ಮಾಡುತ್ತದೆ ಎಂದು ನುಡಿದರು.

ಕಾರ್ಯಕ್ರಮದ ಮೊದಲಿಗೆ ಪ್ರಾಸ್ತವಿಕ ನುಡಿಯನ್ನು ಇತಿಹಾಸ ವಿಭಾಗದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ಅವರು ನಡೆಸಿಕೊಟ್ಟು ಧ್ಯಾನದ ಪ್ರಾತ್ಯಕ್ಷಿಕೆಯನ್ನು ವಿದ್ಯಾರ್ಥಿಗಳಿಗೆ ಹೇಳಿಕೊಟ್ಟರು.

ಈ ಕಾರ್ಯಕ್ರಮದ ಸಂಚಾಲನೆಯನ್ನು ಶ್ರೀ ಬಸವರಾಜ ಬಿರಾದಾರ ನಡೆಸಿಕೊಟ್ಟರು. ಈ ಕಾರ್ಯಕ್ರಮದಲ್ಲಿ ಮಹಾ ವಿದ್ಯಾಲಯದ ಎನ್.ಎಸ್.ಎಸ್. ಎನ್.ಸಿ.ಸಿ. ವಿದ್ಯಾರ್ಥಿ, ವಿದ್ಯಾರ್ಥಿನಿಯರು. ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಕೆಪಿಎಸ್ ಶಾಲೆ ಹೆಸರಲ್ಲಿ ಸರ್ಕಾರಿ ಶಾಲೆ ಮುಚ್ಚುವ ಹುನ್ನಾರ ಖಂಡಿಸಿ ಪ್ರತಿಭಟನೆ



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ಕೆಪಿಎಸ್ ಶಾಲೆ ನೆಪದಲ್ಲಿ ಸರ್ಕಾರಿ ಶಾಲೆ ಮುಚ್ಚುವ ಹುನ್ನಾರ ನಡೆಸಿದೆ ಎಂಬುದನ್ನು ಖಂಡಿಸಿ ಎಐಡಿಎಸ್ ನೇತೃತ್ವದಲ್ಲಿ ವಿದ್ಯಾರ್ಥಿಗಳು ಇಂದು ಟಿಪ್ಪು ಸುಲ್ತಾನ್ ಉದ್ಯಾನದಲ್ಲಿ ಪ್ರತಿಭಟನೆ ನಡೆಸಿದರು.

ರಾಜ್ಯ ಸರ್ಕಾರ ರಾಜ್ಯದಲ್ಲಿ 700 ಕೆ ಪಿ ಎಸ್–ಮ್ಯಾಗ್ನೆಟ್ ಶಾಲೆಗಳನ್ನು ಆರಂಭಿಸಲು ನಿರ್ಧರಿಸಿದೆ. ಸರ್ಕಾರಿ ಆದೇಶದಲ್ಲಿ ತಿಳಿಸಿರುವಂತೆ, ಮ್ಯಾಗ್ನೆಟ್ ಶಾಲೆಯ 3 ರಿಂದ 5 ಕಿಲೋ ಮೀಟರ್ ವ್ಯಾಪ್ತಿಯ ಶಾಲೆಗಳನ್ನು ಈ ಶಾಲೆಗಳಲ್ಲಿ ಸಮ್ಮಿಳಿತಗೊಳಿಸಲಾಗುತ್ತದೆ. ಈಗಾಗಲೇ ಈ ಮಾದರಿಯಲ್ಲಿ ಚನ್ನಪಟ್ಟಣ ತಾಲೂಕಿನ ಹೊಂಗನೂರಿನ ಸರ್ಕಾರಿ ಶಾಲೆಯನ್ನು ಮ್ಯಾಗ್ನೆಟ್ ಶಾಲೆಯೆಂದು ಗುರುತಿಸಲಾಗಿದೆ. ಹೊಂಗನೂರಿನಿಂದ 6 ಕಿಮೀ ವ್ಯಾಪ್ತಿಯೊಳಗಿರುವ,77 ವಿದ್ಯಾರ್ಥಿಗಳಿರುವ ಹೊಡಿಕೆ ಹೊಸಹಳ್ಳಿ ಸರ್ಕಾರಿ ಪ್ರಾಥಮಿಕ ಶಾಲೆ, 82 ವಿದ್ಯಾರ್ಥಿಗಳಿರುವ ಕನ್ನಿ ದೊಡ್ಡಿ ವಿದ್ಯಾರ್ಥಿಗಳಿರುವ ಅಮ್ಮ ದೊಡ್ಡಿ ಶಾಲೆ 100 ವಿದ್ಯಾರ್ಥಿಗಳಿರುವ ಸಂತೆಮೊಗೇನಹಳ್ಳಿ ಶಾಲೆ, 20 ವಿದ್ಯಾರ್ಥಿಗಳಿರುವ ಮೊಗೇನಹಳ್ಳಿ ದೊಡ್ಡ, ವಿದ್ಯಾರ್ಥಿಗಳಿರುವ ಸುಣ್ಣಘಟ್ಟ ಶಾಲೆ ಗಳನ್ನು ಹೊಂಗನೂರಿನ ಏಕಿಖಗೆ ತುರ್ತಾಗಿ ವಿಲೀನಗೊಳಿಸಿ ಕ್ರಮಕೈಗೊಳ್ಳಲು ಆದೇಶ ನೀಡಲಾಗಿದೆ. ತತ್ಪರಿಣಾಮ. ಈ ಊರುಗಳ ಜನರಲ್ಲಿ ಈಗಾಗಲೇ ಆತಂಕ ಸೃಷ್ಟಿಯಾಗಿದೆ ಮತ್ತು ತಮ್ಮ ಊರಿನ ಶಾಲೆಗಳು ಉಳಿಯಬೇಕು ಮತ್ತು ಅವುಗಳನ್ನು ಅಭಿವೃದ್ಧಿಪಡಿಸಿ ಊರಿನ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ಖಾತ್ರಿಪಡಿಸಬೇಕೆಂಬುದು ಗ್ರಾಮಸ್ಥರು ಆಗ್ರಹಿಸುತ್ತಿದ್ದಾರೆ. ಇದೇ ರೀತಿ 700 ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳಡಿ ರಾಜ್ಯದ ಸಾವಿರಾರು ಶಾಲೆಗಳು ವಿಲೀನಗೊಳ್ಳುತ್ತವೆ. ಸಮುದಾಯದ ನಡುವಿನ ಶಾಲೆ ಊರು ದಾಟಿ ಪಕ್ಕದೂರಿಗೆ ಹೋಗುತ್ತದೆ. ಪ್ರತಿ ಗ್ರಾಮಪಂಚಾಯತಿಗೆ ಒಂದರಂತೆ 5,900 ಕಪಿಎಸ್ ಶಾಲೆಗಳನ್ನು ಆರಂಭಿಸುವ ಉದ್ದೇಶವನ್ನು ರಾಜ್ಯ ಸರ್ಕಾರವು ಹೊಂದಿದೆ. ಹೀಗಾದಲ್ಲಿ ಸರ್ಕಾರಿ ಪದವಿ ಕಾಲೇಜು ಸೇರಿದಂತೆ 40,000 ಸರ್ಕಾರಿ ಶಾಲೆಗಳು ಮುಚ್ಚಿಹೋಗುವ ಅಪಾಯಕ್ಕೆ ತುತ್ತಾಗುತ್ತವೆ.

# ಮಿಟ್ಟಿ ಮಲ್ಕಾಪುರ ದೇವನಪಲ್ಲಿ ಗ್ರಾಮಗಳಲ್ಲಿ ವಿಶ್ವ ಶೌಚಾಲಯ ದಿನ ಆಚರಣೆ



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ವಿಶ್ವ ಶೌಚಾಲಯ ದಿನದ ಅಂಗವಾಗಿ ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್ ವತಿಯಿಂದ ಮಿಟ್ಟಿ ಮಲ್ಕಾಪುರ ಮತ್ತು ದೇವನಪಲ್ಲಿ ಗ್ರಾಮಗಳಲ್ಲಿ ಜಾಗೃತಿ ಕಾರ್ಯಕ್ರಮಗಳು ಆಯೋಜಿಸಲಾಯಿತು. ಮಿಟ್ಟಿಮಲ್ಕಾಪುರ ಗ್ರಾಮದಲ್ಲಿ ಶೌಚಾಲಯ ವ್ಯವಸ್ಥೆ ಇಲ್ಲದೆ ಬಯಲು ಶೌಚಕ್ಕೆ ಹೋಗುತ್ತಿರುವ ಮನೆಗಳಿಗೆ ಭೇಟಿ ನೀಡಿ, ಶೌಚಾಲಯದ ಅಗತ್ಯತೆ ಮತ್ತು ಬಯಲು ಶೌಚದ ಅಪಾಯಗಳ ಬಗ್ಗೆ ಹೂಗಳನ್ನು ನೀಡಿ ನೂತನ ರೀತಿಯಲ್ಲಿ ಜಾಗೃತಿ ಮೂಡಿಸಲಾಯಿತು.

ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಶ್ರೀಮತಿ ರೇಣುಕಾ ಅವರು ಶೌಚಾಲಯವಿಲ್ಲದ ಮನೆಗಳ ಸಮಸ್ಯೆಗಳ ಕುರಿತು ತಿಳಿದುಕೊಂಡು, ಸ್ವಚ್ಛ ಭಾರತ ಮಿಷನ್‌ನಡಿ ಲಭ್ಯವಿರುವ ಸಹಾಯಧನದ ಬಗ್ಗೆ ಮಾಹಿತಿ ನೀಡಿದರು.

ದೇವನಪಲ್ಲಿ ಅಂಗನವಾಡಿ ಕೇಂದ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್‌ನ ಟಿಎಂಒ ಸೌಮ್ಯ ಅವರು ಮಾತನಾಡಿ, ಪ್ರತಿವರ್ಷ ನವೆಂಬರ್ 19ರಂದು ವಿಶ್ವ ಶೌಚಾಲಯ ದಿನವನ್ನು ಆಚರಿಸಲಾಗುತ್ತಿದ್ದು, ಘನತೆ, ಆರೋಗ್ಯ, ಸುರಕ್ಷತೆ ಹಾಗೂ ನೈರ್ಮಲ್ಯಕ್ಕಾಗಿ ಶೌಚಾಲಯ ಬಳಕೆ ಅತ್ಯವಶ್ಯಕ ಎಂದು ಹೇಳಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದ ಪಿಎಚ್‌ಸಿಓ ಸಾರಾಬಾನು ಅವರು ಶೌಚಾಲಯ ಇದ್ದರೂ ಬಳಕೆಯ ಕೊರತೆ ದೊಡ್ಡ ಸಮಸ್ಯೆಯಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿ, ಆರೋಗ್ಯ ಕಾಪಾಡಿಕೊಳ್ಳಲು ಶೌಚಾಲಯ ಬಳಕೆ ಅವಶ್ಯಕವೆಂದರು. ವೈ.ಎಂ. ಹನಮಂತ ಅವರು ಕಥೆಯ ಮೂಲಕ ಶೌಚಾಲಯದ ಮಹತ್ವವನ್ನು ಮಕ್ಕಳಿಗೆ ಮನವರಿಕೆ ಮಾಡಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ರೇಣುಕಾ, ಪಿಎಚ್‌ಸಿಓ ಸಾರಾಬಾನು, ವಾಟರ್ ಏಡ್ ಸಿಬ್ಬಂದಿ ಶೇಷಮ್ಮ, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಪೋಷಕರು, ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್‌ನ ಸೌಮ್ಯ, ಹನಮಂತ, ರೇಖಾ, ಪ್ರಶಾಂತಿ ಹಾಗೂ ಮುದ್ದು ಮಕ್ಕಳು ಭಾಗವಹಿಸಿದರು.

# ಕೃಷಿ ಉಪ ನಿರ್ದೇಶಕರ ಕಛೇರಿ ಸ್ಥಳಾಂತರ ವಿರೋಧಿಸಿ ಪೋಲಿಸ್ ಠಾಣೆ ಅಧಿಕಾರಿಗೆ ಮನವಿ



**ಮಲ್ಲಮ್ಮ ನುಡಿ ವಾರ್ತೆ**

ಲಿಂಗಸುಗೂರು: ಪಟ್ಟಣದ ಲಿಂಗಸುಗೂರು ಅಭಿವೃದ್ಧಿ ಹೋರಾಟ ಸಮಿತಿ ಹಾಗೂ ಪ್ರಗತಿಪರ ಸಂಘಟನೆಗಳ ಒಕ್ಕೂಟ ಲಿಂಗಸುಗೂರು ಕೃಷಿ ಉಪ ನಿರ್ದೇಶಕರ ಕಛೇರಿ–2 ಕಳೆದ ವರ್ಷ 19 ಆಗಸ್ಟ 2024ರಂದು ಸರ್ಕಾರದ ಅಧೀನ ಕಾರ್ಯದರ್ಶಿಯವರು ಕೃಷಿ ಉಪ ನಿರ್ದೇಶಕನ ಕಛೇರಿಯನ್ನು ಸಿಂಧನೂರಿಗೆ ಸ್ಥಳಾಂತರ ಮಾಡಬೇಕೆಂದು ಆದೇಶಿಸಿದ್ದರು. ಈಗ ಮತ್ತೆ ಕೃಷಿ ನಿರ್ದೇಶಕರು ಬೆಂಗಳೂರು: ಇವರು ಲಿಂಗಸುಗೂರಿನಲ್ಲಿರುವ ಕೃಷಿ ಉಪ ನಿರ್ದೇಶಕರ ಕಛೇರಿ–2 ಹುದ್ದೆಗಳ ಸಮೇತ ಸ್ಥಳಾಂತರ ಮಾಡುವಂತೆ ಆದೇಶಿಸಿರುವುದು ನಮ್ಮ ಸಂಘಟನೆ ತೀವ್ರವಾಗಿ ಖಂಡಿಸುತ್ತದೆ.

ಲಿಂಗಸುಗೂರು ಸಿಂಧನೂರಿನಿಂದ 90 ಕಿ.ಮೀ. ದೂರವಿದೆ ಹಾಗೂ ಹೆಚ್ಚು ಕೃಷಿ ಭೂಮಿಯನ್ನು ಹೊಂದಿದೆ ಎಂದು ಸರ್ಕಾರಕ್ಕೆ ಸುಳ್ಳು ಮಾಹಿತಿಯನ್ನು ನೀಡಿ ಇಲ್ಲಿರುವ ಕೃಷಿ ನಿರ್ದೇಶಕರ ಕಛೇರಿಯನ್ನು ಸ್ಥಳಾಂತರ ಮಾಡಲು ಹುನ್ನಾರ ನಡೆಸಿರುವುದು ಖಂಡನೀಯವಾಗಿದೆ. ಈ ಬಗ್ಗೆ ಹಲವಾರು ಬಾರಿ ಮನವಿ ಸಲ್ಲಿಸಿದ್ದರು ಸಹ ಅಧಿಕಾರಿಗಳು ಹಾಗೂ ರಾಜಕಾರಣಿಗಳು ನಮ್ಮ ಮನವಿಗೆ ಸ್ಪಂದಿಸದೇ ಮೌನಕ್ಕೆ ಶರಣಾಗಿದ್ದಾರೆ. ಈ ಹಿನ್ನಲೆಯಲ್ಲಿ ಮತ್ತೆ ಕಛೇರಿ ಸ್ಥಳಾಂತರ ಮಾಡಲಾಗುತ್ತಿದ್ದು, ಇದನ್ನು ವಿರೋಧಿಸಿ ಸೋಮವಾರ 24–11–2025ರಂದು ಬೆಳಿಗ್ಗೆ 11,00 ಘಂಟೆಗೆ ಕೃಷಿ ಉಪ ನಿರ್ದೇಶಕರ ಕಛೇರಿ ಮುಂಭಾಗ ಅನಿರ್ಧಿಷ್ಟಾವಧಿ ಹೋರಾಟವನ್ನು ಹಮ್ಮಿಕೊಳ್ಳುತ್ತಿದ್ದೇವೆ. ನಮ್ಮ ಹೋರಾಟದ ಸ್ಥಳಕ್ಕೆ ಕೃಷಿ ಸಚಿವರು ಆಗಮಿಸಿ ಕಛೇರಿ ಸ್ಥಳಾಂತರ ಆದೇಶವನ್ನು ರದ್ದುಗೊಳಿಸಿದ ಆದೇಶ ಪತ್ರವನ್ನು ಕೊಡುವವರೆಗೆ ನಮ್ಮ ಹೋರಾಟನಿರಂತರವಾಗಿರುತ್ತದೆ. ಕಾರಣ ಈ ಹೋರಾಟಕ್ಕೆ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಬೇಕೆಂದು ಪೋಲಿಸ್ ಠಾಣೆ ಅಧಿಕಾರಿಗೆ ಮನವಿ ಸಲ್ಲಿಸಿದರು.

ಈಸಂದರ್ಭದಲ್ಲಿ ಶಿವಪುತ್ರಗೌಡನಂದಿಹಾಳ,ವೈದುರ್ಗ ಪ್ರಸಾದ್ ರಮೇಶ,ಲಾಲಸಾಬ, ಲಕ್ಷ್ಮಣ್, ಮಹಾಂತೇಶ, ಬಸವರಾಜ ಕೋಠ,

ಬಸವರಾಜ ಗೋಕ್ಷೆ ದಲಿತ ಸೇನೆ,ಮಹಮ್ಮದ್ ಖಾಜಾ ಸಾಬ,ಬಾಬ ಜಾನಿ ಅಧ್ಯಕ್ಷರು ಆಟೋ ಚಾಲಕರ ಸಂಘ ಸೇರಿದಂತೆ ಉಪಸ್ಥಿತರಿದ್ದರು

# ವಿಕಲಚೇತನರಿಗಾಗಿ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ: ಹೆಸರು ನೋಂದಣಿಗೆ ಮನವಿ

**ಮಲ್ಲಮ್ಮ ನುಡಿ ವಾರ್ತೆ**

**ಬೀದರ:** ಪ್ರತಿ ವರ್ಷದಂತೆಯೂ ಈ ವರ್ಷವು ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ನವೆಂಬರ್.24 ರಂದು ಬೆಳಿಗ್ಗೆ 10.30 ಗಂಟೆಗೆ ವಿಕಲಚೇತನರಿಗಾಗಿ ವಿವಿಧ ಕ್ರೀಡೆ ಹಾಗೂ ಮಧ್ಯಾಹ್ನ 2.30 ಗಂಟೆಗೆ ಸಾಂಸ್ಕೃತಿಕ ಸ್ಪರ್ಧೆಗಳನ್ನು ಜಿಲ್ಲಾ ನೆಹರು ಕ್ರಿಡಾಂಗಣ ಬೀದರನಲ್ಲಿ ಏರ್ಪಡಿಸಲಾಗಿದೆ. ಜಿಲ್ಲೆಯ ಎಲ್ಲಾ ವಿಕಲಚೇತನರು (ಅಂಗವಿಕಲರು) ಹಾಗೂ ಎಂ.ಆರ್.ಡಬ್ಲ್ಯೂ/ವಿ.ಆರ್.ಡಬ್ಲ್ಯೂ/ಯು.ಆರ್.ಡಬ್ಲೂ ರವರು ಪಾಲ್ಗೊಂಡು ಕ್ರೀಡೆ ಹಾಗೂ ಸಾಂಸ್ಕೃತಿಕ ಸರ್ಧೆ ಯಶಸ್ವಿಗೊಳಿಸಲು ಬೀದರ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತರ ವಿವಿಧ ಸ್ಪರ್ಧೆಗಳಲ್ಲಿ ಪಾಲ್ಗೊಳ್ಳಲು ಆಯಾ ತಾಲೂಕಿನ ಎಂ.ಆರ್.ಬ್ಲ್ಯೂ.ಗಳನ್ನು ಅಥವಾ ಇಲಾಖೆಯ ಯೋಜನಾ ಸಹಾಯಕರಿಗೆ ಸಂಪರ್ಕಿಸಿ ನೊಂದಣೆ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹೆಚ್ಚಿನ ಮಾಹಿತಿಗಾಗಿ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ದೂರವಾಣಿ ಸಂಖ್ಯೆ: 08482–223771, 08482–234647 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಮಲ್ಲಮ್ಮ ನುಡಿ ವಾರ್ತೆ**

**ಬೀದರ:** ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ನೀಡುವ "ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಪ್ರಶಸ್ತಿಗೆ" ಅರ್ಜಿ ಸಲ್ಲಿಸುವ ಅವಧಿಯನ್ನು ದಿನಾಂಕ: 05–12–2025 ರವರೆಗೆ ವಿಸ್ತರಿಸಲಾಗಿದೆ ಎಂದು ಬೀದರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ನಾವಿನ್ಯತೆ, ತಾರ್ಕಿಕ ಸಾಧನೆಗಳು, ಕ್ರೀಡೆ, ಕಲೆ, ಸಾಂಸ್ಕ್ರತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳನ್ನು ಪ್ರೋತ್ಸಾಹಿಸಲು ಹಾಗೂ ಕರ್ನಾಟಕ ರಾಜ್ಯದಲ್ಲಿ ನೆಲೆಸಿರುವ 5 ರಿಂದ 18 ವರ್ಷದ ಒಳಗಿನ ವಯೋಮಿತಿಯೊಳಗಿರುವ ಮಕ್ಕಳಿಗೆ ಪ್ರತಿಕ್ಷೇತ್ರದಲ್ಲಿ ಇಬ್ಬರು ಮಕ್ಕಳಂತೆ ಒಟ್ಟು 8 ಮಕ್ಕಳನ್ನು ಆಯ್ಕೆ ಮಾಡಿ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ "ಕೆಳದಿ ಚೆನ್ನಮ್ಮ" ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುತ್ತದೆ.

ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000 ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.ಅಸಾಧಾರಣ ಸಾಧನೆ ಮಾಡಿದ ಮಕ್ಕಳು ಪ್ರಶಸ್ತಿಗಾಗಿ ನಿಗದಿತ ನಮೂನೆಯಲ್ಲಿ ದಿನಾಂಕ: 05–12–2025 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತೀವೃಷ್ಠಿ: ಬೆಳೆ ನಷ್ಟ, ರೈತರಿಗೆ ತಕ್ಷಣ ಬೆಳ ಪರಿಹಾರ ನಷ್ಟ ನೀಡಲು ಒತ್ತಾಯ



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ಅತೀವೃಷ್ಠಿಯಿಂದ ರೈತರು ಹಾನಿಗೆ ಒಳಗಾಗಿದ್ದು, ರೈತರಿಗೆ ಬೆಳೆ ನಷ್ಟ ಪರಿಹಾರ ತಕ್ಷಣ ಸರ್ಕಾರ ನೀಡಬೇಕೆಂದು ಜನತಾದಳ ರಾಜ್ಯ ಉಪಾಧ್ಯಕ್ಷರು ಎಸ್.ಟಿ.ಮೋರ್ಚಾ, ಗ್ರಾಮೀಣ ಕ್ಷೇತ್ರದ ಪರಾಜಿತ ಅಭ್ಯರ್ಥಿ ಸಣ್ಣ ನರಸಿಂಹ ನಾಯಕ ಒತ್ತಾಯಿಸಿದರು.ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಕಳೆದ ತಿಂಗಳು ಅತೀ ಮಳೆಯಿಂದ ರಾಯಚೂರು ಜಿಲ್ಲೆಯ ಲಕ್ಷಾಂತರ, ಎಕರೆ ಬೆಳೆಯು ನಷ್ಟವಾಗಿದ್ದು, ಕರ್ನಾಟಕ ಸರ್ಕಾರದ ಶಾಸಕರು, ಸಚಿವರು ಕೆಲವೊಂದುಕಡೆ ಬೇಟಿ ನೀಡಿ ಸಂಬಂಧಪಟ್ಟ ಅಧಿಕಾರಿಗಳು ಬೆಳೆ ನಷ್ಟ ಪರಿಹಾರದ ಅಂದಾಜು ಮಾಡಬೇಕೆಂದು ನಿರ್ದೇಶಿಸಲಾಗಿದ್ದು, ಅಧಿಕಾರಿಗಳು ಸಮಗ್ರವರದಿಯನ್ನು ರಾಜ್ಯ ಸರ್ಕಾರಕ್ಕೆ ನೀಡಲಾಗಿದೆ. ರಾಜ್ಯ ಸರ್ಕಾರವು ಬೆಳೆ ನಷ್ಟ ಪರಿಹಾರವನ್ನು ನೀಡುತ್ತೇವೆಂದು ಘೋಷಣೆ ಘೋಷಣೆಯಾಗಿ ಉಳಿದಿದೆ ಎಂದು ಆರೋಪಿಸಿದರು. ರೈತರು ಬೀದಿಗೆ ಬರುವ ಮುಂಚೆನೆ ಬೆಳೆ ನಷ್ಟ ಪರಿಹಾರವನ್ನು ಕೊಡಬೇಕು. ಇಲ್ಲದಿದ್ದಲ್ಲಿ ಜನತಾದಳ ನೇತೃತ್ವದಲ್ಲಿ ಬೃಹತ್ ಪ್ರತಿಭಟಣೆ ಹಮ್ಮಿಕೊಳ್ಳಲಾಗುವುದೆಂದು ಅವರು ಎಚ್ಚರಿಕೆ ನೀಡಿದರು.ರೈತರಿಗೆ ಕಣ್ಣೂರಿಸುವ ತಂತ್ರವಾಗಿ ಹತ್ತಿ ಖರೀದಿ ಕೇಂದ್ರ ಪ್ರಾರಂಭ ಮಾಡಿ ಸಿ.ಸಿ.ಐ. ಅಧಿಕಾರಿಗಳು ಮತ್ತು ಹತ್ತಿ ವ್ಯಾಪರಿಗಳು ಮತ್ತು ದಲ್ಲಾಳಿಗಳು ಸೇರಿಕೊಂಡು ಕಡಿಮೆ ಬೆಲೆಗೆ ಹತ್ತಿಯನ್ನು ಖರೀದಿ ಮಾಡಿ, ಅದೇ ಸಿ.ಸಿ.ಐ. ಅಧಿಕಾರಿಗಳಿಂದ ಹೆಚ್ಚಿಗೆ ಹಣಕ್ಕೆ ಲೂಟಿ ಮಾಡಲಾಗುತ್ತದೆ.ಜಿಲ್ಲಾಧಿಕಾರಿಗಳು ಕೂಡಲೇ ದಲ್ಲಾಳಿಗಳಿಗೆ ಬೆಂಬಲ ನೀಡುವ ಸಿ.ಸಿ.ಐ. ಅಧಿಕಾರಿಗಳ ಮೇಲೆ ಕಟ್ಟು ನಿಟ್ಟಿನ ಕ್ರಮ ವಹಿಸಬೇಕು. ಈಗಾಗಲೇ ನಷ್ಟಗೊಂಡ ರೈತರ ಬೆಳೆಗೆ ಬೆಂಬಲ ಬೆಲೆಯನ್ನು ನೀಡಲು ಸರ್ಕಾರ ಮುಂದಾಗಬೇಕೆಂದು ಒತ್ತಾಯಿಸಿದರು.ಈ ಸಂದರ್ಭದಲ್ಲಿ ಲಕ್ಷ್ಮಿಪತಿ ಗಾಣದಾಳ,ಚನ್ನರೆಡ್ಡಿ,ಭೀಮಣ್ಣ,ಅಂಬಣ್ಣ ನಾಯಕ,ನಾಗರಾಜ ಗೌಡ ಉಪಸ್ಥಿತರಿದ್ದರು.

# ಸಂಘ, ಸಂಸ್ಥೆ ಫೈಲಿಂಗ್ ಸಲ್ಲಿಸಲು ಸೂಚನೆ

**ಮಲ್ಲಮ್ಮ ನುಡಿ ವಾರ್ತೆ**

**ಬೀದರ:** ಜಿಲ್ಲೆಯಲ್ಲಿರುವ ಸಂಘ, ಸಂಸ್ಥೆ ಫೈಲಿಂಗ್ ಕಡ್ಡಾಯವಾಗಿ ಸಲ್ಲಿಸಬೇಕೆಂದು ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಜಿಲ್ಲಾ ನೋಂದಣಾಧಿಕಾರಿಗಳು ಪ್ರಕಟಣೆಯಲ್ಲಿ ಜಿಲ್ಲೆಯಲ್ಲಿ ಕರ್ನಾಟಕ ಸಂಘಗಳ ನೊಂದಣಿ ಕಾಯ್ದೆ 1960 ರಡಿ ನೊಂದಣಿಯಾದ ಪ್ರತಿಯೊಂದು ಸಂಘವು ಪ್ರತಿವರ್ಷ ನವೀಕರಣಗೊಳ್ಳಬೇಕಾಗಿರುತ್ತದೆ. 05 ವರ್ಷಗಳಿಗೂ ಮೇಲ್ಪಟ್ಟು ನವೀಕರಿಸದೇ/ಫೈಲಿಂಗ್ ಮಾಡದೇ ಬಾಕಿ ಇರುವ ಸಂಘ, ಸಂಸ್ಥೆಗಳ ನೊಂದಣಿಯನ್ನು ಕಲಂ 13 ರಂತೆ ರದ್ದುಗೊಳಿಸಲು ಕಾಯ್ದೆಯಲ್ಲಿ ಅವಕಾಶ ಇರುತ್ತದೆ. ಸಂಘ, ಸಂಸ್ಥೆಗಳ ಸದಸ್ಯರ ಹಿತದೃಷ್ಟಿಯಿಂದ ಮತ್ತೊಂದು ಬಾರಿ ದಂಡ ವಿಧಿಸಿ 31–12–2025 ರ ವರೆಗೆ ನವೀಕರಿಸಲು/ಫೈಲಿಂಗ್ ಮಾಡಲು ಅನುಮತಿಯನ್ನು ನೀಡಲಾಗಿದೆ. 05 ವರ್ಷಗಳಿಗೆ ಮೇಲ್ಪಟ್ಟು ಫೈಲಿಂಗ್ ಮಾಡಿಕೊಳ್ಳದೇ ಬಾಕಿ ಇರುವ ಸಂಘ, ಸಂಸ್ಥೆಗಳು ಪ್ರತಿ ವರ್ಷಕ್ಕೆ ರೂ.3000 ಹೆಚ್ಚುವರಿ ದಂಡ ಪಾವತಿಸಿ ಫೈಲಿಂಗ್ ಮಾಡಿಕೊಳ್ಳತಕ್ಕದ್ದು, ಈ ಅವಕಾಶವು ದಿನಾಂಕ:31–12–2025 ರ ಅಂತ್ಯದವರೆಗೆ ಜಾರಿಯಲ್ಲಿರುತ್ತದೆ. ನಂತರ 5 ವರ್ಷಗಳಿಗೆ ಮೇಲ್ಪಟ್ಟು ನವೀಕರಣಕ್ಕಾಗಿ ಬಂದ ಸಂಘ–ಸಂಸ್ಥೆಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಎಲ್ಲಾ ದಾಖಲಾತಿಗಳನ್ನು ಮುದ್ದಾಂ ಸಹಕಾರ ಸಂಘಗಳ ಉಪನಿಬಂಧಕರು ಹಾಗೂ ಸಂಘ–ಸಂಸ್ಥೆಗಳ ಜಿಲ್ಲಾ ನೊಂದಣಾಧಿಕಾರಿಗಳು, ಬೀದರ ಈ ಕಚೇರಿಗೆ ಸಲ್ಲಿಸತಕ್ಕದ್ದು. ಇಲ್ಲದಿದ್ದರೆ ದಿನಾಂಕ:31–12–2025ರ ನಂತರ ಫೈಲಿಂಗ್ ಮಾಡಿಕೊಳ್ಳದೆ ಬಾಕಿ ಇರುವ 05 ವರ್ಷ ಮೇಲ್ಪಟ್ಟ ಸಂಘ–ಸಂಸ್ಥೆಗಳ ರದ್ದತಿ ಮಾಡಲಾಗುವುದು ಅವರು ಮಾಹಿತಿ ನೀಡಿದ್ದಾರೆ.

# ಸಂವಿಧಾನ ದಿನಾಚರಣೆಗೆ ಅಗತ್ಯ ಸಿದ್ಧತೆಯಾಗಲಿ: ಶಿವಾನಂದ



**ಮಲ್ಲಮ್ಮ ನುಡಿ ವಾರ್ತೆ**

**ರಾಯಚೂರು:** ನ, 22 ನವೆಂಬರ್ 26ರಂದು ರಾಯಚೂರು ಜಿಲ್ಲಾ ಮತ್ತು ಸಿಂಧನೂರ, ಮಾನವಿ, ಲಿಂಗಸಗೂರು, ಸಿರವಾರ, ಅರ–ಕೇರಿ, ದೇವದುರ್ಗ ಸೇರಿದಂತೆ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಸಂವಿಧಾನ ದಿನಾಚರಣೆಯನ್ನು ಅಚ್ಚುಕಟ್ಟಾಗಿ ಆಚರಣೆ ಮಾಡಲು ಎಲ್ಲಾ ರೀತಿಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನವೆಂಬರ್ 21ರಂದು ಸಂಜೆ, ನೂತನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ಡಾ.ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆಯಿಂದ ಸಂವಿಧಾನ ಪುಸ್ತಕಗಳನ್ನು ಪೂರೈಸಲಾಗುತ್ತಿದ್ದು, ನವೆಂಬರ್ 26ರಂದು ಜಿಲ್ಲೆಯ ಎಲ್ಲಾ ಪ್ರೌಢಶಾಲೆಗಳು ಮತ್ತು ಕಾಲೇಜು ವಿದ್ಯಾರ್ಥಿಗಳಿಂದ ಜಿಲ್ಲಾ ಹಾಗೂ ತಾಲೂಕು ಮಟ್ಟದಲ್ಲಿ ರಾಷ್ಟ್ರಧ್ವಜಗಳ ಪ್ರದರ್ಶನದೊಂದಿಗೆ ವಿದ್ಯಾರ್ಥಿಗಳಿಂದ ಸಂವಿಧಾನ ಪುಸ್ತಕಗಳನ್ನು ಪ್ರದರ್ಶಿಸುವುದರೊಂದಿಗೆ ಜಾಥಾಗಳನ್ನು ಹಮ್ಮಿಕೊಳ್ಳಬೇಕು.ಜಾಥಾದಲ್ಲಿ ಸಂವಿಧಾನದ ಕುರಿತು ಡಾ.ಬಿ.ಆರ್. ಅಂಬೇಡ್ಕರ್ ಅವರ ಪ್ರಮುಖ ನುಡಿಮುತ್ತುಗಳ ಪ್ಲೇಕಾರ್ಡಗಳನ್ನು ಪ್ರದರ್ಶಿಸಬೇಕು.ಜಿಲ್ಲಾ ಹಾಗೂ ಎಲ್ಲ ತಾಲೂಕು ಕೇಂದ್ರದಲ್ಲಿ ವೇದಿಕೆ ಕಾರ್ಯಕ್ರಮ ರೂಪಿಸಿ ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ಸಂವಿಧಾನದ ಕುರಿತು ಉಪನ್ಯಾಸ ಏರ್ಪಡಿಸಬೇಕು ಎಂದು ಅವರು ಸೂಚನೆ ನೀಡಿದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಸಂದರ್ಭದಲ್ಲಿ ಆಯೋಜಿಸಲಾದ ಚರ್ಚಾ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ, ಛಾಯಾಚಿತ್ರ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಇದೆ ವೇಳೆ ಬಹುಮಾನ ವಿತರಣೆಗೆ ಕ್ರಮ ವಹಿಸಬೇಕು. ಈ ಸಂವಿಧಾನ ದಿನಾಚರಣೆಯಲ್ಲಿ ಪಾಲ್ಗೊಂಡ ಮಕ್ಕಳಿಗೆ ಕಡ್ಡಾಯವಾಗಿ ಲಘು ಉಪಹಾರದ ವ್ಯವಸ್ಥೆ ಮಾಡಬೇಕು ಎಂದು ಅವರು ತಿಳಿಸಿದರು.

ತಾಲೂಕುಮಟ್ಟದ ಅಧಿಕಾರಿಗಳಿಗೆ ಸೂಚನೆ: ಸಿಂಧನೂರ, ಮಾನವಿ, ಲಿಂಗಸಗೂರು, ಸಿರವಾರ, ಅರಕೇರಿ, ದೇವದುರ್ಗ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರಗಳು,ತಾಲೂಕು ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಒಗ್ಗೂಡಿ ಶಿಷ್ಟಾಚಾರ ಪಾಲಿಸಿ ಕಾರ್ಯಕ್ರಮಗಳನ್ನು ಅಚ್ಚುಕಟ್ಟಾಗಿ ಅನುಷ್ಠಾನಗೊಳಿಸಲು ಈಗಿನಿಂದಲೇ ಕ್ರಮವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ನವೆಂಬರ್ 26ರಂದು ವಿಶೇಷ ಜಾಥಾ: ರಾಯಚೂರು ಜಿಲ್ಲಾ ಕೇಂದ್ರದಲ್ಲಿ ನವೆಂಬರ್ 26ರಂದು ಸಂವಿಧಾನ ಜಾಗೃತಿ ಜಾಥಾವನ್ನು ವಿಶೇಷವಾಗಿ ನಡೆಸಲು ಸಭೆಯಲ್ಲಿ ನಿರ್ಣಯಿಸಲಾಯಿತು. ಅಂದು ಬೆಳಗ್ಗೆ 9 ಗಂಟೆಗೆ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಾಥಾ ಆರಂಭವಾಗಿ ಬಸ್ ನಿಲ್ದಾಣದ ಮಾರ್ಗ ಬಳಸಿ ತೀನ್ ಕಂದಿಲ್ ವೃತ್ತ, ಚಟ್ಟಿಭಾವಿ ಚೌಕ್, ಸರ್ದಾರ್ ವಲ್ಲಭಬಾಯಿ ಪಟೇಲ್ ರಸ್ತೆ, ಗಾಂಧಿ ಚೌಕ್, ಹಳೆಯ ಡಿ.ಸಿ ಆಫೀಸ್ ರಸ್ತೆ, ಬಸವೇಶ್ವರ ವೃತ್ತ, ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಿಲ್ಲಾ ರಂಗಮಂದಿರವರೆಗೆ ನಡೆಸಲು ಸಭೆಯಲ್ಲಿ ಚರ್ಚಿಸಿ ನಿರ್ಣಯಿಸಲಾಯಿತು.

ವಿಶೇಷ ಉಪನ್ಯಾಸ: ಸಂವಿಧಾನ ದಿನಾಚರಣೆಯ ವೇದಿಕೆಯ ಕಾರ್ಯಕ್ರಮವನ್ನು ಜಿಲ್ಲಾ ರಂಗಮಂದಿರದಲ್ಲಿ ನಡೆಸಲು ನಿರ್ಣಯಿಸಲಾಯಿತು. ಸಂವಿಧಾನದ ಬಗ್ಗೆ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲು ನಿಟ್ಟಿನಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ಸಂವಿಧಾನ ಜಾಗೃತಿಯ ಉಪನ್ಯಾಸ ಏರ್ಪಡಿಸಬೇಕು. ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆಯನ್ನು ಮುದ್ರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು. ಅಚ್ಚುಕಟ್ಟಾಗಿ ನಡೆಯಲಿ: ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ರಾಜ್ಯ ಸರ್ಕಾರವು ವಿಶಿಷ್ಟವಾಗಿ ಆಚರಿಸುತ್ತಿರುವುದು ಸಂತಷದ ಸಂಗತಿಯಾಗಿದೆ. ಕಾರ್ಯಕ್ರಮಕ್ಕೆ ಕೆಲವೇ ದಿನಗಳು ಬಾಕಿ ಇದ್ದು, ಕಾರ್ಯಕ್ರಮ ಅಚ್ಚುಕಟ್ಟಾಗಿ ನಡೆಯಲು ಜಿಲ್ಲೆಯ ಎಲ್ಲಾ ಸಂಘ ಸಂಸ್ಥೆಗಳಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಸಂವಿಧಾನ ಸಂರಕ್ಷಣಾ ಪಡೆಯ ಕೆ.ಇ.ಕುಮಾರ, ಮುಖಂಡರಾದ ಎಂ.ಆರ್.ಭೇರಿ, ವಿಶ್ವನಾಥ ಪಟ್ಟಿ, ಬಸವರಾಜ ಸಾಸಲಮರಿ ಹಾಗೂ ಇನ್ನಿತರರು ಸಲಹೆ ಮಾಡಿದರು.

ಎಲ್ಲರೂ ಭಾಗಿಯಾಗಲಿ: ಅವರು ಇವರು ಎನ್ನದೇ ಎಲ್ಲರನ್ನೂ ಒಳಗೊಂಡಿರುವುದೇ ಸಂವಿಧಾನದ ವಿಶೇಷತೆಯಾಗಿದೆ. ನವೆಂಬರ್ 26ರಂದು ರಾಯಚೂರು ಜಿಲ್ಲೆಯಲ್ಲಿ ನಡೆಯುವ ಸಂವಿಧಾನ ಜಾಗೃತಿ ಜಾಥಾದಲ್ಲಿ ಎಲ್ಲ ಸಮುದಾಯಗಳ ಸಂಘಟನೆಗಳು, ನಾಗರಿಕರು, ಯುವಕರು, ಮಹಿಳೆಯರು ತಪ್ಪದೇ ಭಾಗಿಯಾಗಿ ಸಂವಿಧಾನ ದಿನಾಚರಣೆಯ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ದಲಿತ ಮತ್ತು ಎಲ್ಲರ ಪರವಾಗಿ ಮನವಿ ಮಾಡುವೆ ಎಂದು ಚಿಂತಕಿ ಅನಿತಾ ನವಲಕಲ್ ಅವರು ಸಭೆಗೆ ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂಧು ರಘು ಎಚ್.ಎಸ್. ಅವರು ಸಂವಿಧಾನ ದಿನಾಚರಣೆಯ ಮಾರ್ಗಸೂಚಿಯ ಸುತ್ತೋಲೆಯನ್ನು ಸಭೆಗೆ ಓದಿ ಹೇಳಿದರು.

ಸಭೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರಾದ ಜಾನ್‌ವೆಸ್ಲಿ, ಗಿರಿಯಪ್ಪ ನೆಲಹಾಳ, ಕರುಣಕುಮಾರ ಕಟ್ಟಿಮನಿ, ಪಿ.ಪ್ರಭಾಕರ, ಪರಶುರಾಮ ಅರೋಲಿ, ಪ್ರಾಣೇಶ ಮಂಚಾಳ, ರವಿ ದಾದಸ, ಎಂ.ವೆಂಕಟೇಶ ಅರೋಲಿಕರ, ನಿವೇದಿತಾ ಎನ್, ಜಿಲ್ಲಾ ಪೊಲೀಸ್ ಇಲಾಖೆಯ ಶಾಂತವೀರ್ ಈ., ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ, ಪುರಸಭೆ ತಹಸೀಲ್ದಾರ ಎಂ.ಡಿ.ಆಸೀಫ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಪ್ಪ ಉಪ್ಪಾಳ, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ,

ಆಹಾರ ಇಲಾಖೆಯ ಲೆಕ್ಕಾಧಿಕ್ಷಕರಾದ ಸಿದ್ದಪ್ಪ, ಮಹಾನಗರ ಪಾಲಿಕೆಯ ವಿನೋದಕುಮಾರ ಎಂ., ರಾಯಚೂರು ಸಿಟಿ ಕಾರ್ಪೋರೇಶನ್ ಅಧಿಕಾರಿ ಜೈಪಾಲ ರೆಡ್ಡಿ, ಶಾಲಾ ಶಿಕ್ಷಣ ಇಲಾಖೆಯ ಬಿ ಎನ್ ಕುಮಾರಸ್ವಾಮಿ, ಕಾರ್ಮಿಕ ಇಲಾಖೆಯ ಗಂಗಮ್ಮ, ವಿಕಲಚೇತನರ ಇಲಾಖೆಯ ವಿನಯಕುಮಾರ, ಕೈಮಗ್ಗ ಮತ್ತು ಜವಳಿ ಇಲಾಖೆಯ ರಾಮಕೃಷ್ಣ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಶ್ವಕರ್ಮ ಸಮುದಾಯಕ್ಕೆ ರಾಜಕೀಯ ಜಾಗೃತಿ ಮುಖ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ರಾಜಕೀಯ ಶಕ್ತಿಗೆ ವಿಶ್ವಕರ್ಮರ ಶಕ್ತಿ ಪ್ರದರ್ಶನದ ಅಗತ್ಯವಿದೆ ಎಂದು ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಸುಜ್ಞಾನಮೂರ್ತಿ ಹೇಳಿದರು.

ಬೆಳಗಾವಿ ಜಿಲ್ಲೆಯ ಶಿರಸಂಗಿ ವಿಶ್ವಕರ್ಮ ಶಕ್ತಿಪೀಠ ಕಾಳಿಕಾದೇವಸ್ಥಾನದ ಆವರಣದಲ್ಲಿ ನಡೆದ ಧಾರ್ಮಿಕ ಸಭೆ, ದಾನಿಗಳಿಗೆ ಸನ್ಮಾನ ಹಾಗೂ ಕಲಾಪ್ರದರ್ಶನ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದ ಅವರು, ವಿಶ್ವಕರ್ಮರು ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಧಾರ್ಮಿಕವಾಗಿ ಉನ್ನತ ಸ್ಥಾನದಲ್ಲಿದ್ದಾರೆ. ಸಮುದಾಯದ ಸರ್ವಾಂಗಿಣ ಬೆಳವಣಿಗೆಗೆ ರಾಜಕೀಯ ಜಾಗೃತಿ ಮುಖ್ಯವಾಗಿದ್ದು ಅದಕ್ಕೆ ವಿಶ್ವಕರ್ಮರ ಶಕ್ತಿ ಅಗತ್ಯವಾಗಿದೆ ಎಂದರು.

ಇನ್ನೋರ್ವ ಅತಿಥಿ ವಿಶ್ವಕರ್ಮ ಸಮುದಾಯ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಬಾಬು ಪತ್ತಾರ ಮಾತನಾಡಿ, ಸಮಾಜ ಧಾರ್ಮಿಕ ತಳಹದಿಯ ಮೇಲೆ ಬೆಳೆಯುತ್ತಿದೆ.ದೇಶವನ್ನಾಳುವ ಶಕ್ತಿ ವಿಶ್ವಕರ್ಮರಿಗೆ ಇದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ವಿಶ್ವಕರ್ಮ ಸಮಾಜ ವಿಕಾಸ ಸಂಸ್ಥೆಯ ಅಧ್ಯಕ್ಷ ಪ್ರೊ.ಪಿ.ಬಿ.ಬಡಿಗೇರ ಮಾತನಾಡಿ, ಸಂಸ್ಥೆಯ ಸುವರ್ಣ ಸಂಭ್ರಮವನ್ನು ರಾಜ್ಯದ ವಿಶ್ವಕರ್ಮರನ್ನು ಕ್ಷೇತ್ರದಲ್ಲಿ ಒಟ್ಟಿಗೆ ಸೇರಿಸಿ ಅದ್ದೂರಿಯಾಗಿ ಆಚರಣೆ ಮಾಡುವ ನಿಮಿತ್ಯ ಪ್ರಧಾನಮಂತ್ರಿ ನರೇಂಧ್ರ ಮೋದಿಯವರನ್ನು ಕರೆಸುವ ಸಂಕಲ್ಪ ಹೊಂದಿದ್ದೇವೆ ಎಂದರು.

ಸಾನಿಧ್ಯ ವಹಿಸಿದ ಚಿಕ್ಕುಂಬಿ ನಾಗಲಿಂಗೇಶ್ವರ ಮಠದ ಪೂಜ್ಯರಾದ ಅಭಿನವ ನಾಗಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶಿಲಾಶಿಲ್ಪ, ಕಾಷ್ಟಶಿಲ್ಪ, ಆಭರಣ ಶಿಲ್ಪ, ಕಂಚು ಶಿಲ್ಪ, ಯಂತ್ರಶಿಲ್ಪ, ಚಿತ್ರಶಿಲ್ಪ,ಅರಮನೆ ಶಿಲ್ಪ, ಗೋಪುರ ಶಿಲ್ಪ,ಕೋಟೆ-ಕೊತ್ತಲ ಶಿಲ್ಪ,ರಥಶಿಲ್ಪ, ಜಲಶಿಲ್ಪ ಅಂದರೆ ಅಡುಗು ಶಿಲ್ಪ, ವಿಮಾನ ಶಿಲ್ಪ, ಆಯುಧ ಶಿಲ್ಪ, ಯುದ್ದೋಪಕರಣ ಶಿಲ್ಪ, ಹೀಗೆ ಹಲವು ಪ್ರಕಾರದ ಶಿಲ್ಪಗಳಲ್ಲಿ ನಿಷ್ಣಾತರಾದ ಪುರಾತನ ವೈಶ್ವಕರ್ಮಣರು ಕಲಾಸಂಪತ್ತು ಮತ್ತು ವೈಜ್ಞಾನಿಕ ಸಂಪತ್ತುಗಳೆರಡನ್ನೂ ಸಂಪಾದಿಸಿದ್ದರು ಎಂದರು.

ವಿಶ್ವಕರ್ಮರು ರಕ್ತಗತವಾಗಿ ಬಂದ ಕಲೆ, ಜ್ಞಾನ ಸಂಪತ್ತನ್ನು ಉಳಿಸಿ ಬೆಳೆಸಬೇಕಾಗಿದೆ, ಜೊತೆಗೆ ನಿತ್ಯ ಧಾರ್ಮಿಕ ಆಚಾರಣೆಗಳ ಮೂಲಕ ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಶ್ರೀಗಳು ಹೇಳಿದರು.

ಕಾಳಿಕಾದೇವಿ ದೇವಸ್ಥಾನದ ಪ್ರಧಾನ ಅರ್ಚಕರಾದ ತೇಜಪ್ಪಾಚಾರ್ಯ ಮೂಕಿ ಸಾನಿಧ್ಯ ವಹಿಸಿದ್ದರು. ಇದೇ ಸಂಧರ್ಭದಲ್ಲಿ ಉಡುಪಿಯ ಸಂಗೀತ ವಿದ್ವಾನ ಯಶವಂತ ಎಂ.ಜಿ, ಸಮಾಜದ ಗೌರವಾಧ್ಯಕ್ಷ ಉಮೇಶ ಬಿ, ಅಖಿಲ ಕರ್ನಾಟಕ ರಾಜ್ಯ ವಿಶ್ವಕರ್ಮ ಸಮಾಜ ಬೆಂಗಳೂರಿನ ಅಧ್ಯಕ್ಷ ಈಶ್ವರಾಚಾರ್ಯ ಎಂ.ಪಿ.ಕುಮಾರಜಿ,ಹಾಗೂ ಎಂ.ಪಿ.ಚರತ್‌ಚಂದ್ರ, ಭಾರತಿ ಲೋಹಾರ, ನಾಗೇಂದ್ರ ಆಚಾರ, ವೈಶಾಲಿ ಸುತಾರ, ರಾಜಗೋಪಾಲ ಕಡ್ಲಿಕೊಪ್ಪ ಅವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಪ್ರಜ್ವಲ್ ಬಡಿಗೇರ, ಸುದರ್ಶನ ದೇವಾಡಿಗ, ಪ್ರಕಾಶ ಬಡಿಗೇರ, ಕೆ.ಆರ್.ಮೌನೇಶ್ವರ ಆಚಾರ್ಯ, ಮೌನೇಶ ಬಡಿಗೇರ, ವಿಠ್ಠಲ್ ಬರಕಾಳೆ, ರವಿ ನಾಯಕ, ಪವನ ನಾಯಕ, ದರ್ಶನ ಮುಳಹುಂದ, ಸುದೀಪ ಕಮ್ಮಾರ, ರಮೇಶ ಚವ್ಹಾಣ, ಕುಭೇರ ನಾಗಲೂರ, ಕಾವ್ಯ ಎಸ್.ಪಿ., ನವೀನಕುಮಾರ ಶಿರವಾರ, ಹನಮಂತ ಕಮ್ಮಾರ ಅವರಿಗೆ ಬಹುಮಾನ ನೀಡಿ ಸತ್ಕರಿಸಲಾಯಿತು.

ರಾಜ್ಯಮಟ್ಟದ ಕಲಾ ಪ್ರದರ್ಶನದ ಮಾರ್ಗದರ್ಶಕರಾದ ಎಸ್.ಕೆ.ಪತ್ತಾರ, ಎಸ್.ಎಂ.ಲೋಹಾರ, ಎಂ.ಕೆ.ಪತ್ತಾರ, ಡಾ.ವಿರುಪಾಕ್ಷ ಬಡಿಗೇರ, ಶಂಕರ ಪತ್ತಾರ, ಎಂ.ಬಿ.ಬಡಿಗೇರ, ನವೀನಕುಮಾರ ಆಚಾರ, ವಿರೇಶ ಬಡಿಗೇರ, ಸಂಗಮೇಶ ಬಡಿಗೇರ ಇವರುಗಳು ಬಹುಮಾನ ವಿತರಣೆ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಎಸ್‌ಆರ್‌ಕೆ ಸಂಸ್ಮರಣ ಗ್ರಂಥಕ್ಕೆ ಲೇಖನ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಮಾಜಿ ಸಚಿವ ಎಸ್.ಆರ್. ಕಾಶಪ್ಪನವರ ಅವರ ಜನ್ಮ ಅಮೃತ ಮಹೋತ್ಸವವನ್ನು 2026 ರಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಆ ನಿಮಿತ್ತ ಸಂಸ್ಮರಣ ಗ್ರಂಥವನ್ನು ಪ್ರಕಟಿಸಲಾಗುವುದು.

ಅವರ ಒಡನಾಡಿಗಳು, ಆಪ್ತರು, ಸಂಪರ್ಕದಲ್ಲಿ ಇದ್ದವರು ಲೇಖನ ಕಳಿಸಬಹುದು. ಅಲ್ಲದೆ ಅವರ ಜೊತೆಗಿನ ಅಥವಾ ವಿವಿಧ ಸಂದರ್ಭಗಳಲ್ಲಿ ತೆಗೆದ ಫೋಟೋಗಳನ್ನು ಕೂಡ ಕಳಿಸಬಹುದು.

ಲೇಖನ ನಾಲ್ಕು ಪುಟಗಳದ್ದಾಗಿರಲಿ. ಬರೆದಿರಬಹುದು ಅಥವಾ ಡಿ.ಟಿ.ಪಿ. ಮಾಡಿರಬಹುದು. ತಮ್ಮ ಲೇಖನಗಳನ್ನು ಸಿದ್ದಲಿಂಗಪ್ಪ ಬೀಳಗಿ, ಸಂಪಾದಕರು ಹಾಗೂ ನಿವೃತ್ತ ಉಪನ್ಯಾಸಕರು ಮಹಾಂತನಗರ ಹುನಗುಂದ-587118 (ಮೊ.7892834144) ಇವರಿಗೆ ಡಿಸೆಂಬರ್ 31 ರೊಳಗೆ ಕಳಿಸಬೇಕು ಎಂದು ಪ್ರಧಾನ ಸಂಪಾದಕ ಎಸ್.ಕೆ.ಕೊನೆಸಾಗರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.13 ರಾಷ್ಟ್ರೀಯ ಲೋಕ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ.: ಬಾಗಲಕೋಟೆ ಜಿಲ್ಲೆಯಾದ್ಯಂತ ಎಲ್ಲ ಅಧೀನ ನ್ಯಾಯಾಲಯ ಮತ್ತು ಜಿಲ್ಲಾ ನ್ಯಾಯಾಲಯಗಳಲ್ಲಿ ಡಿಸೆಂಬರ 13 ರಂದು ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮ ಆಯೋಜಿಸಲಾಗಿದೆ.

ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಕಾನೂನಿನ ಅನ್ವಯ ರಾಜೀ ಆಗಬಹುದಾದ ಕ್ರಿಮಿನಲ್ ಪ್ರಕರಣಗಳು, ಎಂ.ಎಂ.ಆರ್.ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರ ವಾಹನ ಅಪಘಾತ ಪರಿಹಾರ ಕೋರಿರುವ ಪ್ರಕರಣಗಳು, ಸ್ಥಳೀಯ ಸಂಸ್ಥೆಗಳ ಪರ ಮತ್ತು ವಿರುದ್ದ ದಾಖಲಾದ ಪ್ರಕರಣ, ಬ್ಯಾಂಕ್‌ಗಳಿಗೆ ಸಂಬಂಧಿಸಿದ ಪ್ರಕರಣ, ವೈವಾಹಿಕ ಅಥವಾ ಜೀವನಾಂಶ ಪ್ರಕರಣ, ಆಸ್ತಿಯಲ್ಲಿ ವಿಭಾಗ ಕೋರಿರುವ ದಾವೆಗಳು, ಇತರೆ ಸಿವ್ಹಿಲ್ ವ್ಯಾಜ್ಯಗಳು ಹಾಗೂ ಕಾರ್ಮಿಕ ನಷ್ಟ ಪರಿಹಾರ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ.

ಬ್ಯಾಂಕ್, ನೀರು ಮತ್ತು ವಿದ್ಯುತ್‌ಗೆ ಸಂಬಂಧಿಸಿದ ವ್ಯಾಜ್ಯ ಪೂರ್ವ ಪ್ರಕರಣಗಳನ್ನು ಸಹ ಬಗೆಹರಿಸಿಕೊಳ್ಳಲು ಅವಕಾಶವಿರುತ್ತದೆ. ಸದ್ಯ ಜಿಲ್ಲೆಯಲ್ಲಿ ಒಟ್ಟು 64234 ಪ್ರಕರಣಗಳು ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಇದ್ದು, ಕಳೆದ ಬಾರಿ ನಡೆದ ಲೋಕ ಅದಾಲತ್‌ನಲ್ಲಿ 5085 ಪ್ರಕರಣಗಳು ಇತ್ಯರ್ಥಗೊಂಡಿದ್ದು, ಈ ಬಾರಿ ಲೋಕ ಅದಾಲತ್‌ನಲ್ಲಿ ಅಂದಾಜು 65 ಸಾವಿರ ಪ್ರಕರಣಗಳನ್ನು ಇತ್ಯರ್ಥಪಡಿಸುವ ಗುರಿ ಹೊಂದಲಾಗಿದೆ.

ವಕೀಲರು, ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎನ್.ವ್ಹಿ.ವಿಜಯ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೆಂಕಟೇಶ ಗಂಜೀಹಾಳ ರಾಜ್ಯಮಟ್ಟಕ್ಕೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ತಾಲೂಕಿನ ಬೇವೂರಿನ ಆದರ್ಶ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿ ವೆಂಕಟೇಶ ಗಂಜೀಹಾಳ 3 ಸಾವಿರ ಮೀಟರ ಓಟದ ಸ್ಪರ್ಧೆಗಾಗಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾನೆ.

ಈಚೆಗೆ ಬಾಗಲಕೋಟೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ಪ್ರೌಢಶಾಲಾ ವಿಭಾಗದ ಜಿಲ್ಲಾಮಟ್ಟದ ಕ್ರೀಡಾಕೂಟದಲ್ಲಿ ವೆಂಕಟೇಶ ಈ ಓಟದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಲು ಅರ್ಹತೆ ಪಡೆದಿದ್ದಾನೆ ಎಂದು ಮಹಾವಿದ್ಯಾಲಯದ ಪ್ರಾಚಾರ್ಯ ವ್ಹಿ.ಬಿ.ಅರಹುಣಸಿ, ಮುಖ್ಯಗುರು ಯೋಗೇಶ ಲಮಾಣಿ, ದೈಹಿಕ ಶಿಕ್ಷಣ ಶಿಕ್ಷಕ ಪ್ರಕಾಶ ತಳವಾರ ತಿಳಿಸಿದ್ದಾರೆ.

# ಸಂವಿಧಾನ ದಿನಾಚರಣೆ ಅರ್ಥಪೂರ್ಣ ಆಚರಣೆಗೆ ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ಜಿಲ್ಲಾ ಮತ್ತು ತಾಲೂಕಾ ಮಟ್ಟದಲ್ಲಿ ನವೆಂಬರ 26 ರಂದು ಆಚರಿಸಲ್ಪಡುವ ಸಂವಿಧಾನ ದಿನಾಚರಣೆಯನ್ನು ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಈ ಕುರಿತು ಜರುಗಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ನವೆಂಬರ 26 ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾಡಳಿತ ಭವನದಿಂದ ಡಾ.ಬಿ.ಆರ್.ಅಂಬೇಡ್ಕರ ಭವನದವರೆಗೆ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ.

ಜಾಥಾದಲ್ಲಿ ವಿವಿಧ ಜಾನಪದ ಕಲಾತಂಡಗಳು ಭಾಗವಹಿಸಲಿದ್ದು, ಇದರ ಜೊತೆಗೆ ಎನ್.ಎಸ್.ಎಸ್, ಸ್ಕೌಟ್ಸ್ ಮತ್ತು



ಗೈಡ್ಸ್ ಅವರಿಂದ ರಾಷ್ಟ್ರಧ್ವಜ ಹಾಗೂ ಶಾಲಾ, ಕಾಲೇಜು ವಿದ್ಯಾರ್ಥಿಗಳಿಂದ ಸಂವಿಧಾನ ಪುಸ್ತಕಗಳನ್ನು ಪ್ರದರ್ಶಿಸಲು ಕ್ರಮಕೈಗೊಳ್ಳಲು ತಿಳಿಸಿದರು.

ಸಂವಿಧಾನ ಜಾಥಾದಲ್ಲಿ ಪರಿಶಿಷ್ಟ ಜಾತಿ, ಪಂಗಡದ ಸಮುದಾಯದವರು, ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳ ದುರೀಣರು, ಶಾಲಾ, ಕಾಲೇಜು ವಿದ್ಯಾರ್ಥಿಗಳು ಭಾಗವಹಿಸುವಂತೆ ಮಾಡಲು ತಿಳಿಸಿದ ಜಿಲ್ಲಾಧಿಕಾರಿಗಳು. ವೇದಿಕೆ ಕಾರ್ಯಕ್ರಮ ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಆಯೋಜಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಸಂವಿಧಾನ ದಿನಾಚರಣೆ ಮಹತ್ವದ ಬಗ್ಗೆ ಉಪನ್ಯಾಸ ನೀಡಲು ಉತ್ತಮ ಉಪನ್ಯಾಸಕರನ್ನು ಆಹ್ವಾನಿಸಲು ತಿಳಿಸಿದರು.

ಸಂವಿಧಾನ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಚಿತ್ರಕಲಾ, ಪೋಟೋಗ್ರಾಫಿ ಹಾಗೂ ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಗುತ್ತಿದೆ ಎಂದು ಅವರು ಹೇಳಿ, ತಾಲೂಕಾ ಮಟ್ಟದಲ್ಲಿಯೂ ಸಹ ಅರ್ಥಪೂರ್ಣ ಆಚರಣೆ ಕ್ರಮಕೈಗೊಳ್ಳಲು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ ಸಹಾಯಕ ಉಪಕಾರ್ಯದರ್ಶಿ ಎಸ್.ಎಂ.ಕಾಂಬಳೆ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ನಗರಸಭೆ ಪೌರಾಯುಕ್ತ ವಾಸಣ್ಣ ಆರ್ ಸೇರಿದಂತೆ ಇತರೆ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಹುಬ್ಬಳ್ಳಿಯ ಕಾಳಿಕಾ ದೇವಸ್ಥಾನದಲ್ಲಿ ದೀಪೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಹುಬ್ಬಳ್ಳಿ: ಹುಬ್ಬಳ್ಳಿ ನವನಗರದ ಪಂಚಾಕ್ಷರಿ ನಗರದಲ್ಲಿರುವ ಶ್ರೀ ಕಾಳಿಕಾ ದೇವಸ್ಥಾನದಲ್ಲಿ ಛಟ್ಟಿ ಅಮಾವಾಸ್ಯೆ ದಿನವಾದ ಗುರುವಾರ ರಾತ್ರಿ ಕಾರ್ತಿಕ ದೀಪೋತ್ಸವ ಸಂಭ್ರಮದಿಂದ ಜರುಗಿತು.

ಬೆಳಿಗ್ಗೆ ಕಾಳಿಕಾ ದೇವಸ್ಥಾನದಲ್ಲಿ ಭಕ್ತಾದಿಗಳಿಂದ ಕಾಳಿಕಾದೇವಿ, ಗಣೇಶ, ವಿಶ್ವಕರ್ಮ ಹಾಗೂ ನಾಗದೇವತೆಗಳಿಗೆ ಪಂಚಾಮೃತ ಅಭಿಷೇಕ, ಹೂವಿನ ಅಲಂಕಾರ ಸೇವೆ ಹಾಗೂ ಮಹಾಮಂಗಳಾರತಿ ಜರುಗಿದವು.

ನಂತರ ನಡೆದ ಸಮಾರಂಭದಲ್ಲಿ ಧಾರವಾಡ ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ಮಾರುತಿ ಶೇಟ್ ಮುಖ್ಯ ಅತಿಥಿಯಾಗಿ ಮಾತನಾಡಿ, ಭಾರತೀಯ ಸನಾತನ ಧರ್ಮದಲ್ಲಿ ದೀಪವು ಜ್ಞಾನದ ಸಂಕೇತವಾಗಿದೆ ಎಂದರಲ್ಲದೆ, ಕಾರ್ತಿಕ ದೀಪೋತ್ಸವದ ಮಹತ್ವವನ್ನು ವಿವರಿಸಿ, ನಮ್ಮ ಧಾರ್ಮಿಕ ಪರಂಪರೆ ಸೌಹಾರ್ದದ ಸಂಕೇತವಾಗಿ, ಇಡೀ ಜಗತ್ತಿಗೆ ಮಾದರಿಯಾಗಿದೆ ಎಂದರು. ವಿಶ್ವಕರ್ಮ ವಿಕಾಸ ಸಮಿತಿ ಟ್ರಸ್ಟಿನ ಅಧ್ಯಕ್ಷ ಸಿ.ಪಿ.ಮಾಯಾಚಾರಿ ಅಧ್ಯಕ್ಷತೆ ವಹಿಸಿದ್ದರು.

ನಂತರ ಅನ್ನ ಸಂತರ್ಪಣೆ ಜರುಗಿತು. ಸಂಜೆ 7.10 ಕ್ಕೆ ಕಾರ್ತಿಕ ದೀಪೋತ್ಸವ ಜರುಗಿತು. ಈ ದೀಪೋತ್ಸವದಲ್ಲಿ "ಸಿಂಧೂರ" ಅಕ್ಷರಗಳಿಗೆ ಪುಷ್ಪಲಂಕಾರ ಮಾಡಿ, ದೀಪಗಳನ್ನು ಜೋಡಿಸಿ ಬೆಳಗಿಸಿದ್ದು ವಿಶೇಷವಾಗಿತ್ತು. ನಂತರ ಶ್ರೀಕಾಳಿಕಾದೇವಿಗೆ ಮಹಾ ಮಂಗಳಾರತಿ ಜರುಗಿ , ಪ್ರಸಾದ ವಿತರಣೆ ಮಾಡಲಾಯಿತು. ವಿಶ್ವಕರ್ಮ ವಿಕಾಸ ಸಮಿತಿ ಟ್ರಸ್ಟ್, ವಿಶ್ವಕರ್ಮ ಯುವಕ ಸಂಘ ಹಾಗೂ ವಿಶ್ವಚೇತನ ಮಹಿಳಾಮಂಡಳದ ಸದಸ್ಯರು ಮತ್ತು ಕಾಲೋನಿಯ ಭಕ್ತಾದಿಗಳು ಕಾರ್ತಿಕೋತ್ಸವದಲ್ಲಿ ಪಾಲ್ಗೊಂಡಿದ್ದರು .

# ಅಭಿಯಾನದ ಲಾಭ ಪಡೆಯಿರಿ ತಹಶೀಲ್ದಾರ್ ಪಂಚಾಳ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ : ರೈತರ ಅನುಕೂಲಕ್ಕಾಗಿ ರಾಜ್ಯ ಸರ್ಕಾರವು ಇ-ಪಾವತಿ ಅಭಿಯಾನ (ವಾರಸುದಾರರ ಹಕ್ಕು ಬದಲಾವಣೆ) ಆಂದೋಲನ ಜಾರಿಗೆ ತಂದಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಹಶೀಲ್ದಾರ್ ಮಂಜುನಾಥ್ ಪಂಚಾಳ ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಮರಣ ಹೊಂದಿದ ಪಟ್ಟೆದಾರರ ಹೆಸರು ತೆಗೆದು, ಅವರ ಕಾನೂನು ಬದ್ಧ ವಾರಸುದಾರರ ಹೆಸರು ಸೇರಿಸಲು ಅವಕಾಶ ಕಲ್ಪಿಸಲಾಗಿದೆ. ಆದ್ದ-ರಿಂದ ಎಲ್ಲ ರೈತರು ಮೃತರ ಮರಣ ಪ್ರಮಾಣ ಪತ್ರ, ಕುಟುಂಬದ



ವಂಶವೃಕ್ಷ,ಆಧಾರ್‌ಕಾರ್ಡ್ ಹಾಗೂಪಹಣಿಯೊಂದಿಗೆ ಸಂಬಂಧಿಸಿದ ಗ್ರಾಮ ಆಡಳಿತಅಧಿಕಾರಿಗಳನ್ನು ಸಂಪರ್ಕಿಸಬೇಕು, ಯಾವುದೇ ಶುಲ್ಕ ಇರುವುದಿಲ್ಲ ಎಂದು ಹೇಳಿದರು. ಮರಣ ಹೊಂದಿದ ಪಟ್ಟೆದಾರರ ಹೆಸರು ಪಹಣಿಯಲ್ಲಿ ಮುಂದುವರಿದರೆ, ಬ್ಯಾಂಕ್ ಲೋನ್, ಬೆಳೆ ಪರಿಹಾರ, ಬೆಳೆ ವಿಮೆ, ಪಿಎಂ ಕಿಸಾನ್ ಯೋಜನೆ, ಬೀಜ, ಗೊಬ್ಬರ ಹಾಗೂ ಇತರೆ ಸರ್ಕಾರಿ ಸೌಲಭ್ಯ ಸಿಗುವುದಿಲ್ಲ. ಹೀಗಾಗಿ ಎಲ್ಲ ರೈತರು ಇ-ಪಾವತಿ ಖಾತೆ ಅಭಿಯಾನದ ಲಾಭ ಪಡೆದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

# ಸಂಭ್ರಮದ ಬೀಳೂರು ಅಜ್ಜನ ಕಾರ್ತಿಕೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ನಗರದ ಬಿವಿವಿ ಸಂಘದ ಆವರಣದಲ್ಲಿರುವ ಬೀಳೂರು ಅಜ್ಜನ ದೇವಸ್ಥಾನದಲ್ಲಿ ಕಾರ್ತಿಕೋತ್ಸವ ಅಂಗವಾಗಿ ಶುಕ್ರವಾರ ಸಂಜೆ ದೀಪೋತ್ಸವ ಕಾರ್ಯಕ್ರಮ

ಸಂಭ್ರಮದಿಂದ ಜರುಗಿತು. ಬೀಳೂರು ಗುರುಬಸವ ಮಹಾಸ್ವಾಮಿಗಳ ಉತ್ಸವ ಸಮಿತಿಯಿಂದ ಬೆಳಗಿನ ಜಾವ ಬೀಳೂರು ಅಜ್ಜನ ಶಿಲಾಮೂರ್ತಿಗೆ ಪಂಚಾಮೃತ ಅಭಿಷೇಕ,

ರುದ್ರಾಭಿಷೇಕ, ಪುಷ್ಪಾಲಂಕಾರ, ಮಹಾಮಂಗಳಾರುತಿ ನಡೆಯಿತು.

ಸಂಜೆ ನಡೆದ ಕಾರ್ತಿಕ ದೀಪೋತ್ಸವಕ್ಕೆ ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹಾಗೂ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ ಅವರು ಚಾಲನೆ ನೀಡಿದರು. ವಿದ್ಯುತ್ ದೀಪಗಳ ಅಲಂಕಾರದ ಜೊತೆಗೆ ಬಣ್ಣ ಬಣ್ಣದ ಚಿತ್ತಾರದ ರಂಗೋಲಿಯಲ್ಲಿ ದೀಪಗಳ ಬೆಳಕಿನ ಸಂಭ್ರಮ ನೋಡುಗರ ಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಸಂಘದ ಸದಸ್ಯರು, ವಿವಿಧ ಕಾಲೇಜುಗಳ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರುಗಳು, ಮಹಾವಿದ್ಯಾಲಯಗಳ ಪ್ರಾಚಾರ್ಯರು, ಶಿಕ್ಷಕ ವೃಂದ,

ವಿದ್ಯಾರ್ಥಿಗಳು ಹಾಗೂ ಬೀಳೂರು ಮಹಾಸ್ವಾಮಿಗಳ ಉತ್ಸವ ಸಮಿತಿ ಪದಾಧಿಕಾರಿಗಳು ಭಾಗವಹಿಸಿದ್ದರು.

# ದೇಶದ ಎಲ್ಲ ದಾರಿಗಳು ಕಲ್ಯಾಣದ ಕಡೆ ಬರುತ್ತಿದ್ದವು: ಡಾ.ಬಸವಲಿಂಗ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ನಡೆಯಲಿರುವ 46 ನೆಯ ಶರಣ ಕಮ್ಮಟ ಹಾಗೂ ಅನುಭವಮಂಟಪ ಉತ್ಸವ ನಿಮಿತ್ತವಾಗಿ ಹಮ್ಮಿಕೊಂಡಿರುವ ಕಲ್ಯಾಣ ದರ್ಶನ ಪ್ರವಚನದ ಕಾರ್ಯಕ್ರಮದಲ್ಲಿ ನಾಡೋಜ ಪೂಜ್ಯ ಶ್ರೀ ಡಾ.ಬಸವಲಿಂಗ ಪಟ್ಟದ್ದೇವರು ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಬಸವಾದಿ ಶರಣರು ಸಕಲ ಜೀವಾತ್ಮರ ಕಲ್ಯಾಣ ಬಯಸಿದ ಮಹಾನುಭಾವರು. 12.ನೇಯ ಶತಮಾನದ ಕಲ್ಯಾಣ ಸರ್ವ ಸಮಾನತೆಯ ಕಲ್ಯಾಣವಾಗಿತ್ತು. ದೇಶದ ಎಲ್ಲ ದಾರಿಗಳು ಕಲ್ಯಾಣದ ಕಡೆ ಬರುತ್ತಿದ್ದವು. ಬಸವಣ್ಣನವರ ಸಮಗ್ರ ಕ್ರಾಂತಿಯನ್ನು ನೋಡಲು ಜಗತ್ತಿನ ಎಲ್ಲ ಭಾಗಗಳಿಂದ ಶರಣರು ಕಲ್ಯಾಣಕ್ಕೆ ಆಗಮಿಸಿದರು. ಕಲ್ಯಾಣ ನೆಲದಲ್ಲಿ ಜಗತ್ತಿನ ಮೊದಲನೆಯ ಸಂಸತ್ತು ಎಂದು ಖ್ಯಾತಿ ಪಡೆದ ಅನುಭವಮಂಟಪ ರೂಪ ತಾಳಿತ್ತು. ಅರಿವು, ಆಚಾರ, ಅನುಭಾವ, ಕಾಯಕ, ದಾಸೋಹ ಮುಂತಾದ ಮೌಲ್ಯಗಳ ನಿಜಾಚರಣೆಯಿಂದ ಕಲ್ಯಾಣ ಕೈಲಾಸವಾಗಿ ಕಂಗೋಳಿಸಿತ್ತು. ಈ ವೈಭವ ಮತ್ತೊಮ್ಮೆ ಕಾಣುವ ಉದ್ದೇಶದಿಂದ ಕಲ್ಯಾಣ ದರ್ಶನ ಪ್ರವಚನ ಏರ್ಪಡಿಸಲಾಗಿದೆ ಎಂದು ಪೂಜ್ಯರು ಆಶೀರ್ವಚನ ನೀಡಿದರು. ಭಾಲ್ಕಿಯ ಪೂಜ್ಯಶ್ರೀ ಗುರುಬಸವ ಪಟ್ಟದ್ದೇವರು, ಹುಲಸೂರಿನ ಪೂಜ್ಯ ಶ್ರೀ ಡಾ.ಶಿವಾನಂದ ಮಹಾಸ್ವಾಮಿಗಳು



ಸಮ್ಮುಖ ವಹಿಸಿದ್ದರು. ಅತ್ತಿವೇರಿಯ ಪೂಜ್ಯ ಶ್ರೀ ಬಸವೇಶ್ವರಿ ಮಾತಾಜಿ ಅವರಿಂದ ಪ್ರವಚನ ನಡೆಯಿತು.

ನಿವೃತ್ತ ನ್ಯಾಯಾಧೀಶರಾದ ಸುಭಾಶಚಂದ್ರನಾಗರಾಳೆ ಅವರು ಉದ್ಘಾಟಿಸಿದರು. ಮಲ್ಲಿಕಾರ್ಜುನ ಚಿರಡೆ ಅವರಿಂದ ಬಸವ ಗುರು ಪೂಜೆ ನೆರವೇರಿಸಲಾಯಿತು. ಮುಖ್ಯ ಅತಿಥಿಗಳಾಗಿ ಸುಧೀರ ಕಾಡಾದಿ, ಗುರುನಾಥ ಗಡ್ಡೆ. ಪ್ರವಚನ ಸೇವಾ ಸಮಿತಿಯ ಅಧ್ಯಕ್ಷ ಜಗನ್ನಾಥ ಪತಂಗೆ ಸ್ವಾಗತಿಸಿದರು. ಚಂದ್ರಕಾಂತ ಅಕ್ಕಣ್ಣ ಶರಣು ಸಮರ್ಪಣೆ ಮಾಡಿದರು. ಅಂಬರೀಷ ಭಿಮಾಣಿ ನಿರೂಪಿಸಿದರು. ರಾಜಕುಮಾರ ಹೂಗಾರ ಅವರಿಂದ ವಚನ ಸಂಗೀತ ಜರುಗಿತು.

# ನವಜಾತ ಶಿಶುಗೆ ಕಾಂಗರೂ ಆರೈಕೆ ಪರಿಣಾಮಕಾರಿ: ಮಾಯಾಚಾರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ನವಜಾತ ಶಿಶುಗಳಿಗೆ ಕಾಂಗರೂ ಆರೈಕೆ ನೀಡುವುದರಿಂದ ಅವರ ಆರೋಗ್ಯ ವೃದ್ಧಿಸಬಲ್ಲದು ಜೊತೆಗೆ ಅವಧಿಗೂ ಮುನ್ನವೇ ಜನಿಸಿದ ಶಿಶುಗಳ ಮರಣ ಪ್ರಮಾಣ ಕಡಿಮೆ ಮಾಡಬಹುದು ಎಂದು ಶಿರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ನಿರೀಕ್ಷಣಾಧಿಕಾರಿ ಕೆ.ಎಫ್.ಮಾಯಾಚಾರಿ ಹೇಳಿದರು.

ಜಿಲ್ಲಾ ಆರೋಗ್ಯ ಇಲಾಖೆ ಹಾಗೂ ಶಿರೂರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದಲ್ಲಿ ಬಾಗಲಕೋಟೆ ತಾಲೂಕಿನ ನೀಲಾನಗರದಲ್ಲಿ ಗುರುವಾರ ಹಮ್ಮಿಕೊಂಡಿದ್ದ ನವಜಾತ ಶಿಶು ಆರೈಕೆ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿದರು.

ನವಜಾತ ಶಿಶು ಹಾಗೂ ತಾಯಿ ಮಧ್ಯದ ಆರಂಭಿಕ ಸಂಪರ್ಕ ಮಗುವಿನ ಭಾವನಾತ್ಮಕ ಮತ್ತು ಸಾಮಾಜಿಕ ಬೆಳವಣಿಗೆಗೆ ಅಡಿಪಾಯವಾಗಲಿದ್ದು, ಇದಕ್ಕೆ ಕಾಂಗರೂ ಮದರ್ ಕೇರ್ ಅತ್ಯಂತ ಪರಿಣಾಮಕಾರಿ ವಿಧಾನವಾಗಿದೆ ಎಂದ ಅವರು, ಪ್ರತಿಯೊಬ್ಬ ತಾಯಿ ಹೆರಿಗೆಯಾದ ಒಂದು ಗಂಟೆಯೊಳಗೆ ಮಗುವಿಗೆ ಎದೆ ಹಾಲು ಉಣಿಸಬೇಕು,

ಸಕಾಲಕ್ಕೆ ಲಸಿಕೆಗಳನ್ನು ಹಾಕಿಸುವ ಮೂಲಕ ಶಿಶುವಿನ ಆರೋಗ್ಯ ರಕ್ಷಣೆಯಲ್ಲಿ ಹೆಚ್ಚು ಕಾಳಜಿ ವಹಿಸಬೇಕು ಎಂದರು.

ಆರೋಗ್ಯ ಸುರಕ್ಷಣಾಧಿಕಾರಿ ಎಸ್.ಎಸ್.ಮೆಣಸಗಿ, ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಶಿಶು ಆರೈಕೆ, ಸ್ವಚ್ಛತೆ ಹಾಗೂ ಕಾಂಗರೂ ಮದರ್ ಕೇರ್ ಬಗ್ಗೆ ಮಾಹಿತಿ ನೀಡಿದರು.

ಗ್ರಾಪಂ ಮಾಜಿ ಉಪಾಧ್ಯಕ್ಷ ರಮೇಶ ಕುರಿಗಾರ ಅಧ್ಯಕ್ಷತೆ ವಹಿಸಿದ್ದರು. ಪಾಂಡಪ್ಪ ಕುರಿಗಾರ, ದೇವರಾಜ ಕಟ್ಟಿಮನಿ, ಹೇಮಪ್ಪ ಕುರಿಗಾರ, ರಮೇಶ ಗೌಡರ, ಕೃಷ್ಣಪ್ಪ ಕುರಿಗಾರ, ಆಶಾ ಕಾರ್ಯಕರ್ತರಾದ ಮಂಜುಳಾ ಕಟ್ಟಿಮನಿ, ಸುಮಿತ್ರಾ ಲಮಾಣಿ, ಸುಮಿತ್ರಾ ಪೂಜಾರಿ, ತಾಯಂದಿರು, ಬಾಣಂತಿಯರು ಪಾಲ್ಗೊಂಡಿದ್ದರು.

## ಮಾಸಿಕ ವಚನ ಮಂಟಪ, ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮ

# ಕನ್ನಡ ಶಾಲೆ ಉಳಿವಿಗೆ ಇಚ್ಛಾಶಕ್ತಿ ಅವಶ್ಯಕ ಸುರೇಶ ಚನಶೆಟ್ಟಿ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ಕನ್ನಡ ಶಾಲೆ ಉಳಿವಿಗೆ ಇಚ್ಛಾಶಕ್ತಿ ಅವಶ್ಯಕ ಎಂದು ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಅಧ್ಯಕ್ಷ ಸುರೇಶ ಚನಶೆಟ್ಟಿ ಹೇಳಿದರು.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಗರದ ಗಾಂಧಿಗಂಜ ಬಸವೇಶ್ವರ ದೇವಸ್ಥಾನದಲ್ಲಿ ಗುರುವಾರ ಸಂಜೆ ಆಯೋಜಿಸಿದ್ದ ಎಂಟನೇ ವಚನ ಮಂಟಪ, ಕರ್ನಾಟಕ ರಾಜ್ಯೋತ್ಸವ ಹಾಗೂ ಸಾಧಕರ ಸತ್ಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಶಾಲೆ ಉಳಿಸಿ, ಬೆಳೆಸುವ ಇಚ್ಛಾಶಕ್ತಿ ರಾಜಕಾರಣಿಗಳಲ್ಲಿ ಬೇಕು ಎಂದು ತಿಳಿಸಿದರು.

ಗಡಿ ಭಾಗದಲ್ಲಿ ಕನ್ನಡವನ್ನು ಸಮೃದ್ಧವಾಗಿ ಕಟ್ಟುವ ಹೊಣೆಗಾರಿಕೆ ಎಲ್ಲರ ಮೇಲಿದೆ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಭಾಲ್ಕಿ ಹಿರೇಮಠ ಸಂಸ್ಥಾನದ ಗುರುಬಸವ ಪಟ್ಟದ್ದೇವರು ಮಾತನಾಡಿ, ಈ ಭಾಗದಲ್ಲಿ ಕನ್ನಡದ ಉಳಿವಿಗೆ ಡಾ. ಚನ್ನಬಸವ ಪಟ್ಟದ್ದೇವರ ಕೊಡುಗೆ ಅಪಾರವಾಗಿದೆ. ಭಾಲ್ಕಿ ಹಿರೇಮಠ ಸಂಸ್ಥಾನ ಕನ್ನಡ ಕಾರ್ಯಗಳಿಗೆ ಸದಾ ಕಂಕಣಬದ್ಧವಾಗಿದೆ ಎಂದು ತಿಳಿಸಿದರು.

ನೇತೃತ್ವ ವಹಿಸಿದ್ದ ಹುಲಸೂರಿನ ಶಿವಾನಂದ ಸ್ವಾಮೀಜಿ ಮಾತನಾಡಿ, ಮಹಾಸಭಾ ಕರ್ನಾಟಕ ರಾಜ್ಯೋತ್ಸವ ಆಚರಿಸುತ್ತಿರುವುದು ಶ್ಲಾಘನೀಯ. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರ ಜವಾಬ್ದಾರಿ ಹೆಚ್ಚಾಗಿದ್ದು, ಕನ್ನಡ ನಾಡು, ನುಡಿ, ಸಾಹಿತ್ಯಕ್ಕೆ ಇನ್ನಷ್ಟು ಕೊಡುಗೆ ನೀಡಬೇಕು ಎಂದು ಸಲಹೆ ಮಾಡಿದರು.ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್ ಮಾತನಾಡಿ, ಪ್ರಸ್ತುತ ಯುವಕರು ದುಶ್ಚಟಗಳಿಗೆ ಬಲಿಯಾಗುತ್ತಿದ್ದು, ಮೊಬೈಲ್‌ನಲ್ಲಿ ವ್ಯರ್ಥ ಕಾಲಹರಣ ಮಾಡುತ್ತಿದ್ದಾರೆ. ಪಾಲಕರು ಅವರಿಗೆ ಸರಿಯಾದ ಮಾರ್ಗದರ್ಶನ ನೀಡಿ, ಉತ್ತಮ ಪ್ರಜೆಗಳನ್ನಾಗಿ ರೂಪಿಸಬೇಕಾಗಿದೆ ಎಂದು ತಿಳಿಸಿದರು.ಅಧ್ಯಕ್ಷತೆ ವಹಿಸಿದ್ದ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ



ಬಸವರಾಜ ಧನ್ನೂರ ಮಾತನಾಡಿ, ಸದ್ಯ ಹೆಚ್ಚಿನವರು ಕನ್ನಡ ಮಾತನಾಡುವಾಗ ಹೆಚ್ಚು ಇಂಗ್ಲಿಷ್ ಪದ ಬಳಸುತ್ತಿದ್ದಾರೆ. ಅಚ್ಚ ಕನ್ನಡದಲ್ಲಿ ಮಾತನಾಡಿದಾಗ ಮಾತ್ರ ಕನ್ನಡ ಉಳಿಯುತ್ತದೆ. ಕನ್ನಡ ಉಳಿದರೆ ವಚನಗಳು ಉಳಿಯುತ್ತವೆ ಎಂದು ಹೇಳಿದರು.

ಹಿರಿಯ ಪತ್ರಕರ್ತ ಸದಾನಂದ ಜೋಶಿ ಮಾತನಾಡಿದರು. ಸಾಹಿತಿ ಡಾ. ರೇಣುಕಾ ಎಂ. ಸ್ವಾಮಿ ವಿಶೇಷ ಉಪನ್ಯಾಸ ನೀಡಿದರು.ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಮಡಿವಾಳಯ್ಯ ಸಾಲಿ,

ಶಾಹೀನ್ ಶಿಕ್ಷಣ ಸಂಸ್ಥೆಗಳ ಸಮೂಹದ ಅಧ್ಯಕ್ಷ ಡಾ. ಅಬ್ದುಲ್ ಖದೀರ್, ಪತ್ರಕರ್ತ ಸದಾನಂದ ಜೋಶಿ, ಜಿಲ್ಲಾಮಟ್ಟದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಧನರಾಜ ದಶರಥ, ಶ್ರೀಕಾಂತ ಭವಾನಿ, ಬಸವಚೇತನ ವೈಜಿನಾಥ, ಸಿದ್ರಾಮ ಶಂಕರೆಪ್ಪ, ಸೈಯದ್ ಮುಜೀಬ್ ಅಹಮ್ಮದ್, ಶಿವಕುಮಾರ ತುಂಗಾ, ಲೋಕೇಶ ಪ್ರಭುಶೆಟ್ಟಿ, ಸ್ವರೂಪರಾಣಿ ಪಾಟೀಲ, ಡಾ. ಸುನೀತಾ ಕೂಡ್ಲಿಕರ್, ಡಾ. ಶ್ರೇಯಾ ಮಹೇಂದ್ರಕರ್, ಮಲ್ಲಮ್ಮ ಮಾಧವರಾವ್, ರಾಮಯ್ಯ ರಾಮಚಂದ್ರ, ಬಸಪ್ಪ ಭದಾಡೆ, ಅರ್ಜುನರಾವ್ ಕಾಂಚೆ, ಅನಿಲಕುಮಾರ ದೇಶಮುಖ, ಶ್ರಾವಣಕುಮಾರ ಮೇತ್ರೆ ಅವರನ್ನು ಸನ್ಮಾನಿಸಲಾಯಿತು.

ಸ್ವರ್ಣ ಕನ್ಸ್ಟ್ರಕ್ಷನ್ಸ್ ಮುಖ್ಯಸ್ಥ ವೀರಶೆಟ್ಟಿ ಮಣಗೆ, ಕನ್ನಡಾಂಬೆ ಗೆಳೆಯರ ಬಳಗದ ಅಧ್ಯಕ್ಷ ವಿರೂಪಾಕ್ಷ ಗಾದಗಿ, ವಚನ ಚಾರಿಟಬಲ್ ಸೋಸೈಟಿ ಅಧ್ಯಕ್ಷ ಶಿವಶಂಕರ ಟೋಕರೆ, ರಾಷ್ಟ್ರೀಯ ಬಸವ ದಳದ ನಗರ ಘಟಕದ ಪ್ರಧಾನ ಕಾರ್ಯದರ್ಶಿ ವೀರಶೆಟ್ಟಿ ಪಾಟೀಲ ಮರಕಲ್, ಪ್ರಮುಖರಾದ ರಾಜೇಂದ್ರ ಜೊನ್ನಿಕೇರಿ, ಜೈರಾಜ ಖಂಡ್ರೆ, ಉಷಾ ಮಿರ್ಚೆ, ವೀರಭದ್ರಪ್ಪ ಬುಯ್ಯಾ, ವಿಜಯಕುಮಾರ ಸೋನಾರೆ ಮತ್ತಿತರರು ಉಪಸ್ಥಿತರಿದ್ದರು.

ಕಲಾವಿದ ಶಿವಕುಮಾರ ಪಾಂಚಾಳ ನಾಡಗೀತೆ ಹಾಡಿದರು. ಬಾಬುರಾವ್ ದಾನಿ ಸ್ವಾಗತಿಸಿದರು. ಯೋಗೇಂದ್ರ ಯದಲಾಪುರೆ ನಿರೂಪಿಸಿದರು. ಜಯದೇವಿ ಯದಲಾಪುರೆ ವಂದಿಸಿದರು.

ಸಿದ್ದೇಶ್ವರ ಪಿಕೆಪಿಎಸ್ ಅಧ್ಯಕ್ಷೆ ಶಾಂತಾ ಜೈರಾಜ ಖಂಡ್ರೆ ಭಕ್ತಿ ದಾಸೋಹಗೈದರು.

# ನೌಕರರು ಸಮಾಜದ ಏಳಿಗೆಗಾಗಿ ಸಹಕರಿಸಿ ರತ್ನಕಾಂತ ಮಹಾಶಿವಯೋಗಿಗಳು



ಮಲ್ಲಮ್ಮ ನುಡಿ ವಾರ್ತೆ

**ಬಸವಕಲ್ಯಾಣ:** ಇಲ್ಲಿನ ಬಂಗ್ಲಾ ಹತ್ತಿರವಿರುವ ನಿಜಶರಣ ಅಂಬಿಗರ ಚೌಡಯ್ಯ ಜಾಗೃತಿ ಆಶ್ರಮದಲ್ಲಿ ನಡೆದ ಜಿಲ್ಲೆಯ ಟೋಕರೆ ಕೋಳಿ ಸಮಾಜದ ಸರಕಾರಿ ನೌಕರರ ಸಂಘದ ಪದಾಧಿಕಾರಿಗಳ ಸನ್ಮಾನ ಸಮಾರಂಭದ ಕಾರ್ಯಕ್ರಮದಲ್ಲಿ ಆಶ್ರಮದ ಪೀಠಾಧಿಪತಿಗಳಾದ ಪೂಜ್ಯಶ್ರೀ ಗುರು ರತ್ನಕಾಂತ ಮಹಾಶಿವಯೋಗಿಗಳು ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ಸರಕಾರಿ ನೌಕರರ ಪಾತ್ರ ಸಮಾಜದ ಅಭಿವೃದ್ಧಿಯಲ್ಲಿ ಅತಿ ಮಹತ್ವದಾಗಿದೆ. ನಿಮ್ಮ ಕರ್ತವ್ಯದ ಜೊತೆಗೆ ಸಮಾಜ ಕಾರ್ಯಕ್ಕೂ ಸಮಯ ಕೊಡಿ. ಯಾವುದೇ ಸಮಾಜದ ಏಳಿಗೆಯಲ್ಲಿ ಸುಶಿಕ್ಷಿತರು ಮುಖ್ಯರಾಗುತ್ತಾರೆ. ಹೀಗಾಗಿ ಸರಕಾರಿ ನೌಕರರು ಶಿಕ್ಷಣದ ಜೊತೆಗೆ ಆರ್ಥಿಕ ಸಬಲತೆಯೂ ಹೊಂದಿರುವ ಪ್ರಯುಕ್ತ ಅವರು ಮನಸು ಮಾಡಿದರೆ ಸಮಾಜಕ್ಕೆ ಸೂಕ್ತ ಮಾರ್ಗದರ್ಶನ ನೀಡಬಹುದು. ಅಲ್ಲದೇ ಯಾವುದೇ ಸಮಾಜ ಪ್ರಗತಿ ಸಾಧಿಸಲು ಶಿಕ್ಷಣ ಅತಿ ಮುಖ್ಯ, ಜೊತೆಗೆ ಉತ್ತಮ ಸಂಸ್ಕಾರವು ಬೇಕು. ಎಲ್ಲಕಿಂತ ಮುಖ್ಯವಾಗಿ ದುಶ್ಚಟಗಳಿಂದ ದೂರವಿದ್ದಾಗ ಸಹಜವಾಗಿ ಸಮಾಜದ ಅಭಿವೃದ್ಧಿ ಸಾಧ್ಯ ಎಂದರು.

ತಾಲೂಕು ಟೋಕರಿ ಕೋಳಿ ಸಮಾಜ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರು ಹಾಗೂ ಜಿಲ್ಲಾ ಗೌರವಧ್ಯಕ್ಷರಾದ ಚನ್ನವೀರ ಎಸ್.ಜಮಾದಾರ ಪ್ರಸ್ತಾವಿಕ ಮಾತನಾಡಿ ಸಮಾಜದ ಪ್ರಗತಿಗೆ ವಿದ್ಯಾವಂತರಾಗುವದು ಅವಶ್ಯ,ಮಕ್ಕಳಿಗೆ ಉತ್ತಮ ಶಿಕ್ಷಣ,ಶಿಸ್ತು ಹಾಗೂ ಸಂಸ್ಕಾರಸ ಕೊಡಬೇಕು ಬೇಡಿಕೆಗಳ ಈಡೇರಿಕೆಗೆ ಸಂಘಟೀತರಾಗಿ, ಸಮಾಜಕ್ಕಾಗಿ ನೌಕರರು ಸಮಯ ಕೊಡಿರಿ, ನಿಮ್ಮ ಸಹಾಯ ಹಾಗೂ ಸಹಕಾರ ನಿರಂತರವಾಗಿದ್ದರೆ, ನಾನು ರಾತ್ರಿ ಹಗಲು ಸಮಾಜಕ್ಕಾಗಿ ದುಡಿಯಲು ಸಿದ್ದನಿರ್ದ್ದೇನೆ. ನಿಜಶರಣ ಅಂಬಿಗರ ಚೌಡಯ್ಯ ಜಾಗೃತಿ ಆಶ್ರಮದ ಮೂಲಕ ಜಾಗೃತಿ ಕಾರ್ಯ ಕೈಗೊಳ್ಳಲಾಗುತ್ತಿದೆ. ಇದರಲ್ಲಿ ನಮ್ಮ ನೌಕರರ ಸಂಘವು ಸಕ್ರಿಯವಾಗಿ ಭಾಗವಹಿಸುತ್ತಿದೆ. ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗುರ್ತಿಸಿ ಸನ್ಮಾನಿಸಿ, ಗೌರವಿಸಿ, ಪ್ರೋತ್ಸಾಹಿಸುವ ಕೆಲಸ ನಿರಂತರವಾಗಿ ಮಾಡಲಾಗುತ್ತದೆ. ಮೂಡನಂಬಿಕೆಯಿಂದಲೂ ಸಮಾಜ ಹೊರಬರಬೇಕಾಗಿದೆ. ಇತ್ತೀಚಿನ ದಿನಗಳಲ್ಲಿ ಸಂಘದ ಚಟುವಟಿಕೆಗಳು ಬಹಳ ಉತ್ತಮ್ಮವಾಗಿ ನಡೆಯುತ್ತಿವೆ ಎಂದು ತಿಳಿಸಿದರು.

ನಾಗನಾಥ ಎಸ್. ಚಾಮಾಲೆ ಚೌಡಯ್ಯ ಟ್ರಸ್ಟನ ಅಧ್ಯಕ್ಷರಾದ ಅಧ್ಯಕ್ಷತೆ ವಹಿಸಿದರು. ಮುಖ್ಯ ಅಥಿತಿಗಳಾಗಿ ನಾರಂಜಾ ಸಕ್ಕರೆ ಕಾರ್ಖಾನೆ ನಿರ್ದೇಶಕರಾದ ವಿಜಯಕುಮಾರ ಪಾಟೀಲ. ಮಾಜಿ ನಗರ ಸಭೆ ಸದಸ್ಯರಾದ ಮಲ್ಲಿಕಾರ್ಜುನ ಎಸ್.ಬೊಕ್ಕೆ. ,ಹಿರಿಯರಾದ ಸನ್ಮುಕಪ್ಪ ಬೊಕ್ಕೆ, ಸಮಾಜ ನೌಕರರ ಸಂಘದ ಬೀದರ ಜಿಲ್ಲಾಧ್ಯಕ್ಷರಾದ ರಾಜಕುಮಾರ ಕರಣೆ, ಉಪಾಧ್ಯಕ್ಷರಾದ ತುಕಾರಾಮ ಯಾತಪ್ಪ, ಗೋವಿಂದ ಗುರೂಜೀ, ಪ್ರಧಾನ ಕಾರ್ಯದರ್ಶಿ ಪ್ರಕಾಶ ಬಾಪಾನೂರ್, ಬೀದರ ತಾಲೂಕು ಅಧ್ಯಕ್ಷ ಅಂಬರೀಶ ಜಮಾದಾರ, ಭಾಲ್ಕಿ ಅಧ್ಯಕ್ಷ ಪ್ರಭು ಸಿರ್ಸಿಕರ್, ಚಿಟ್ಟಗುಪ್ಪ ಅಧ್ಯಕ್ಷ ರವೀಂದ್ರ ಘರ್ಲೆ, ಕಮಲನಗರ ಅಧ್ಯಕ್ಷ ಧೂಳಪ್ಪ ನಿಟ್ಟೂರೆ, ಬೀದರನ ನಾಗಪ್ಪ, ರಘುನಾಥ, ಕಾಶೀನಾಥ, ಕಮಲನಗರನ ಮಾರುತಿ ಕೋಳಿ, ಸಂತೋಷ ಟೋಕರೆ, ಭಾಲ್ಕಿಯ ಉಮಾಕಾಂತ ಕುಂಟೆ, ಮೋಹನ್, ವಿಠಲ, ರಾಜೇಂದ್ರ ಜಮಾದಾರ, ಚಿಟ್ಟಗುಪ್ಪಾದ ರವೀಂದರ ಅರ್ಕಿ. ವಿಜಯಕುಮಾರ ಜಮಾದಾರ, ಹಣಮಂತ ಜಮಾದಾರ, ಪುಂಡಲಿಕ ಬೊಕ್ಕೆ, ಅಪ್ಪಾರಾವ ಚಿಂತಾಲೆ, ಅಪ್ಪಣ್ಣ ಭಂಡಾರಿ, ಸಾಗರ ಬೊಕ್ಕೆ, ವೆಂಕಟ ಚಿಟ್ಟಮಪಲ್ಲೇ, ಅಣ್ಣೆಪ್ಪ, ಬಾಲಾಜಿ, ಮಂಜುನಾಥ ಜಮಾದಾರ, ವಾಲ್ಮೀಕ, ಗೋಪಾಲ ಮುಂತಾದ ಪದಾಧಿಕಾರಿಗಳು ಉಪಸ್ಥಿತರಿದ್ದರು. ಆಶ್ರಮದ ಭಕ್ತರು ಸೇರಿದಂತೆ ಅನೇಕ ಜನ ಭಾಗವಹಿಸಿದರು.

ಪ್ರಧಾನ ಕಾರ್ಯದರ್ಶಿ ತುಕಾರಾಮ ಕೆ.ರೊಡ್ಡೆ ನಿರೂಪಿಸಿದರು. ಅಂಬಣ್ಣ ಉದ್ರೆ ವಂದಿಸಿದರು.

# ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ವಿಭಾಗದಲ್ಲಿ ಬರುವ ಹುಸೇನ್ ಗಾರ್ಡನ್ ಫೀಡರ್ ವ್ಯಾಪ್ತಿಯ ಹುಸೇನ್ ಗಾರ್ಡನ್ ಇಕ್ಬಾಲ್ ಗಾರ್ಡನ್ ಸಾಬ್ರಿನ ಮಸೀದಿ ಪ್ರದೇಶ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಿರ್ವಹಣಾ ಕಾರ್ಯಕೈಗೊಳ್ಳುವ ಪ್ರಯುಕ್ತ ಇದೇ ನವೆಂಬರ್ 23ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಜೆಸ್ಕಾಂನೊಂದಿಗೆ ಸಹಕರಿಸುವಂತೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು(ವಿ)ಪ್ರಕಟಣೆಯಲ್ಲಿ ಕೋರಿದ್ದಾರೆ.

# ಡಿಸಿಸಿ ಬ್ಯಾಂಕಿನ ನೂತನ ಅಧ್ಯಕ್ಷ ವಿಠಲ್ ಯಾದವ್ ಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

**ಯಾದಗಿರಿ :** ಕಲಬುರಗಿ: ಯಾದಗಿರಿ ಜಿಲ್ಲಾ ಸಹಕಾರ ಬ್ಯಾಂಕಿನ (ಡಿಸಿಸಿ) ನೂತನ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಯಾದವ್ ಸಮಾಜದ ರಾಜ್ಯ ನಾಯಕ ವಿಠಲ್ ಯಾದವ್ ಅವರು ರೈತ, ಕೃಷಿ, ಕಾರ್ಮಿಕರ ಸಮಸ್ಯೆಗಳಿಗೆ ಸ್ಪಂದಿಸುವವರಾಗಿದ್ದಾರೆಂದು ಜಿಲ್ಲಾ ಯಾದವ್ ಸಮಾಜದ ಅಧ್ಯಕ್ಷ ತಾಯಪ್ಪ ಯಾದವ್ ಹೇಳಿದರು.

ಶುಕ್ರವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಆಯ್ಕೆಯಾದ ವಿಠಲ್ ಅವರನ್ನು ಸನ್ಮಾನಿಸಿ ತಾಯಪ್ಪ ಮಾತನಾಡಿದರು. ಬರುವ ದಿನಗಳಲ್ಲಿ ಇನ್ನಷ್ಟು ಒಳ್ಳೆಯ ಕೆಲಸಗಳು ಆಗಲಿ ಎಂದರು.

ಈ ಸಂದರ್ಭದಲ್ಲಿ ಈ ಸಂದರ್ಭದಲ್ಲಿ ಸುಭಾಷ್ ಯಾದವ್ ಬದೆಪಲ್ಲಿ ಮಹೇಶ್ ಯಾದವ್ ಪ್ರಕಾಶ್ ಯಾದವ್, ಲಕ್ಷ್ಮಣ್ ಶಾಹಪುರ ಇದ್ದರು.

# ಸಚಿವರಾದ.ಬೋಸರಾಜು ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ


ರಾಯಚೂರು: ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ನವೆಂಬರ್ 23ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.ನವೆಂಬರ್ 23ರ ಬೆಳಿಗ್ಗೆ 10.30ಕ್ಕೆ ರಾಯಚೂರು ನಗರದಿಂದ ನಿರ್ಗಮಿಸಿ ಮಧ್ಯಾಹ್ನ 12 ಗಂಟೆಗೆ ಕವಿತಾಳಗೆ ತೆರಳಿ ಸ್ಥಳೀಯ ಕಾರ್ಯಕ್ರಮದಲ್ಲಿ ಭಾಗಿಯಾಗುವರು. ಮಧ್ಯಾಹ್ನ 2 ಗಂಟೆಗೆ ಕವಿತಾಳದಿಂದ ನಿರ್ಗಮಿಸಿ ರಾಯಚೂರು ನಗರಕ್ಕೆ ಆಗಮಿಸಿ ಸಂಜೆ 4 ಗಂಟೆಗೆ ನಡೆಯುವ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ಬಳಿಕ ರಾತ್ರಿ 9.40ಕ್ಕೆ ರಾಯಚೂರಿನಿಂದ ಎಸ್.ಬಿ.ಸಿ. ರಾಜಧಾನಿ ಎಕ್ಸಪ್ರೆಸ್ ರೈಲಿನ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳಾದ ವೀರಭದ್ರ ಹಂಚಿನಾಳ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 17ನೇ ಸಂಸ್ಥಾಪನಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು: ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 17ನೇ ಸಂಸ್ಥಾಪನಾ ದಿನಾಚರಣೆಯ ಕಾರ್ಯಕ್ರಮವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಶ್ರೀ ಜಗಜ್ಯೋತಿ ಬಸವೇಶ್ವರ ಪ್ರೇಕ್ಷಾಗೃಹದಲ್ಲಿ ನವೆಂಬರ್ 22 ರಂದು ಶನಿವಾರ ಬೆಳಿಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ.ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀನಿವಾಸುಲು ಐ.ಎಫ್.ಎಸ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಎಂ. ಹನುಮಂತಪ್ಪ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.ಕಾರ್ಯಕ್ರಮದ ಘನ ಉಪಸ್ಥಿತಿಯನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿಯ ಗೌರವಾನ್ವಿತ ಸದಸ್ಯರು ಹಾಗೂ ಇನ್ನಿತರರು ಭಾಗಿಯಾಗುವರು ಎಂದು ಪ್ರಕಟಣೆ ತಿಳಿಸಿದೆ.

# ಅನಾಥವಾದ ವಾರ್ಡ ಸಂ. 41 ?



ಮಲ್ಲಮ್ಮ ನುಡಿ ವಾರ್ತೆ

**ಕಲಬುರಗಿ:** ಕಲಬುರಗಿ ಮಹಾನಗರ ಪಾಲಿಕೆ ವಾರ್ಡ ನಂ. 41 ಪಟೇಲ್ ಕಾಲೋನಿಯು ಅನಾಥವಾಗಿದೆ ಎಂದು ಹೇಳಿದರೆ ತಪ್ಪಲ್ಲ ಈ ವಾರ್ಡಗೆ ಕೆಳುವವರು ಯಾರು ಇಲ್ಲಾ ನೋಡುವವರು ಯಾರು ಇಲ್ಲಾ ದಕ್ಷಿಣ ಮತಕ್ಷೇತ್ರದ ಶಾಸಕರು ನಮಗೆ 41 ವಾರ್ಡ ಬರುವುದಿಲ್ಲ ಎಂದು ಹಾರೈಕೆ ಉತ್ತರ ಕೊಟ್ಟು ಕೈ ತೊಳೆದುಕೋಳ್ಳುತ್ತಾರೆ. ಅದೆರೀತಿ ಉತ್ತರ ಶಾಸಕರು ನಮಗೆ ಬರೋದಿಲ್ಲ ಎಂದು ಹಾರೈಕೆ ಉತ್ತರ ಕೊಡುತ್ತಿದ್ದು ಹಾಗದರೆ ಈ ವಾರ್ಡ ಯಾರಿಗೆ ಬರೊದು ಅಂತ 41ವಾರ್ಡನ ಜನರ ಅಹವಾಲಾಗಿದೆ. ಸುಮಾರು ವರ್ಷಗಳಿಂದ ಬಡವಣೆಯ ಜನರೆ ದುಡ್ಡು ಕೊಟ್ಟು ಮೂರುಮ ಹಾಕಿ ರೋಡ ಮಾಡಿದ್ದಾರೆ.

ಮಳೆ ನೀರು ಮತ್ತು ಎಲ್ ಅ್ಯಂಡ ಟಿ ಕಂಪನಿಯವರು ಮೇನ್ ಪೈಪಲೈನ್ ಒಡೆದು ನಡೆದಾಡಲು ಉಪಯೋಗಕ್ಕೆ ಬರದಂತೆ ಆಗಿದೆ. ಒಂದು ರೀತಿಯಲ್ಲಿ ಅನಾಥವಾಗಿ ಬಿದ್ದಿರುವ 41 ವಾರ್ಡ ಆಗಿದೆ ಎಲ್ ಅ್ಯಂಡ ಟಿ ಕಂಪನಿಯವರ ಪೈಪಲೈನ್ ಒಡೆದು ಸುಮಾರು ದಿನಗಳ ಆದ್ರು ನೋಡ್ತಾ ಇಲ್ಲಾ ಜನರು ಕೇಳಿದ್ದರೆ ಇವತ್ತು ನಾಳೆ ಮಾಡಿಸುತ್ತೆವೆ ಎಂದು ಹೇಳಿ ಹೊಗ್ತಾರೆ ಅಷ್ಟೆ ರೋಡ ಕೆಳಗಡೆ ವಿದ್ಯುತ್ ವೈರುಗಳು ಹೊಗಿದ್ದು ನೀರು ವಿದ್ಯುತ್ ಪೈಪ ಒಳಗೆ ಹೊದರೆ ಎಲ್ಲ ಕಡೆ ವಿದ್ಯುತ್ ಹರಡುವ ಭಯ ಜನರಲ್ಲಿ ಕಾಡುತ್ತಿದ್ದೆ. ವಿದ್ಯುತ್ ಎಲ್ಲ ಕಡೆ ಹರಿದಾಡಿ ಸತ್ತಮೆಲೆಯಾದರು ಶಾಸಕರು ಕಣ್ಣು ಹಾಯಿಸುತ್ತಾರೊ ಏನು ಅಂತ ಜನ ಸಾಮಾನ್ಯರ ಸಮಸ್ಯ ಆಗಿದೆ. ಮಹಾನಗರ ಪಾಲಿಕೆ ಸದಸ್ಯರಾದರು ಈ ವಾರ್ಡಗೆ ಪೈಪಲೈನ್ ಸರಿಪಡಿಸಿ ಸಿಸಿ ರೋಡ ಮಾಡಿ ದಯ ತೋರಬೆಕೆಂದು ಜನರ ಅಹವಾಲಾಗಿದೆ.

# ದಾಖಲಾಗಿರುವ ಪ್ರಕರಣಗಳ ದಂಡ ಶೇ.50 ರಷ್ಟು ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

**ಬಳ್ಳಾರಿ:** ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕೋರಿಕೆಯ ಮೇರೆಗೆ ರಾಜ್ಯ ಸರ್ಕಾರವು ಪೊಲೀಸ್ ಇಲಾಖೆಯ ಪೊಲೀಸ್ ಇಲಾಖೆಯ ಸಂಚಾರಿ ಇ–ಚಲನ್ ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳು ಹಾಗೂ ಸಾರಿಗೆ ಇಲಾಖೆಯಲ್ಲಿ 1991–92 ರಿಂದ 2019–20 ರ ಅವಧಿಯಲ್ಲಿ ದಾಖಲಾಗಿ ಪಾವತಿಗೆ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿದ್ದು,

ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ.

ಡಿಸೆಂಬರ್ 12 ರ ವರೆಗೆ ಈ ರಿಯಾಯಿತಿ ಸೌಲಭ್ಯವು ಇರಲಿದ್ದು, ಡಿಸೆಂಬರ್ 13ರಂದು ನಡೆಯಲಿರುವ ರಾಷ್ಟ್ರೀಯ ಲೋಕ್ ಅದಾಲತ್ ಪ್ರಯುಕ್ತ ಈ ರಿಯಾಯಿತಿ ನೀಡಲಾಗಿದೆ. ಹಾಗಾಗಿ ಸಾರ್ವಜನಿಕರು ಈ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಗಳೊಳ್ಳಿಯಲ್ಲಿ ವಿಶ್ವ ಶೌಚಾಲಯ ದಿನಾಚರಣೆ ಶೌಚಾಲಯ ಬಳಕೆ ರೋಗಮುಕ್ತದ ಸಂಕೇತ



ಮಲ್ಲಮ್ಮ ನುಡಿ ವಾರ್ತೆ

**ಬಾಗಲಕೋಟೆ:** ಶೌಚಾಲಯ ಬಳಕೆ ಗೌರವದ ವಿಷಯವಾಗಿದ್ದು, ಸುರಕ್ಷತೆ ಮತ್ತು ರೋಗಮುಕ್ತ ಗ್ರಾಮದ ಸಂಕೇತವಾಗಿದೆ ಎಂದು ಮುಗಳೊಳ್ಳಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಆರ್.ಎಚ್.ನದಾಫ ಹೇಳಿದರು.

ತಾಲೂಕಿನ ಮುಗಳೊಳ್ಳಿ ಗ್ರಾಮದಲ್ಲಿ ಸ್ಥಳೀಯ ಗ್ರಾಮ ಪಂಚಾಯತಿ ಹಾಗೂ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರೌಢಶಾಲಾ ವಿಭಾಗದ ಸಹಯೋಗದಲ್ಲಿ ಗುರುವಾರ ಜರುಗಿದ ವಿಶ್ವಶೌಚಾಲಯ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬಯಲು ಶೌಚಮುಕ್ತ ಭಾರತ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಶೌಚಾಲಯ ಬಳಸಿ ನೈರ್ಮಲ್ಯಕ್ಕೆ ಆದ್ಯತೆ ನೀಡಬೇಕು ಎಂದ ನದಾಫ, ಪ್ರತಿಯೊಬ್ಬ ಪ್ರಜೆ ಈ ಸಂಬಂಧ ಸಂಕಲ್ಪ ತೊಡಬೇಕಿದೆ ಎಂದು ಹೇಳಿದರು.

ಬಾಗಲಕೋಟೆ ಜಿಲ್ಲಾ ಪಂಚಾಯತ ಐಇಸಿ ಸಮಾಲೋಚಕಿ ಕಾವೇರಿ ಜಂಡೆ ಮಾತನಾಡಿ, ಪರಿಸರ ರಕ್ಷಣೆಯ ಹೊಣೆ ಪ್ರತಿಯೊಬ್ಬರದಾಗಿದ್ದು, ಬಯಲು ಶೌಚಮುಕ್ತ ಗ್ರಾಮವನ್ನಾಗಿಸಲು ಎಲ್ಲರೂ ಶೌಚಾಲಯ ಬಳಕೆ ಮಾಡುವುದು ಅಗತ್ಯವಾಗಿದೆ ಎಂದು ಹೇಳಿ, ಪ್ರತಿಜ್ಞಾವಿಧಿ ಬೋಧಿಸಿದರು.

ಗ್ರಾಪಂ ಸದಸ್ಯ ಬ್ರಹ್ಮಲಿಂಗ ತಳವಾರ ಕಾರ್ಯಕ್ರಮ ಉದ್ಘಾಟಿಸಿದರು. ಇನ್ನೋರ್ವ ಸದಸ್ಯ ಸಂಗಮೇಶ ಕಟಗೇರಿ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕ ಪಬ್ಲಿಕ್ ಶಾಲೆಯ ಉಪಪ್ರಾಂಶುಪಾಲ ಎ.ಬಿ.ಪಾಟೀಲ, ಆರೋಗ್ಯ ಇಲಾಖೆಯ ಗಣಾಚಾರಿ ಹಾಗೂ ಎಸ್.ಬಿ.ಕೋಟಿ, ಸೋಮಸಿಂಗ ಲಮಾಣಿ ಅತಿಥಿಗಳಾಗಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)